24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 107 | ನವದೆಹಲಿ | ಬೆಲೆ ₹10 | ಅಕ್ಟೋಬರ್, 13, 2026, ಮಂಗಳವಾರ



24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

ಅಕ್ಟೋಬರ್, 13, 2026, ಮಂಗಳವಾರ

## ಒಳಪುಟಗಳಲ್ಲಿ



ಸಿಇಸಿ ವಿರುದ್ಧದ ಕಾದಾಟಕ್ಕೆ ಸುಪ್ರೀಂ ಎಳೆದು ತರಬೇಡಿ - ಪು4

## ಸೇನೆಗೆ 1.25 ಲಕ್ಷ ಮೆಟ್ರಿಕ್ ಟನ್ ಅಕ್ಕಿ ಮೀಸಲು

* ಭಾರತೀಯ ಯೋಧರಿಗೆ ಗುಣಮಟ್ಟದ ಭಾರತ್ ರೈಸ್
* ಪ್ರಲ್ಹಾದ ಜೋಶಿ-ರಾಜನಾಥಸಿಂಗ್ ಸಮ್ಮುಖದಲ್ಲಿ ಅಕ್ಕಿ ಬಿಡುಗಡೆ




ನವದೆಹಲಿ, ಅ.12: ಭಾರತೀಯ ಸೇನೆಗಾಗಿ ಆಹಾರ ಇಲಾಖೆ 1.25 ಲಕ್ಷ ಮೆಟ್ರಿಕ್ ಟನ್ ಅಕ್ಕಿಯನ್ನು ಪ್ರತ್ಯೇಕವಾಗಿ ಮೀಸಲಿರಿಸಿದೆ ಎಂದು ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ಹೇಳಿದರು.

ದೆಹಲಿಯಲ್ಲಿ ಸೋಮವಾರ ರಕ್ಷಣಾ ಸಚಿವ ರಾಜನಾಥಸಿಂಗ್ ಅವರ ಸಮ್ಮುಖದಲ್ಲಿ ಭಾರತೀಯ ಸೇನೆಗಾಗಿ ಉತ್ತಮ ಗುಣಮಟ್ಟದ ಭಾರತ್ ರೈಸ್ ಪೂರೈಕೆ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು.

ನಾಫೆಡ್ ಜತೆಗಿನ ಸಾಂಸ್ಥಿಕ ವ್ಯವಸ್ಥೆ ಮೂಲಕ ಭಾರತೀಯ ಸೇನೆಗೆ ಗುಣಮಟ್ಟದ ಆಹಾರ ಪೂರೈಸಲು ಆಹಾರ ಇಲಾಖೆ ಬದ್ಧವಾಗಿದ್ದು, ಈ ನಿಟ್ಟಿನಲ್ಲಿ ಇಲಾಖೆ ಕಾರ್ಯೋನ್ಮುಖವಾಗಿದೆ ಎಂದರು.

ನಮ್ಮ ಯೋಧರಿಗಾಗಿಯೇ ಆಹಾರ ಇಲಾಖೆಯಿಂದ 1.25 ಲಕ್ಷ ಮೆಟ್ರಿಕ್ ಟನ್ ಅಕ್ಕಿಯನ್ನು ಪ್ರತ್ಯೇಕವಾಗಿ ಮೀಸಲಿಟ್ಟಿದೆ. ಮುಖ್ಯವಾಗಿ ಗುಣಮಟ್ಟದ ಅಕ್ಕಿ ಪೂರೈಕೆಗೆ ಆದ್ಯತೆ ನೀಡಲಾಗಿದೆ. ಭಾರತ್ ರೈಸ್' ಮಾನದಂಡಗಳಿಗೆ ಅನುಗುಣವಾಗಿ ಗರಿಷ್ಠ ಶೇ.5ರಷ್ಟು ಮಾತ್ರ ಒಡೆದ ಅಕ್ಕಿಯಿರುವ, ನಿಗದಿತ ಗುಣಮಟ್ಟದ ಆಹಾರ ಲಭ್ಯವಾಗುವುದನ್ನು ಖಚಿತಪಡಿಸುತ್ತದೆ ಎಂದು ಹೇಳಿದರು.

ಒಪ್ಪಂದಕ್ಕೆ ಸಹಿ: ಕಾರ್ಯಾಚರಣೆಗಳ ತುರ್ತು ಸಂದರ್ಭಗಳಲ್ಲಿ ನಮ್ಮ ಸೈನಿಕರಿಗೆ ಆಹಾರ ಪೂರೈಕೆಯನ್ನು ಖಾತ್ರಿಪಡಿಸಲು ಭಾರತೀಯ ಸೇನೆ ಹಾಗೂ ಭಾರತೀಯ ಆಹಾರ ನಿಗಮ ಈಅಖ ನಡುವೆ ತಿಳಿವಳಿಕೆ ಒಪ್ಪಂದಕ್ಕೆ ಸಹ ಇದೇ ಸಂದರ್ಭದಲ್ಲಿ, ಸಚಿವದ್ವಯರ ಸಮ್ಮುಖದಲ್ಲಿ ಸಹಿ ಹಾಕಲಾಯಿತು.

# ರಾಜೀನಾಮೆ ನೀಡಿ, ಮಾಫಿಸಾಕ್ಷಿಯಾಗಿ: ಜ್ಞಾನೇಶ್ ಕುಮಾರ್‌ಗೆ ರಾಹುಲ್ ಎಚ್ಚರಿಕೆ

## ಚಲೋ ದೆಹಲಿ-ಪ್ರಜಾಪ್ರಭುತ್ವಕ್ಕಾಗಿ ಮೆರವಣಿಗೆಯಲ್ಲಿ ಇಂಡಿಯಾ ಒಕ್ಕೂಟ ಪಕ್ಷಗಳ ನಾಯಕರು ಭಾಗಿ

**ನವದೆಹಲಿ, ಅ.12: ಸಿಇಸಿ ಜ್ಞಾನೇಶ್‌ಕುಮಾರ್ ರಾಜೀನಾಮೆ ಆಗ್ರಹಿಸಿ ಕಾಂಗ್ರೆಸ್ ನೇತೃತ್ವದ ಇಂಡಿಯಾ ಒಕ್ಕೂಟ ನವದೆಹಲಿಯಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಇಂಡಿಯಾ ಮೈತ್ರಿಕೂಟದ ಬ್ಯಾನರ್ ಅಡಿಯಲ್ಲಿ ಚಲೋ ದೆಹಲಿ – ಪ್ರಜಾಪ್ರಭುತ್ವಕ್ಕಾಗಿ ಮೆರವಣಿಗೆಯಲ್ಲಿ ವಿಪಕ್ಷಗಳ ನಾಯಕರು, ಕಾರ್ಯಕರ್ತರು ಸೇರಿ ಸಾವಿರಾರು ಮಂದಿ ಜಮಾಯಿಸಿದ್ದರು.**

ಕನಾಟ್‌ಪ್ಲೇಸ್ ಮತ್ತು ಮಂಡಿಹೌಸ್ ನಡುವಿನ ಪ್ರದೇಶವು ಪ್ರತಿಭಟನಾಕಾರರಿಂದ ತುಂಬಿಹೋಗಿತ್ತು, ಮತ್ತು ರಾಷ್ಟ್ರ ರಾಜಧಾನಿಯಲ್ಲಿ ಭದ್ರತೆಯನ್ನು ಬಿಗಿಗೊಳಿಸಲಾಗಿತ್ತು. ವಿರೋಧ ಪಕ್ಷದ ಇಂಡಿಯಾ ಮೈತ್ರಿಕೂಟದ ಬ್ಯಾನರ್ ಅಡಿಯಲ್ಲಿ "ಚಲೋ ದೆಹಲಿ – ಪ್ರಜಾಪ್ರಭುತ್ವಕ್ಕಾಗಿ ಮೆರವಣಿಗೆ" ಎಂಬ ಹೆಸರಿನಲ್ಲಿ ಆಯೋಜಿಸಲಾದ ಈ ಮೆರವಣಿಗೆಗಾಗಿ ವಿರೋಧ ಪಕ್ಷದ ನಾಯಕರು ಕನಾಟ್‌ಪ್ಲೇಸ್–ಬರಾಖಂಬಾ ರಸ್ತೆ ಜಂಕ್ಷನ್ ಬಳಿ ಸೇರಿದರು.

ಈ ಪ್ರತಿಭಟನೆಯು ಭಾರತೀಯ ಚುನಾವಣಾ ಆಯೋಗದ ವಿರುದ್ಧ ವಿರೋಧ ಪಕ್ಷದ ಅಭಿಯಾನದ ತೀವ್ರತೆಯನ್ನು ಪ್ರದರ್ಶಿಸಿತು. ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಸಿಇಸಿ ಗ್ಯಾನೇಶ್ ಕುಮಾರ್ ರಾಜೀನಾಮೆಗೆ ಒತ್ತಾಯಿಸಿದರು. ಭಾರತದ ಮುಖ್ಯ ನ್ಯಾಯಮೂರ್ತಿಗಳ (ಸಿಜೆಐ) ಜೊತೆಗಿನ ಹಿಂದಿನ ಸಂವಹನದ ನಂತರ, ಸೋಮವಾರ ಸುಪ್ರೀಂ ಕೋರ್ಟ್‌ಗೆ ಮನವಿ ಸಲ್ಲಿಸಲು ಉದ್ದೇಶಿಸಿರುವುದಾಗಿ ವಿರೋಧ ಪಕ್ಷಗಳು ತಿಳಿಸಿದ್ದವು.

ಸೋಮವಾರ ಕಾಂಗ್ರೆಸ್ ಪ್ರಧಾನ ಕಚೇರಿಯಲ್ಲಿ ನಡೆದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ರಾಹುಲ್ ಗಾಂಧಿ, ಚುನಾವಣಾ ಆಯೋಗದ ನಾಯಕತ್ವ ಬದಲಾಗುವವರೆಗೆ, ಸಂವಿಧಾನವನ್ನು ಎತ್ತಿಹಿಡಿಯುವವರೆಗೆ ಮತ್ತು ಚುನಾವಣಾ ವ್ಯವಸ್ಥೆಯನ್ನು ಸರಿಪಡಿಸುವವರೆಗೆ ವಿರೋಧ ಪಕ್ಷದ ಹೋರಾಟ ಮುಂದುವರಿಯುತ್ತದೆ ಎಂದು ಹೇಳಿದರು.

ಮುಖ್ಯ ಚುನಾವಣಾ ಆಯುಕ್ತರನ್ನು ಉದ್ದೇಶಿಸಿ ಮಾತನಾಡಿದ ಅವರು, "ರಾಜೀನಾಮೆ ನೀಡಿ, ಅಪ್ರೂವರ್ ಆಗಿ; ನೀವು (ಕುಮಾರ್) ತಪ್ಪು ಮಾಡಿದ್ದೀರಿ, ಆದರೆ ಆ ತಪ್ಪಿನ ಹಿಂದೆ ನಿಮ್ಮ ಆಲೋಚನೆಯಿಲ್ಲ. ಆರೋಪಗಳಿಂದಾಗಿ ಕುಮಾರ್ ಒತ್ತಡದಲ್ಲಿದ್ದಾರೆ, ಅವರಿಗೆ ರಾತ್ರಿ ನಿದ್ದೆ ಬರುತ್ತಿಲ್ಲ ಎಂಬುದು ತಿಳಿದಿದೆ, ನೀವು ಸಿಇಸಿ ಆಗಿ ಉಳಿಯುವುದಿಲ್ಲ ಎಂದು ನೇರವಾಗಿ ಎಚ್ಚರಿಸಿದರು.

ನಾವು ಸಿಜೆಐಗೆ ಅವರಿಗೆ ಪತ್ರ ಬರೆದಿದ್ದೆವು. ಅವರು ಅರ್ಜಿ ಸಲ್ಲಿಸುವಂತೆ ಸೂಚಿಸಿದರು. ಈಗ, 'ಮತಗಳ್ಳತನ' ವಿರುದ್ಧ ಇಂಡಿಯಾ ಮೈತ್ರಿಕೂಟದ ನಾಯಕರು ಸುಪ್ರೀಂ ಕೋರ್ಟ್‌ಗೆ ಮೆರವಣಿಗೆ ನಡೆಸಿ ಅರ್ಜಿ ಸಲ್ಲಿಸಲಿದೇವೆ ಎಂದರು. ನಮ್ಮನ್ನು ಬೆಂಬಲಿಸಲು ನಾವು ಎಲ್ಲಾ ಭಾರತೀಯರನ್ನು ಆಹ್ವಾನಿಸುತ್ತೇವೆ" ಎಂದು ಅವರು ಸೇರಿಸಿದರು. "ಸಂವಿಧಾನದ ಮೇಲೆ ದಾಳಿ ನಡೆಯುತ್ತಿದೆ ಎಂದು ಬಿಜೆಪಿಯ ಜನರಿಗೂ ಅನಿಸಿದರೆ, ನೀವೂ ಬನ್ನಿ. ಇದು ಸಂವಿಧಾನವನ್ನು ಉಳಿಸುವ ಹೋರಾಟ, ನಿಮ್ಮ ಭವಿಷ್ಯಕ್ಕಾಗಿ ನಡೆಸುವ ಹೋರಾಟ ಇದಾಗಿದೆ ಎಂದರು.









**ಯಾವ್ಯಾವ ನಾಯಕರು ಭಾಗಿ**

ಕಾಂಗ್ರೆಸ್ ಕರೆ ನೀಡಿರುವ 'ದಿಲ್ಲಿ ಚಲೋ' ಪ್ರತಿಭಟನಾ ಮೆರವಣಿಗೆಯಲ್ಲಿ ಕಾಂಗ್ರೆಸ್ ನಾಯಕರಾದ ಮಲ್ಲಿಕಾರ್ಜುನ ಖರ್ಗೆ, ರಾಹುಲ್ ಗಾಂಧಿ, ಪ್ರಿಯಾಂಕಾ ಗಾಂಧಿ ವಾದ್ರಾ, ಕೆ.ಸಿ. ವೇಣುಗೋಪಾಲ್, ಶಶಿತರೂರ್, ಸಚಿನ್ ಪೈಲಟ್ ಮತ್ತು ಮುಕುಲ್ ವಾಸ್ನಿಕ್, ತೃಣಮೂಲ ಕಾಂಗ್ರೆಸ್ ನಾಯಕಿ ಮಮತಾ ಬ್ಯಾನರ್ಜಿ, ಸಮಾಜವಾದಿ ಪಕ್ಷದ ಅಖಿಲೇಶ್ ಯಾದವ್ ಮತ್ತು ರಾಷ್ಟ್ರೀಯ ಜನತಾ ದಳದ ಮುಖ್ಯಸ್ಥ ತೇಜಸ್ವಿ ಯಾದವ್, ಕರ್ನಾಟಕ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಚಿವರಾದ ಶಿವಲಿಂಗೇಗೌಡ, ಕರ್ನಾಟಕ ಸರ್ಕಾರದ ದೆಹಲಿ ವಿಶೇಷ ಪ್ರತಿನಿಧಿ ಟಿ.ಬಿ. ಜಯಚಂದ್ರ, ಮಂಜುನಾಥ ಭಂಡಾರಿ, ಮಾಜಿ ಸಚಿವ ನಾಗೇಂದ್ರ, ಶಾಸಕರು ಹಾಗೂ ಕಾರ್ಯಕರ್ತರು ಸೇರಿದಂತೆ ಇಂಡಿಯಾ ಮೈತ್ರಿಕೂಟದ ಪ್ರಮುಖ ನಾಯಕರು ಭಾಗವಹಿಸಿದ್ದರು.






ಭಿತ್ತಿಪತ್ರಗಳನ್ನು ಪ್ರದರ್ಶಿಸಿದ ಪ್ರತಿಭಟನಾಕಾರರು



ಮಾಧ್ಯಮಗಳೊಂದಿಗೆ ಚರ್ಚೆ ನಡೆಸಿದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್



ನವದೆಹಲಿಯ ಕರ್ನಾಟಕ ಭವನದಲ್ಲಿ ಮಾಧ್ಯಮಗಳ ಜತೆ ಮಾತನಾಡಿದ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್

## ಎಐಸಿಸಿ ಪ್ರತಿಭಟನೆಯಲ್ಲಿ ಟಿ.ಎಂ. ಶಾಹಿದ್ ತೆಕ್ಕಿಲ್



ಸಂವಿಧಾನ ರಕ್ಷಣೆ,ಪ್ರಜಾ ಪ್ರಭುತ್ವದ ಉಳಿವಿಗೆ, ಮತಗಳ್ಳತನ, ಎಸ್‌ಐಆರ್ ದುರುಪಯೋಗ ಹಾಗೂ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್‌ಕುಮಾರ್ ಅವರ ವಜಾಗೆ ಆಗ್ರಹಿಸಿ ಕಾಂಗ್ರೆಸ್ ಸಮಿತಿ ದೆಹಲಿಯಲ್ಲಿ ಹಮ್ಮಿಕೊಂಡಿದ್ದ ಪ್ರತಿಭಟನೆಯಲ್ಲಿ ಕರ್ನಾಟಕ ಸರಕಾರದ ಕನಿಷ್ಠ ವೇತನ ಸಲಹಾ ಮಂಡಳಿ ಅಧ್ಯಕ್ಷ ಹಾಗೂ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಟಿ.ಎಂ. ಶಾಹಿದ್ ತೆಕ್ಕಿಲ್ ಮತ್ತಿರರು ಭಾಗವಹಿಸಿದ್ದರು. ಟಿ.ಎಂ.ಶಾಹಿದ್ ತೆಕ್ಕಿಲ್, ಅವರ ಜೊತೆ ಕಾಂಗ್ರೆಸ್ ಜಿಲ್ಲಾ ಅಲ್ಪಸಂಖ್ಯಾತರ ಘಟಕದ ಪ್ರಧಾನ ಕಾರ್ಯದರ್ಶಿ ಸಲೀಂ ಪೆರುಂಗೋಳಿ, ತಾಲ್ಲೂಕು ಘಟಕದ ಪ್ರಮುಖರಾದ ಫಾರೂಕ್, ಶಂಸುದ್ದೀನ್ ಪ್ರತಿಭಟನೆಯಲ್ಲಿ ಭಾಗಿಯಾಗಿದ್ದರು.





ನವದೆಹಲಿಯ ಕರ್ನಾಟಕ ಭವನದಲ್ಲಿ ಮಾಧ್ಯಮಗಳ ಜತೆ ಮಾತನಾಡಿದ ಮಂಜುನಾಥ ಭಂಡಾರಿ, ಸಚಿವ ಕೆ.ಎಂ.ಶಿವಲಿಂಗೇಗೌಡ ಜೊತೆಯಲ್ಲಿದ್ದರು



ನವದೆಹಲಿಯ ಕರ್ನಾಟಕ ಭವನದಲ್ಲಿ ಮಾಧ್ಯಮಗಳ ಜತೆ ಮಾತನಾಡಿದ ಶಾಸಕ ಹಾಗೂ ಕೆಯುಐಡಿಎಫ್‌ಸಿ ಅಧ್ಯಕ್ಷ ಎಸ್.ಎನ್. ನಾರಾಯಣಸ್ವಾಮಿ. ಶಾಸಕ ಕೆ.ವೈ. ನಂಜೇಗೌಡ, ವಿಧಾನ ಪರಿಷತ್ ಸದಸ್ಯ ಅನಿಲ್‌ಕುಮಾರ್, ಕೋಲಾರ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ನಾರಾಯಣಸ್ವಾಮಿ, ಬಿವೈಪಿ ಅಧ್ಯಕ್ಷ ಆರ್. ಮುನಿರಾಜು ಮತ್ತಿತರರು ಇದ್ದರು.

## ಮತಗಳ್ಳತನದ ವಿರುದ್ಧ ಕರ್ನಾಟಕದಲ್ಲಿ ತನಿಖೆ ಮುಂದುವರಿಯಲಿದೆ: ಸಿಎಂ



**ನವದೆಹಲಿ, ಅ.12:** ಮತಗಳ್ಳತನದ ಬಗ್ಗೆ ಕರ್ನಾಟಕದಲ್ಲಿ ತನಿಖೆ ಮುಂದುವರೆಸುತ್ತೇವೆ. ಸಂವಿಧಾನ ಉಳಿಸಲು, ಪ್ರಜಾಪ್ರಭುತ್ವ ರಕ್ಷಿಸಲು ನಾವು ಹೋರಾಡುತ್ತೇವೆ" ಎಂದು ಸಿಎಂ ಡಿ.ಕೆ. ಶಿವಕುಮಾರ್ ಹೇಳಿದರು.

ದೆಹಲಿಯ ಕರ್ನಾಟಕ ಭವನದ ಬಳಿ ಮಾಧ್ಯಮಗಳಿಗೆ ಸೋಮವಾರ ಪ್ರತಿಕ್ರಿಯೆ ನೀಡಿ, ಕರ್ನಾಟಕದಲ್ಲಿ ಬಿಜೆಪಿಯವರು ತಪ್ಪು ಮಾಡಿಲ್ಲ ಎಂದಾದರೆ ಯಾಕೆ ಪ್ರಕರಣ ದಾಖಲಿಸಬೇಡಿ ಎನ್ನುತ್ತಿದ್ದಾರೆ, ಯಾಕೆ ರಾಜ್ಯಪಾಲರ ಬಳಿಗೆ ಹೋಗಿದ್ದಾರೆ, ಪ್ರತಿಭಟನೆ ಮಾಡುತ್ತೇವೆ ಎನ್ನುತ್ತಿದ್ದಾರೆ, ಅರ್ಜಿ ನಮೂನೆ 7ಕ್ಕೆ ಅಮಾಯಕ ಕಾರ್ಯಕರ್ತರಿಂದ ಸಹಿ ಹಾಕಿಸಿದ್ದಾರೆ. ಮುಖಂಡರುಗಳೇ ಸಹಿ ಹಾಕಬೇಕಿತ್ತು ಎಂದರು.

ಅನೇಕ ಕಡೆ ಅರ್ಜಿ ನಮೂನೆ 7ಕ್ಕೆ ತಪ್ಪಾಗಿ ಸಹಿ ಮಾಡಿದ್ದೇವೆ ಎಂದು ಅರ್ಜಿ ವಾಪಸ್ ಪಡೆದಿದ್ದಾರೆ. ಅನೇಕ ಕಡೆ ಪ್ರಕರಣಗಳು ದಾಖಲಾಗಿವೆ, ಬಿಎಲ್‌ಓಗಳೇ ದೂರು ನೀಡಿದ್ದಾರೆ. (4ನೇ ಪುಟಕ್ಕೆ)

## ಎಸ್‌ಐಆರ್ ಮಾತ್ರವಲ್ಲ, ಇವಿಎಂಗಳೂ ಹ್ಯಾಕ್ ಆಗುತ್ತಿವೆ

### ಸುಪ್ರೀಂಕೋರ್ಟ್ ಚಲೋದಲ್ಲಿ ಭಾಗವಹಿಸಿದ್ದ ಕರ್ನಾಟಕ ಕಾಂಗ್ರೆಸ್ ನಾಯಕರು



ನವದೆಹಲಿ, ಅ.12: ದೇಶದಲ್ಲಿ ಇತ್ತೀಚೆಗೆ ತೀವ್ರ ಚರ್ಚೆಗೆ ಗ್ರಾಸವಾಗಿರುವ ಎಸ್‌ಐಆರ್ ಪ್ರಕ್ರಿಯೆ ಮಾತ್ರವಲ್ಲದೆ, ಮತದಾನಕ್ಕೆ ಬಳಸುವ ಇವಿಎಂ ಯಂತ್ರಗಳು ಕೂಡ ಹ್ಯಾಕ್ ಆಗುತ್ತಿವೆ ಎಂದು ಕಾಂಗ್ರೆಸ್ ನಾಯಕ ಹಾಗೂ ಕರ್ನಾಟಕ ಸರ್ಕಾರದ ವಿಶೇಷ ಪ್ರತಿನಿಧಿ ಟಿ.ಬಿ. ಜಯಚಂದ್ರ ಆರೋಪ ಮಾಡಿದ್ದಾರೆ. ಕಾಂಗ್ರೆಸ್ ನೇತೃತ್ವದಲ್ಲಿ ವಿರೋಧ ಪಕ್ಷಗಳು ದೆಹಲಿಯಲ್ಲಿ ಹಮ್ಮಿಕೊಂಡಿದ್ದ ಸುಪ್ರೀಂ ಕೋರ್ಟ್ ಚಲೋ ಬೃಹತ್ ಪ್ರತಿಭಟನಾ ಮೆರವಣಿಗೆಯ ಧರಣಿ ಆರಂಭವಾಗುವುದಕ್ಕೂ ಮುನ್ನ ಮಾಧ್ಯಮಗಳೊಂದಿಗೆ ಮಾತನಾಡಿ, ಎಸ್‌ಐಆರ್ ಪ್ರಕ್ರಿಯೆಯನ್ನು ತೀವ್ರವಾಗಿ ವಿರೋಧಿಸಿ ಪ್ರತಿಭಟಿಸಲು ಇಲ್ಲಿಗೆ ಬಂದಿದ್ದೇವೆ. ದೇಶದಲ್ಲಿ ಕೇವಲ ಎಸ್‌ಐಆರ್ ಪ್ರಕ್ರಿಯೆಯಲ್ಲಿ ಮಾತ್ರ ಲೋಪಗಳಾಗುತ್ತಿಲ್ಲ, ಇವಿಎಂ ಯಂತ್ರಗಳು ಸಹ ಹ್ಯಾಕ್ ಆಗುತ್ತಿವೆ. ಹ್ಯಾಕರ್‌ಗಳು ನಾವು ಇವಿಎಂ ಹ್ಯಾಕ್ ಮಾಡಿಕೊಡುತ್ತೇವೆ ಎಂದು ಬಹಿರಂಗವಾಗಿ ಪ್ರಚಾರ ಮಾಡುತ್ತಿದ್ದಾರೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಜನರ ನಂಬಿಕೆ ಅತ್ಯಂತ ಮುಖ್ಯವಾದದ್ದು, ಪ್ರತಿಯೊಬ್ಬ ನಾಗರಿಕನು ಹಾಕುವ ವೋಟು ಸರಿಯಾಗಿ ತಲುಪುತ್ತಿದೆ ಎಂಬ ಖಾತರಿ ಸಿಗಬೇಕು ಎಂದು ಪ್ರತಿಪಾದಿಸಿದರು.

**ಸಂವಿಧಾನದ ರಕ್ಷಣೆ: ಚೆಲುವರಾಯಸ್ವಾಮಿ**

ಸಚಿವ ಚಲುವರಾಯಸ್ವಾಮಿ ಮಾತನಾಡಿ, ಈ ಪ್ರತಿಭಟನೆ ಕಾಂಗ್ರೆಸ್ ಶಕ್ತಿ ಪ್ರದರ್ಶನವಲ್ಲ. ಬದಲಾಗಿ ಕೇಂದ್ರ ಸರ್ಕಾರದ ಸಂವಿಧಾನ ವಿರೋಧಿ ನಡವಳಿಕೆಯ ವಿರುದ್ಧ ನಡೆಸುತ್ತಿರುವ ಹೋರಾಟವಾಗಿದೆ. ಕರ್ನಾಟಕದಲ್ಲೂ ಎಸ್‌ಐಆರ್ ಪ್ರಕ್ರಿಯೆಯಲ್ಲಿ ಅಕ್ರಮಗಳು ನಡೆದಿವೆ. ಚುನಾವಣಾ ಆಯೋಗವನ್ನು ಕೇಂದ್ರ ಸರ್ಕಾರ ಸ್ವಾರ್ಥಕ್ಕಾಗಿ ದುರ್ಬಳಕೆ ಮಾಡಿಕೊಳ್ಳುತ್ತಿದ್ದು, ಚುನಾವಣಾ ಆಯುಕ್ತರನ್ನು ಕೈಗೊಂಬೆಯನ್ನಾಗಿ ಮಾಡಿಕೊಂಡಿದೆ. ನಮ್ಮ ಹಕ್ಕನ್ನು ನಾವೇ ರಕ್ಷಣೆ ಮಾಡಿಕೊಳ್ಳಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಕಿಡಿಕಾರಿದರು.

**ಮತದಾನದ ಹಕ್ಕು ಕಿತ್ತುಕೊಳ್ಳುವ ಯತ್ನ: ಲಕ್ಷ್ಮೀಹೆಬ್ಬಾಳ್ಕರ್**

ಮಾಜಿ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಮಾತನಾಡಿ, ಸಂವಿಧಾನ ನೀಡಿರುವ ಮತದಾನದ ಹಕ್ಕು ಪ್ರಜಾಪ್ರಭುತ್ವದ ಅತ್ಯಂತ ದೊಡ್ಡ ಅಸ್ತ್ರವಾಗಿದೆ. ಆದರೆ ಪ್ರಸ್ತುತ ಆ ಹಕ್ಕನ್ನೇ ನಾಗರಿಕರಿಂದ ಕಿತ್ತುಕೊಂಡು ಇಡೀ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬುಡಮೇಲು ಮಾಡುವ ಶಕ್ತಿಗಳು ಸಕ್ರಿಯವಾಗಿವೆ ಎಂದು ಆರೋಪಿಸಿದರು.

**ಆರ್‌ಎಸ್‌ಎಸ್ ಬೆಂಬಲಿಗರನ್ನು ಕಳುಹಿಸಿದರೂ ಹೆದರಲ್ಲ**

ರಾಜ್ಯ ಯುವ ಕಾಂಗ್ರೆಸ್ ಅಧ್ಯಕ್ಷ ಮಂಜುನಾಥ್ ಮಾತನಾಡಿ, ಎಸ್‌ಐಆರ್ ಪ್ರಕ್ರಿಯೆಯಿಂದಾಗಿ ಸಾಮಾನ್ಯ ಜನರಿಗೆ ತೊಂದರೆಯಾಗಿದೆ. ಶಾಂತಿಯುತವಾಗಿ ನಡೆಸುತ್ತಿರುವ ಪ್ರತಿಭಟನೆಯನ್ನು ಹತ್ತಿಕ್ಕಲು ಪ್ರಯತ್ನಿಸಲಾಗುತ್ತಿದೆ. ರಾಹುಲ್ ಗಾಂಧಿ ಅವರನ್ನು ಎಷ್ಟೇ ಹಿಯಾಳಿಸಿದರೂ ಅವರು ಜನರ ಪರವಾಗಿ ಧ್ವನಿ ಎತ್ತುವುದನ್ನು ನಿಲ್ಲಿಸುವುದಿಲ್ಲ. ಕೇಂದ್ರ ಗೃಹ ಸಚಿವ ಅಮಿತ್ ಶಾ ಅಥವಾ ಆರ್‌ಎಸ್‌ಎಸ್ ಹಿಂಬಾಲಕರನ್ನು ಕಳುಹಿಸಿ ಬೆದರಿಸಲು ನೋಡಿದರೂ ಪ್ರತಿಭಟನೆಯಿಂದ ಹಿಂದೆ ಸರಿಯುವುದಿಲ್ಲ. ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ರಾಜೀನಾಮೆ ನೀಡುವವರೆಗೂ ಈ ಹೋರಾಟ ಮುಂದುವರಿಯಲಿದೆ ಎಂದರು.

## ಕರ್ನಾಟಕಕ್ಕೆ ಡಾ. ಸುಧಾ ಯಾದವ್ ನೂತನ ರಾಜ್ಯಪಾಲೆ

### ಆರು ರಾಜ್ಯಗಳಿಗೆ ಹೊಸ ರಾಜ್ಯಪಾಲರ ನೇಮಿಸಿ ರಾಷ್ಟ್ರಪತಿ ದ್ರೌಪದಿ ಮುರ್ಮು ಆದೇಶ



**ನವದೆಹಲಿ, ಅ.12:** ಆರು ರಾಜ್ಯಗಳಿಗೆ ಹೊಸ ರಾಜ್ಯಪಾಲರನ್ನು ನೇಮಿಸಿ ರಾಷ್ಟ್ರಪತಿ ದ್ರೌಪದಿ ಮುರ್ಮು ಆದೇಶ ಹೊರಡಿಸಿದ್ದಾರೆ.

ರಾಷ್ಟ್ರಪತಿ ಭವನ ಹೊರಡಿಸಿರುವ ಪ್ರಕಟಣೆ ಪ್ರಕಾರ, ಕೇರಳ ರಾಜ್ಯದ ರಾಜ್ಯಪಾಲರಾಗಿ ಓಂಪ್ರಕಾಶ್ ಮಾಥುರ್, ತಮಿಳುನಾಡು ರಾಜ್ಯಪಾಲರಾಗಿ ರಾಜೇಂದ್ರ ವಿಶ್ವನಾಥ್ ಆರ್ಲೇಕರ್, ಒಡಿಶಾ ರಾಜ್ಯಪಾಲರಾಗಿ ಬ್ರಿಜ್‌ಮೋಹನ್‌ರಾಮ್, ಕರ್ನಾಟಕ ರಾಜ್ಯದ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋತ್ ಉತ್ತರಾಧಿಕಾರಿಯಾಗಿ ಡಾ. ಸುಧಾ ಯಾದವ್, ಉತ್ತರಾಖಂಡ ರಾಜ್ಯಪಾಲರಾಗಿ ಡಾ. ಥಾಲ್‌ಸಿಂಗ್ ಬಿಸೆನ್ ಹಾಗೂ ಸಿಕ್ಕಿಂ ರಾಜ್ಯಪಾಲರಾಗಿ ದುಶ್ಯಂತ್ ಸಿಂಗ್ ಗೌತಮ್ ಅವರನ್ನು ನೇಮಕ ಮಾಡಲಾಗಿದೆ. ಈ ಎಲ್ಲ ನೇಮಕಾತಿಗಳು ಆಯಾ ರಾಜ್ಯಪಾಲರು ಅಧಿಕಾರ ಸ್ವೀಕರಿಸುವ ದಿನದಿಂದ ಜಾರಿಗೆ ಬರಲಿದೆ ಎಂದು ರಾಷ್ಟ್ರಪತಿ ಭವನದ ಪ್ರಕಟಣೆ ತಿಳಿಸಿದೆ.

# ಕಬ್ಬು ಬೆಳೆಗಾರರ ಹಿತರಕ್ಷಣೆಗೆ ಕೇಂದ್ರ ಮಹತ್ವದ ಹೆಜ್ಜೆ: ವಾರದೊಳಗೆ ಉನ್ನತ ಮಟ್ಟದ ಸಮಿತಿ ರಚನೆ

**ನವದೆಹಲಿ, ಅ.12:** ಕರ್ನಾಟಕದ ಕಬ್ಬು ಬೆಳೆಗಾರರ ಹೋರಾಟಕ್ಕೆ ಸ್ಪಂದಿಸಿದ ಕೇಂದ್ರ ಸರ್ಕಾರ, ಸೋಮವಾರ ಮಹತ್ವದ ನಿರ್ಣಯ ಕೈಗೊಂಡಿದ್ದು, ರೈತರ ಹಿತರಕ್ಷಣೆಗಾಗಿ ವಾರದೊಳಗೆ ಉನ್ನತ ಮಟ್ಟದ ಸಮಿತಿ ರಚನೆಯಂತಹ ತ್ವರಿತ ಕ್ರಮಕ್ಕೆ ಮುಂದಾಗಿದೆ.

ನವದೆಹಲಿಯಲ್ಲಿ ಸೋಮವಾರ ಸಂಜೆ ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ, ಕೃಷಿ ಸಚಿವ ಶಿವರಾಜ ಸಿಂಗ್ ಚೌಹಾಣ್ ಮತ್ತು ಪ್ರಮುಖ ರೈತ ಮುಖಂಡರ ಸಭೆಯಲ್ಲಿ ಈ ನಿರ್ಣಯ ಕೈಗೊಳ್ಳಲಾಯಿತು. ರಾಜ್ಯದ ಕಬ್ಬು ಬೆಳೆಗಾರರ ಸಮಸ್ಯೆ, ಬೇಡಿಕೆಗಳನ್ನೆಲ್ಲ ಆಲಿಸಿದ ಸಚಿವದ್ವಯರು, ರೈತ ಮುಖಂಡರೊಂದಿಗೆ ಸುದೀರ್ಘ ಚರ್ಚೆ ನಡೆಸಿ ಅಂತಿಮವಾಗಿ ಸಮಸ್ಯೆಗಳ ಪರಿಹಾರಕ್ಕೆ ಒಂದು ವಾರದೊಳಗೆ ರೈತರು ಮತ್ತು ವಿಜ್ಞಾನಿಗಳನ್ನೂ ಒಳಗೊಂಡ ಜಂಟಿ ಸಮಿತಿ ರಚಿಸುವುದಾಗಿ ಪ್ರಕಟಿಸಿದರು. ಸಭೆಯಲ್ಲಿ ಮಾತನಾಡಿದ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್, ಸಕ್ಕರೆ ಇಳುವರಿ (ರಿಕವರಿ), ತೂಕ ಮತ್ತು ಪಾವತಿಗೆ ಸಂಬಂಧಿಸಿದ ವಿವಾದಗಳನ್ನು ಪರಿಹರಿಸಲು ಜಂಟಿ ಸಮಿತಿ ರಚಿಸಲು ಕೇಂದ್ರ ಸರ್ಕಾರ ಬದ್ಧವಾಗಿದೆ. ಇದರಲ್ಲಿ ರೈತರು ಹಾಗೂ ಕೃಷಿ ವಿಜ್ಞಾನಿಗಳನ್ನೂ ಸೇರ್ಪಡೆ ಮಾಡಲಾಗುತ್ತದೆ ಎಂದು ಸ್ಪಷ್ಟ ಭರವಸೆ ನೀಡಿದರು.

**ಜಂಟಿ ಸಮಿತಿ ಶಿಫಾರಸ್ಸು ಮೇರೆಗೆ ಅಗತ್ಯ ಕ್ರಮ:** ಕರ್ನಾಟಕ ಮತ್ತು ಮಹಾರಾಷ್ಟ್ರದ ರೈತರೊಂದಿಗಿನ ಉನ್ನತಮಟ್ಟದ ಸಭೆಯಲ್ಲಿ ಕೇಂದ್ರ ಸಚಿವದ್ವಯರು, ರೈತರ ಸೇವೆ ನಮಗೆ ದೇವರ ಪೂಜೆಗೆ ಸಮಾನ. ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ತಮ್ಮ ಸರ್ಕಾರ ರೈತರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸುತ್ತಿದೆ. ಅಂತೆಯೇ ಕಬ್ಬು ಬೆಳೆಗಾರರ ಸಮಸ್ಯೆಗಳ ಪರಿಹಾರಕ್ಕೂ ಪಾರದರ್ಶಕ ಕ್ರಮ ಕೈಗೊಳ್ಳಲಾಗುತ್ತಿದೆ. ಕೇಂದ್ರ, ರಾಜ್ಯಗಳು, ರೈತರು ಮತ್ತು ವಿಜ್ಞಾನಿಗಳನ್ನು ಒಳಗೊಂಡ ಜಂಟಿ ಸಮಿತಿ ರಚಿಸಿ ಅದರ ವರದಿ ಅನ್ವಯ ಶಾಶ್ವತ ಪರಿಹಾರ ಕಾರ್ಯಗಳ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳಲಾಗುತ್ತದೆ ಎಂದು ತಿಳಿಸಿದರು.

**ಮೋದಿ ಸರ್ಕಾರಕ್ಕೆ ರೈತರೇ ಪ್ರಥಮಾದ್ಯತೆ:** ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರಕ್ಕೆ ರೈತರೇ ಪ್ರಥಮಾದ್ಯತೆಯಾಗಿದ್ದು, ಸಕ್ಕರೆ ಇಳುವರಿ ಅಂಕಿ-ಅಂಶಗಳ ತಿರುಚುವಿಕೆ ಮತ್ತು ಸಂಬಂಧಿತ ವಿಷಯಗಳ ಬಗ್ಗೆ ದೃಢ ನಿಲುವು ಹೊಂದಿದೆ ಎಂದು ಸ್ಪಷ್ಟಪಡಿಸಿದ ಕೃಷಿ ಸಚಿವ ಶಿವರಾಜಸಿಂಗ್ ಚೌಹಾಣ್, ಅಗತ್ಯ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿಯೇ ಅಧಿಕಾರಿಗಳಿಗೆ ಸೂಚನೆ ಸಹ ನೀಡಿದರು.

ಪ್ರಧಾನಿ ನರೇಂದ್ರ ಮೋದಿ ಮಾರ್ಗದರ್ಶನದಲ್ಲಿ ರೈತರ ಸರ್ವತೋಮುಖ ಅಭಿವೃದ್ಧಿ, ಕೃಷಿ ಉತ್ಪನ್ನಗಳ ಪಾರದರ್ಶಕ ಮೌಲ್ಯಮಾಪನ ಮತ್ತು ಕೃಷಿಕರ ಆದಾಯ ವೃದ್ಧಿಗೆ ಕೇಂದ್ರ ಸರ್ಕಾರ ಸಂಪೂರ್ಣ ಬದ್ಧವಾಗಿದ್ದು, ಆ ನಿಟ್ಟಿನಲ್ಲಿ ದೃಢವಾದ ಕ್ರಮಗಳನ್ನು ಕೈಗೊಳ್ಳುತ್ತಿದೆ ಎಂದು ಹೇಳಿದರು. ಕೃಷಿ ಸಚಿವ ಶಿವರಾಜ್‌ಸಿಂಗ್ ಚೌಹಾಣ್, ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ಅವರಿಬ್ಬರೂ ರೈತರ ಅಹವಾಲುಗಳನ್ನು ಗಂಭೀರವಾಗಿ ಮತ್ತು ಅತ್ಯಂತ ಸಹಾನುಭೂತಿಯಿಂದ ಆಲಿಸಿದರು. ಕೇಂದ್ರ ಸರ್ಕಾರ ಯಾವುದೇ ಕಾರಣಕ್ಕೂ ರೈತರ ಶೋಷಣೆಯನ್ನು ಸಹಿಸುವುದಿಲ್ಲ ಎಂದು ಮನವರಿಕೆ ಮಾಡಿಕೊಟ್ಟರು.



ಸಕ್ಕರೆ ಇಳುವರಿ ಅಂಕಿ-ಅಂಶಗಳಲ್ಲಿನ ವ್ಯತ್ಯಾಸ, ತೂಕ ಕಡಿತ ಮತ್ತು ಸಕ್ಕರೆ ಕಾರ್ಖಾನೆಗಳು ನೈಜ ಇಳುವರಿಯನ್ನು ಮರೆಮಾಚುವ ಆರೋಪ ಸೇರಿದಂತೆ ರೈತರು ಪ್ರಸ್ತಾಪಿಸಿದ ವಿಷಯಗಳು ಕುರಿತಂತೆ ಗಂಭೀರ ಚರ್ಚೆ ನಡೆಸಲಾಯಿತು. ಕಬ್ಬು ಬೆಳೆಗಾರರ ಸಮಸ್ಯೆಗಳಿಗೆ ತಾತ್ಕಾಲಿಕ ಅಥವಾ ಅಪೂರ್ಣ ಪರಿಹಾರ ಹುಡುಕುವ ಬದಲು ಭವಿಷ್ಯದಲ್ಲಿಯೂ ಯಾವುದೇ ಕಾರ್ಖಾನೆಗಳು ರೈತರನ್ನು ವಂಚಿಸದಂತೆ ತಡೆಯಲು ಪಾರದರ್ಶಕ ಮತ್ತು ವೈಜ್ಞಾನಿಕ ವ್ಯವಸ್ಥೆ ರೂಪಿಸುವುದು ಅಗತ್ಯವಾಗಿದೆ. ಕೇಂದ್ರ ಸರ್ಕಾರ ಈ ನಿಟ್ಟಿನಲ್ಲಿ ಕಾರ್ಯೋನ್ಮುಖವಾಗಲಿದೆ ಎಂದು ಸ್ಪಷ್ಟ ಭರವಸೆ ನೀಡಿದರು.

**ಕೇಂದ್ರದಿಂದ ತ್ವರಿತ ಸ್ಪಂದನೆ:** ಕರ್ನಾಟಕ ಕಬ್ಬು ಬೆಳೆಗಾರರ ಸಮಸ್ಯೆಗಳಿಗೆ ಕೇಂದ್ರ ಸರ್ಕಾರ ತ್ವರಿತವಾಗಿ ಸ್ಪಂದಿಸಲಿದ್ದು, ರೈತರಿಗೆ ಪರಿಣಾಮಕಾರಿ ಪರಿಹಾರ ಒದಗಿಸುವ ಉದ್ದೇಶದಿಂದ ಒಂದು ವಾರದೊಳಗೆ ವಿಶೇಷ ಉನ್ನತ ಮಟ್ಟದ ಜಂಟಿ ಸಮಿತಿ ರಚಿಸಲಾಗುವುದು ಎಂದು ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹಾಗೂ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ಘೋಷಿಸಿದರು. ಈ ಜಂಟಿ ಸಮಿತಿಯಲ್ಲಿ ಕೇಂದ್ರ ಸರ್ಕಾರ ಹಾಗೂ ಸಂಬಂಧಿತ ರಾಜ್ಯ ಸರ್ಕಾರಗಳಾದ ಕರ್ನಾಟಕ, ಮಹಾರಾಷ್ಟ್ರದ ಪ್ರತಿನಿಧಿಗಳು, ರೈತ ಸಂಘಟನೆಗಳ ಅಧಿಕೃತ ಪ್ರತಿನಿಧಿಗಳು, ಸಕ್ಕರೆ ಕಾರ್ಖಾನೆಗಳ ಪ್ರತಿನಿಧಿಗಳು, ವಿಷಯ ತಜ್ಞರು (ವೈಜ್ಞಾನಿಕ ತಜ್ಞರು) ಇರಲಿದ್ದಾರೆ ಎಂದು ಹೇಳಿದರು. ಈ ಸಮಿತಿ ಕಬ್ಬು ಕಟಾವಿನ ಸಮಯ, ಸಕ್ಕರೆ ಇಳುವರಿ ಅಳೆಯುವ ವೈಜ್ಞಾನಿಕ ಮಾನದಂಡ, ಆಧುನಿಕ ಪ್ರಯೋಗಾಲಯ ಪರೀಕ್ಷಾ ವ್ಯವಸ್ಥೆ ಮತ್ತು ತೂಕದ ನಿಖರತೆ ಸೇರಿದಂತೆ ಪ್ರತಿಯೊಂದು ತಾಂತ್ರಿಕ ಅಂಶವನ್ನು ಕೂಲಂಕಷವಾಗಿ ಪರಿಶೀಲಿಸಲಿದ್ದು, ನಿಗದಿತ ಸಮಯದೊಳಗೆ ಸರ್ಕಾರಕ್ಕೆ ಶಿಫಾರಸುಗಳನ್ನು ಸಲ್ಲಿಸಲಿದೆ ಎಂದು ತಿಳಿಸಿದರು.

**ರಾಜ್ಯ ಸರ್ಕಾರಗಳ ಸಹಕಾರವೂ ಅಗತ್ಯ:** ರೈತರ ಕಲ್ಯಾಣಕ್ಕಾಗಿ ಕೇಂದ್ರ ಅಗತ್ಯ ಕ್ರಮ ಕೈಗೊಳ್ಳಲಿದೆ. ತ್ವರಿತ ಕ್ರಮ ಕೈಗೊಳ್ಳುವಲ್ಲಿ ಆಯಾ ರಾಜ್ಯ ಸರ್ಕಾರಗಳ ಸಹಕಾರವೂ ಅಗತ್ಯವಾಗಿದೆ ಎಂದು ಕೋರಿದ ಸಚಿವರು, ರಾಜ್ಯದಲ್ಲಿ ಕಬ್ಬು ಬೆಳೆಗಾರರು ಎದುರಿಸುತ್ತಿರುವ ವಾಸ್ತವ ಸಮಸ್ಯೆಗಳು, ಸಕ್ಕರೆ ಕಾರ್ಖಾನೆಗಳು ವರದಿ ಮಾಡುವ ಸಕ್ಕರೆ ಇಳುವರಿ ಅಂಕಿ-ಅಂಶಗಳಲ್ಲಿನ ವ್ಯತ್ಯಾಸ, ತೂಕ, ತ್ಯಾಜ್ಯ ನಿರ್ವಹಣೆ, ಪ್ರಯೋಗಾಲಯ ಪರೀಕ್ಷೆ ಹಾಗೂ ಬೆಳೆವಿಮೆಗೆ ಸಂಬಂಧಿಸಿದ ವಿವಿಧ ವಿಷಯಗಳ ಕುರಿತು ರಚನಾತ್ಮಕ ಚರ್ಚೆ ನಡೆಸಿದರು. ಸಚಿವ ಶಿವರಾಜ್ ಸಿಂಗ್ ಚೌಹಾಣ್ ಮತ್ತು ಪ್ರಲ್ಹಾದ್ ಜೋಶಿ ಅವರ ನೇತೃತ್ವದಲ್ಲಿ ನಡೆದ ಈ ಸಭೆಯಲ್ಲಿ ಕಬ್ಬು ಬೆಳೆಗಾರರ ಹಿತರಕ್ಷಣೆಗಾಗಿ ತಕ್ಷಣದ ಆಡಳಿತಾತ್ಮಕ ಸುಧಾರಣೆಗಳನ್ನು ಜಾರಿಗೆ ತರುವ ಜತೆಗೆ ವೈಜ್ಞಾನಿಕ ಕ್ರಮಗಳನ್ನು ಅಳವಡಿಸಿಕೊಂಡು ನೀತಿ-ನಿಯಮ ಮತ್ತು ತಾಂತ್ರಿಕ ಕಾರ್ಯವಿಧಾನಗಳನ್ನು ಮತ್ತಷ್ಟು ಬಲಪಡಿಸಲು ಹಾಗೂ ರೈತರ ಆರ್ಥಿಕ ಸಬಲೀಕರಣಕ್ಕೆ ಅಗತ್ಯ ಕಾರ್ಯವಿಧಾನಗಳನ್ನು ರೂಪಿಸಲು ಮಹತ್ತರ ಸಮಾಲೋಚನೆ ನಡೆಸಲಾಯಿತು.

**ಎಫ್‌ಆರ್‌ಪಿ-ಎಸ್‌ಎಪಿ ಎಥೆನಾಲ್ ವಿಸ್ತೃತ ಚರ್ಚೆ:** ಕೇಂದ್ರ ಗ್ರಾಹಕ ವ್ಯವಹಾರ, ಆಹಾರ ಮತ್ತು ಸಾರ್ವಜನಿಕ ವಿತರಣಾ ಸಚಿವ ಪ್ರಲ್ಹಾದ್ ಜೋಶಿ ಅವರು, ಕಬ್ಬಿನ ಈಖಿಕ ನಿರ್ಣಯ, ವೈಜ್ಞಾನಿಕ ಪ್ರಕ್ರಿಯೆ ಹಾಗೂ ವೆಚ್ಚದ ಮೌಲ್ಯಮಾಪನಕ್ಕೆ ಬಳಸುವ ವಿಧಾನಗಳ ಬಗ್ಗೆ ವಿವರಿಸಿದರು. ಸಕ್ಕರೆ ವಲಯದಲ್ಲಿ ಪ್ರತಿ ಹಂತದಲ್ಲೂ ಪಾರದರ್ಶಕತೆ ಹೆಜ್ಜೆಯಿರಿಸಿದ ಕೇಂದ್ರ ಸರ್ಕಾರ, ರೈತರು ಮತ್ತು ರಾಜ್ಯ ಸರ್ಕಾರಗಳೊಂದಿಗೆ ಸಮನ್ವಯ ಸಾಧಿಸುತ್ತಿದೆ ಎಂದರು. ಕಬ್ಬು ಬೆಳೆಗಾರರೊಂದಿಗೆ ಸಮಸ್ಯೆಗಳ ಕುರಿತು ವಿಸ್ತೃತ ಚರ್ಚೆ ನಡೆಸಿದರಲ್ಲದೆ, ಎಂಎಸ್‌ಪಿ ಮತ್ತು ಎಫ್‌ಆರ್‌ಪಿ ಗಿರುವ ವ್ಯತ್ಯಾಸವನ್ನು ಮನವರಿಕೆ ಮಾಡಿಕೊಟ್ಟರು ಮತ್ತು ಎಸ್‌ಎಪಿ (ಕನಿಷ್ಠ ಮಾರಾಟ ದರ), ಎಥೆನಾಲ್ ಉತ್ಪಾದನೆ ಬಗ್ಗೆಯೂ ರೈತರ ಗಮನ ಸೆಳೆದರು.

ಈ ಸಂದರ್ಭದಲ್ಲಿ ಕೇಂದ್ರ ಕೃಷಿ ಸಚಿವಾಲಯ, ಆಹಾರ ಇಲಾಖೆ ಅಧಿಕಾರಿಗಳು, ರಾಜ್ಯ ಸಹಕಾರ ಸಚಿವ ಲಕ್ಷ್ಮಣ ಸವದಿ, ಕೃಷಿ ಸಚಿವ ನರೇಂದ್ರ ಸ್ವಾಮಿ, ಸಕ್ಕರೆ ಮತ್ತು ಜವಳಿ ಖಾತೆ ಸಚಿವ ರುದ್ರಪ್ಪ ಮಾನಪ್ಪ ಲಮಾಣಿ, ರೈತ ಮುಖಂಡರು ಮತ್ತು ಮಾಜಿ ಸಂಸದ ರಾಜು ಶೆಟ್ಟಿ ಹಾಗೂ ರಾಜ್ಯ ಸರ್ಕಾರದ ಅಧಿಕಾರಿಗಳು ಪಾಲ್ಗೊಂಡಿದ್ದರು.

# ಸಿಇಸಿ ವಿರುದ್ಧದ ಕಾದಾಟಕ್ಕೆ ಸುಪ್ರೀಂ ಎಳೆದು ತರಬೇಡಿ

**ನವದೆಹಲಿ, ಅ.12:** ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ವಿರುದ್ಧ ದೆಹಲಿಯಲ್ಲಿ ನಡೆಯುತ್ತಿರುವ ಸರಣಿ ಪ್ರತಿಭಟನೆಗಳು ಮತ್ತು ರಾಜಕೀಯ ಗೊಂದಲಗಳ ಸುಳಿಗೆ ಸುಪ್ರೀಂ ಕೋರ್ಟ್ ಅನ್ನು ಯಾವುದೇ ಕಾರಣಕ್ಕೂ ಎಳೆದು ತರಬಾರದು ಎಂದು ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಹೇಳಿದ್ದಾರೆ.

ಸಿಜೆಪಿ ಮತ್ತು ಪ್ರತಿಪಕ್ಷಗಳು ನಡೆಸಿದ ಪ್ರತಿಭಟನೆಗಳ ವೇಳೆ ವಕೀಲರನ್ನು ಪೊಲೀಸರು ವಶಕ್ಕೆ ಪಡೆದಿದ್ದನ್ನು ಪ್ರಶ್ನಿಸಿ ಸಲ್ಲಿಸಲಾಗಿದ್ದ ಅರ್ಜಿಯನ್ನು ಸೂರ್ಯಕಾಂತ್ ನೇತೃತ್ವದ ತ್ರಿಸದಸ್ಯರ ಪೀಠ ವಿಚಾರಣೆ ನಡೆಸಿದೆ. ಈ ವೇಳೆ ಮಾತನಾಡಿದ ಸಿಜೆಪಿ ಸೂರ್ಯಕಾಂತ್, ಪ್ರತಿಭಟಿಸುವುದು ದೇಶದ ನಾಗರಿಕರ ಹಕ್ಕು. ಆದಾಗ್ಯೂ, ದೇಶದ ಅತ್ಯುನ್ನತ ನ್ಯಾಯಾಲಯದ ದೈನಂದಿನ ಕಲಾಪಗಳಿಗೆ, ವಕೀಲರು, ಸಿಬ್ಬಂದಿ ಹಾಗೂ ಕಕ್ಷಿದಾರರ ಸಂಚಾರಕ್ಕೆ ಯಾವುದೇ ರೀತಿಯ ಅಡೆತಡೆ ಉಂಟಾಗಬಾರದು ಎಂದು ಹೇಳಿದ್ದಾರೆ.



ಪ್ರಜಾಪ್ರಭುತ್ವಯಲ್ಲಿ ಎಲ್ಲ ರೀತಿಯ ಶಾಂತಿಯುತ ಚಟುವಟಿಕೆಗಳು ನಡೆಯಲಿ. ಆದರೆ, ಕನಿಷ್ಠ ಸುಪ್ರೀಂ ಕೋರ್ಟ್ ಕಾರ್ಯಾಚರಣೆ ಮತ್ತು ಪ್ರಕ್ರಿಯೆಗಳಿಗೆ ತೊಂದರೆಯಾಗಬಾರದು. ನಾನು ಪ್ರತಿಭಟನಾಕಾರರಲ್ಲೂ ಮನವಿ ಮಾಡಿದ್ದೇನೆ. ಈ ರೀತಿಯ ಯಾವುದೇ ರಾಜಕೀಯ ಘಟನಾವಳಿಗಳಿಗೆ ಸುಪ್ರೀಂ ಕೋರ್ಟ್ ಅನ್ನು ಎಳೆದು ತರಬೇಡಿ ಎಂದಿದ್ದಾರೆ.

ಇದೆಲ್ಲದರ ನಡುವೆ, ಎಸ್‌ಐಆರ್ ರದ್ದತಿ ಮತ್ತು ಜ್ಞಾನೇಶ್ ಕುಮಾರ್ ವಜಾಗಾಗಿ ಒತ್ತಾಯಿಸಿರುವ ರಾಹುಲ್ ಗಾಂಧಿ ನೇತೃತ್ವದ ಕಾಂಗ್ರೆಸ್ ಮತ್ತು ಪ್ರತಿಪಕ್ಷಗಳ ನಿಯೋಗವು ಸುಪ್ರೀಂ ಕೋರ್ಟ್‌ಗೆ ಪಾದಯಾತ್ರೆ ನಡೆಸಲು ನಿರ್ಧರಿಸಿತ್ತು. ಆದರೆ, ಪ್ರಕಟಿತ ಪ್ರಕರಣಗಳ ವಿಚಾರಣೆ ಬಾಕಿ ಇರುವುದು ಹಾಗೂ ಆಡಳಿತಾತ್ಮಕ ಮಾರ್ಗಗಳ ಮೂಲಕ ಇಂತಹ ಕುಂದುಕೊರತೆಗಳನ್ನು ಪರಿಹರಿಸಲು ಸಾಧ್ಯವಿಲ್ಲ ಎಂಬ ಕಾರಣ ನೀಡಿರುವ ಸಿಜೆಐ, ಭೇಟಿಗೆ ಕೋರಿದ್ದ ಮನವಿಯನ್ನು ತಿರಸ್ಕರಿಸಿದ್ದರು.

ಇಷ್ಟೇ ಅಲ್ಲದೆ, ನವದೆಹಲಿಯ ವಿಜ್ಞಾನ ಭವನದಲ್ಲಿ ನಡೆದ ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗದ 33ನೇ ವಾರ್ಷಿಕೋತ್ಸವದಲ್ಲಿ ಭಾಗವಹಿಸಿದ್ದ ಸಿಜೆಐ ಸೂರ್ಯಕಾಂತ್ ಅವರನ್ನು ಪ್ರತಿಭಟನೆ ಕುರಿತು ಸುದ್ದಿಗಾರರು ಪ್ರಶ್ನಿಸಿದ್ದಾರೆ. ಇದಕ್ಕೆ ಪ್ರತಿಕ್ರಿಯಿಸಿದ ಸೂರ್ಯಕಾಂತ್, ಇದು ನನ್ನ ವಿಷಯವಲ್ಲ, ಇದು ಕಾನೂನು ಮತ್ತು ಸುವ್ಯವಸ್ಥೆಗೆ ಸಂಬಂಧಿಸಿದ ವಿಷಯವಾದ್ದರಿಂದ ನನ್ನ ವ್ಯಾಪ್ತಿಗೆ ಬರುವುದಿಲ್ಲ ಎಂದು ಹೇಳಿದ್ದು, ವಿವಾದದಿಂದ ದೂರ ಉಳಿದಿದ್ದಾರೆ.

# ಕೇಂದ್ರದ 200 ಅಧಿಕಾರಿಗಳು ಸಂಪರ್ಕದಲ್ಲಿದ್ದಾರೆ: ರಾಹುಲ್

**ನವದೆಹಲಿ, ಅ. 12:** ಮುಖ್ಯ ಚುನಾವಣಾ ಆಯುಕ್ತ (ಸಿಇಸಿ) ಜ್ಞಾನೇಶ್ ಕುಮಾರ್ ರಾಜೀನಾಮೆಗೆ ಆಗ್ರಹಿಸಿ ವಿರೋಧ ಪಕ್ಷಗಳ ಒಕ್ಕೂಟ ಇಂಡಿಯಾ ಸುಪ್ರೀಂ ಕೋರ್ಟ್‌ಗೆ ಮೆರವಣಿಗೆ ನಡೆಸುತ್ತಿರುವ ಬೆನ್ನಲ್ಲೇ, ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ. ನಿಮ್ಮ ಸರ್ಕಾರದ ಜಾರಿ ನಿರ್ದೇಶನಾಲಯ (ಇಡಿ), ಕೇಂದ್ರೀಯ ತನಿಖಾ ದಳ (ಸಿಬಿಐ) ಮತ್ತು ವಿದೇಶಾಂಗ ಸಚಿವಾಲಯ ಸೇರಿದಂತೆ ವಿವಿಧ ಇಲಾಖೆಗಳ ಸುಮಾರು 200 ಅಧಿಕಾರಿಗಳು ವಿರೋಧ ಪಕ್ಷಗಳ ಸಂಪರ್ಕದಲ್ಲಿದ್ದು, ಮಾಹಿತಿಗಳನ್ನು ಹಂಚಿಕೊಳ್ಳುತ್ತಿದ್ದಾರೆ ಎಂದು ರಾಹುಲ್ ಗಾಂಧಿ ಹೇಳಿದ್ದಾರೆ.

ಪ್ರಧಾನಿ ನರೇಂದ್ರ ಮೋದಿಯವರಿಗೆ ಒಂದು ಮಾತು ಹೇಳಲು ಬಯಸುತ್ತೇನೆ. ನಿಮ್ಮ ಸರ್ಕಾರದೊಳಗಿನ ವಿವಿಧ ಇಲಾಖೆಗಳ 200 ಅಧಿಕಾರಿಗಳು ನಮ್ಮ ಸಂಪರ್ಕದಲ್ಲಿದ್ದಾರೆ. ಅವರು ಮಾಹಿತಿಗಳನ್ನು ನೀಡುತ್ತಿದ್ದಾರೆ ಎಂದು ಹೇಳಿದ್ದಾರೆ.



ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ವಿರುದ್ಧ ವಾಗ್ದಾಳಿ ನಡೆಸಿದ ರಾಹುಲ್, ನಾವು ಕೇಳುತ್ತಿರುವುದು ಇಷ್ಟೇ, ಜ್ಞಾನೇಶ್ ಕುಮಾರ್ ಅವರು ಏಕೆ ರಾಜೀನಾಮೆ ನೀಡುತ್ತಿಲ್ಲ ಸಂವಿಧಾನವನ್ನು ಎತ್ತಿಹಿಡಿಯುವವರೆಗೆ, ಜ್ಞಾನೇಶ್ ಕುಮಾರ್ ರಾಜೀನಾಮೆ ನೀಡುವವರೆಗೆ ನಮ್ಮ ಹೋರಾಟ ನಿಲ್ಲುವುದಿಲ್ಲ. ಅವರಿಗೆ ತಮ್ಮ ತಪ್ಪಿನ ಬಗ್ಗೆ ಅರಿವಿರಬಹುದು ಮತ್ತು ಅವರು ಯಾರದ್ದೋ ಒತ್ತಡಕ್ಕೆ ಒಳಗಾಗಿರಬಹುದು. ರಾಜೀನಾಮೆ ನೀಡಿ ಪ್ರಕರಣದಲ್ಲಿ ಸಾಕ್ಷಿಯಾಗಿ ಸಹಕರಿಸಿ ಎಂದು ಜ್ಞಾನೇಶ್ ಕುಮಾರ್‌ಗೆ ಸಲಹೆ ನೀಡಿದ್ದಾರೆ.

ನೀವು ತಪ್ಪು ಮಾಡಿದ್ದೀರಿ. ನೀವು ಮಾಡಿದ ತಪ್ಪಿನ ಹಿಂದಿನ ಸೂತ್ರಧಾರಿ ನೀವಲ್ಲ ಎಂಬುದು ನಮಗೆ ತಿಳಿದಿದೆ. ನಿಮ್ಮನ್ನು ಕ್ಷಮಿಸುವ ಬಗ್ಗೆಯೂ ನಾವು ಯೋಚಿಸಬಹುದು. ನೀವು ಒತ್ತಡದಲ್ಲಿದ್ದೀರಿ ಎಂಬುದು ನಮಗೆ ಅರ್ಥವಾಗುತ್ತದೆ. ಆದ್ದರಿಂದ ರಾಜೀನಾಮೆ ನೀಡಿ, ಪ್ರಕರಣದಲ್ಲಿ ಸಾಕ್ಷಿಯಾಗಿ ಸಹಕರಿಸಿ ಎಂದು ಹೇಳಿದ್ದಾರೆ.

ವಿರೋಧ ಪಕ್ಷಗಳ ಮೆರವಣಿಗೆ ಹಿನ್ನೆಲೆಯಲ್ಲಿ ದೆಹಲಿಯಲ್ಲಿ ಭಾರಿ ಭದ್ರತಾ ವ್ಯವಸ್ಥೆ ಮಾಡಿರುವುದನ್ನು ರಾಹುಲ್ ಗಾಂಧಿ ಪ್ರಶ್ನಿಸಿದ್ದಾರೆ. ಸುಮಾರು 30 ಸಾವಿರ ಭದ್ರತಾ ಸಿಬ್ಬಂದಿಯನ್ನು ರಸ್ತೆಗಳಲ್ಲಿ ನಿಯೋಜಿಸಿರುವುದೇಕೆ, ಭಾರತದ ರಾಜಧಾನಿಯನ್ನೇ ಜೈಲಿನಂತೆ ಮಾಡಿರುವುದೇಕೆ ಎಂದು ಪ್ರಶ್ನಿಸಿದ್ದಾರೆ.

ಮುಖ್ಯ ಚುನಾವಣಾ ಆಯುಕ್ತರನ್ನು ರಕ್ಷಿಸುವ ಮೂಲಕ ಕೇಂದ್ರ ಸರ್ಕಾರ ದೊಡ್ಡತಪ್ಪು ಮಾಡುತ್ತಿದೆ. ಇದು ಜನರು ಹಾಗೂ ಮೋದಿ, ಅಮಿತ್ ಶಾ ಮತ್ತು ಜ್ಞಾನೇಶ್ ಕುಮಾರ್ ನಡುವಿನ ಹೋರಾಟ. ಒಂದು ಕಡೆ ಎಲ್ಲ ವಿರೋಧ ಪಕ್ಷಗಳಿವೆ. ಮತ್ತೊಂದು ಕಡೆ ಭಾರತವನ್ನು ತಮ್ಮ ಹಿಡಿತಕ್ಕೆ ತೆಗೆದುಕೊಂಡಿರುವ ನರೇಂದ್ರ ಮೋದಿ, ಅಮಿತ್ ಶಾ, ಅಜಿತ್ ದೋವಲ್ ಮತ್ತು ಜ್ಞಾನೇಶ್ ಕುಮಾರ್ ಇದ್ದಾರೆ ಎಂದು ಹೇಳಿದ್ದಾರೆ.

# ಮೋದಿ-ಶಾ ಸರ್ವಾಧಿಕಾರಿ ಧೋರಣೆ: ಬಿ.ಕೆ.ಹರಿಪ್ರಸಾದ್

**ಬೆಂಗಳೂರು, ಅ.12:** ಬಿಜೆಪಿ ಮತ್ತು ಅಮಿತ್ ಶಾ, ಪ್ರಧಾನಿ ಮೋದಿ ಅವರು ಸರ್ವಾಧಿಕಾರಿ ಧೋರಣೆ ತೋರುತ್ತಿದ್ದಾರೆ. ಚುನಾವಣಾ ಆಯೋಗ ಸಂಪೂರ್ಣ ಏಕಪಕ್ಷೀಯವಾಗಿ ಕಾರ್ಯನಿರ್ವಹಿಸುತ್ತಿದೆ. ಸುಪ್ರೀಂಕೋರ್ಟ್ ಕೂಡ ಸಂವಿಧಾನ ಮತ್ತು ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಕಾಪಾಡುವ ವಿಚಾರದಲ್ಲಿ ತಟಸ್ಥವಾಗಿದೆ" ಎಂದು ಕೆಪಿಸಿಸಿ ಅಧ್ಯಕ್ಷ ಹರಿಪ್ರಸಾದ್ ಆರೋಪಿಸಿದರು.

ದೆಹಲಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿ, ಬಿಜೆಪಿ ಸರ್ಕಾರ ಮತ್ತು ಕೇಂದ್ರ ಸಂಸ್ಥೆಗಳ ವಿರುದ್ಧ ತೀವ್ರ ಆರೋಪಗಳನ್ನು ಮಾಡಿದರು. ವಿದ್ಯಾರ್ಥಿಗಳ ಭವಿಷ್ಯದ ಬಗ್ಗೆ ಬಿಜೆಪಿಗೆ ಯಾವುದೇ ಕಾಳಜಿ ಇಲ್ಲ ಎಂದು ಅವರು ಹೇಳಿದರು. "ವೇಳಾಪಟ್ಟಿ ತಯಾರಿಸುವಾಗಲೇ ಎಲ್ಲವನ್ನೂ ಮುಂಚಿತವಾಗಿ ಯೋಚನೆ ಮಾಡಿರುತ್ತಾರೆ. ಆದರೆ ಮಕ್ಕಳ ಭವಿಷ್ಯದ ದೃಷ್ಟಿಯಿಂದ ಪರೀಕ್ಷೆ ಮುಖ್ಯವಾಗಿದೆ" ಎಂದರು. ಸುಪ್ರೀಂಕೋರ್ಟ್ ನಡೆಯ ವಿರುದ್ಧ ಕಾಂಗ್ರೆಸ್ ನಾಯಕರು ಒಟ್ಟಾಗಿ ಪ್ರತಿಭಟನೆ ನಡೆಸುತ್ತಿದ್ದಾರೆ ಎಂದು ಅವರು ತಿಳಿಸಿದರು. "ನಾವು ಸಿಜೆಐಗೆ ಮನವಿ ಸಲ್ಲಿಸಲು ಮುಂದಾಗಿದ್ದೇವೆ. ಕಾಂಗ್ರೆಸ್ ನಾಯಕರೆಲ್ಲರೂ ಒಟ್ಟಾಗಿ ಸುಪ್ರೀಂಕೋರ್ಟ್‌ಗೆ ಮೆರವಣಿಗೆ ಮಾಡುತ್ತಿದ್ದೇವೆ. ಸುಪ್ರೀಂಕೋರ್ಟ್ ಮುಚ್ಚಳಿಕೆ ಬರೆದುಕೊಟ್ಟು ಅದರ ವಿರುದ್ಧ ನಡೆದುಕೊಂಡಿದೆ" ಎಂದು ಹರಿಪ್ರಸಾದ್ ಆಕ್ರೋಶ ವ್ಯಕ್ತಪಡಿಸಿದರು. ಬಿಜೆಪಿಯ ಹುಟ್ಟು ಅರಾಜಕತೆಯಿಂದ ಆಗಿದೆ ಎಂದು ಆರೋಪಿಸಿದ ಅವರು, "ಸಂವಿಧಾನ ಮತ್ತು ಪ್ರಜಾಪ್ರಭುತ್ವ ವ್ಯವಸ್ಥೆಯ ವಿರುದ್ಧ ಬಿಜೆಪಿ ಇದೆ ಎಂದು ದೂರಿದರು.

# ಮತಗಳ್ಳತನದ ವಿರುದ್ಧ ಕರ್ನಾಟಕದಲ್ಲಿ ತನಿಖೆ ಮುಂದುವರಿಯಲಿದೆ: ಸಿಎಂ

ಮೂರನೇ ಪುಟದಿಂದ.....

ಕಾರ್ಯಕರ್ತರಿಂದ ಮಾಡಬಾರದ್ದನೆಲ್ಲಾ ಮಾಡಿಸಿಕೊಂಡು ಅರಾಜಕತೆ ಸೃಷ್ಟಿ ಮಾಡಿರುವವರು ಬಿಜೆಪಿಯವರು. ಅವರು ಮಾಡಿರುವ ತಪ್ಪನ್ನು ಮುಚ್ಚಿಕೊಳ್ಳಲೇ ಬೇಕಲ್ಲವೇ ಮತದಾನದ ಹಕ್ಕನ್ನು ಕಿತ್ತು ಹಾಕಲು ಹೊರಟವರು ಬಿಜೆಪಿಯವರು. ಅಪರಾಧ ಮಾಡಿ ಬಡವರ ವಿರುದ್ಧ ಕೆಲಸ ಮಾಡಿದ್ದಾರೆ ಎಂದು ಕಿಡಿಕಾರಿದರು.

ನಮ್ಮ ಪಕ್ಷದ ಮುಖಂಡರು, ಕಾರ್ಯಕರ್ತರ ಬಳಿ ನಾನು ಮನವಿ ಮಾಡುತ್ತೇನೆ. ಎಚ್ಚರಿಕೆಯಿಂದಿರಿ, ಮತಗಳು ಕಳೆದುಕೊಂಡಿರುವವರು ಬಿಎಲ್‌ಎ, ಬಿಎಲ್‌ಓಗಳಿಗೆ ಮನವರಿಕೆ ಮಾಡಿ. ಜನರ ಮತದಾನದ ಹಕ್ಕನ್ನು ಉಳಿಸಬೇಕು" ಎಂದರು.

"ಇಂಡಿಯಾ ಒಕ್ಕೂಟದ ಪಕ್ಷಗಳ ನಾಯಕರೆಲ್ಲರೂ ಒಟ್ಟಿಗೆ ಕೇಂದ್ರ ಸರ್ಕಾರದ ಧೋರಣೆ ವಿರುದ್ಧ ಸುಪ್ರೀಂಕೋರ್ಟ್ ಗೆ ಅರ್ಜಿ ಸಲ್ಲಿಸಿದ್ದೇವೆ. ನಮಗೆ ನ್ಯಾಯ ದೊರಕುತ್ತದೆ ಎನ್ನುವ ವಿಶ್ವಾಸವಿದೆ. "ಮತಗಳ್ಳತನ ವಿರೋಧಿಸಿ ದೆಹಲಿಯಲ್ಲಿ ನಡೆದ ಪ್ರತಿಭಟನೆಗೆ ಲಕ್ಷಾಂತರ ಜನ ಸೇರಿದ್ದನ್ನು ಮಾಧ್ಯಮಗಳೇ ಬಿತ್ತರಿಸಿವೆ. ಲೆಕ್ಕಕ್ಕೆ ಸಿಗದಷ್ಟು ಜನ ಸೇರಿದ್ದರು. ನವರಾತ್ರಿ ಸಮಯದಲ್ಲಿ ಕರ್ನಾಟಕದಿಂದ ಸಚಿವರು, ನೂರಕ್ಕೂ ಹೆಚ್ಚು ಶಾಸಕರು, 300ಕ್ಕೂ ಹೆಚ್ಚು ಪದಾಧಿಕಾರಿಗಳು ಭಾಗವಹಿಸಿದ್ದರು" ಎಂದರು.

**ಅಡ್ಡಮತದಾನ ಮಾಡಿದ 12 ಶಾಸಕರ ಹೆಸರು ಹೇಳಲು ಪ್ರತಿಪಕ್ಷ ನಾಯಕರಿಗೆ ತಿಳಿಸಿ**

ಸಾಕಷ್ಟು ಶಾಸಕರು ಬಿಜೆಪಿ ಸೇರಲು ಉತ್ಸುಕರಾಗಿದ್ದಾರೆ ಎನ್ನುವ ವಿಜಯೇಂದ್ರ ಹೇಳಿಕೆ ಬಗ್ಗೆ ಕೇಳಿದಾಗ, "ಮೊದಲು ಅವರನ್ನು ಅದಷ್ಟು ಬೇಗ ಕರೆಸಿಕೊಳ್ಳಲಿ. ತಡಮಾಡುವುದು ಬೇಡ. ವಿಜಯೇಂದ್ರ ಹಾಗೂ ಕುಮಾರಸ್ವಾಮಿ ಅವರಿಗೆ ಅಡ್ಡ ಮತದಾನ ಮಾಡಿದ ತಮ್ಮ 12 ಜನ ಶಾಸಕರು ಯಾರು ಎಂದು ಹೇಳಲು ಆಗಲಿಲ್ಲ. ಅವರು ಎನ್ ಡಿಎ ಸರಿಯಿಲ್ಲ ಎಂದು ನಮಗೆ ಮತ ಹಾಕಿದ್ದಾರೆ" ಎಂದು ಲೇವಡಿ ಮಾಡಿದರು. ಅಡ್ಡ ಮತದಾನ ಮಾಡಿದ 12 ಶಾಸಕರನ್ನು ಕಾಂಗ್ರೆಸ್ ಪಕ್ಷಕ್ಕೆ ಸೇರಿಸಿಕೊಳ್ಳುವಿರಾ ಎಂದಾಗ, "ಅದು ಗುಪ್ತ ಮತದಾನ. ಈಗ ಆ ವಿಚಾರ ಬೇಡ" ಎಂದರು.

# ಪ್ರತಿಭಟನೆ ತಡೆಯಲು ಗೃಹಬಂಧನ: ಪೊಲೀಸರಿಗೆ ತರಾಟೆ

**ನವದೆಹಲಿ, ಅ. 12:** ಏಕಪಕ್ಷೀಯ ನಿರ್ಧಾರ ಕೈಗೊಂಡ ಮುಖ್ಯ ಚುನಾವಣಾ ಆಯುಕ್ತ (ಸಿಇಸಿ) ಜ್ಞಾನೇಶ್‌ಕುಮಾರ್ ರಾಜೀನಾಮೆಗೆ ಒತ್ತಾಯಿಸಿ ದೆಹಲಿಯ ಜಂತರ್ ಮಂತರ್‌ನಲ್ಲಿ ನಡೆಯಬೇಕಿದ್ದ ಪ್ರತಿಭಟನೆಯಲ್ಲಿ ಭಾಗವಹಿಸದಂತೆ ತಡೆಯಲು ಸಾಮಾಜಿಕ ಕಾರ್ಯಕರ್ತ ನದೀಮ್ ಖಾನ್ ಅವರನ್ನು ಅಕ್ರಮವಾಗಿ ಗೃಹಬಂಧನದಲ್ಲಿರಿಸಲಾಗಿತ್ತು ಎಂಬ ಆರೋಪಕ್ಕೆ ಸಂಬಂಧಿಸಿದಂತೆ ದೆಹಲಿ ಹೈಕೋರ್ಟ್, ದೆಹಲಿ ಪೊಲೀಸರನ್ನು ತೀವ್ರವಾಗಿ ತರಾಟೆಗೆ ತೆಗೆದುಕೊಂಡಿದೆ.




ಸೋಮವಾರ ವಿಚಾರಣೆ ನಡೆಸಿದ ನಿಕಟಪೂರ್ವ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ನಿತಿನ್ ವಾಸುದೇವ್ ಸಾಂಬ್ರೆ ಮತ್ತು ನ್ಯಾಯಮೂರ್ತಿ ಸಂಜಯ್ ಶರ್ಮಾ ಅವರನ್ನೊಳಗೊಂಡ ವಿಭಾಗೀಯ ಪೀಠವು, ನಿಮ್ಮ ಕರ್ತವ್ಯವನ್ನು ನಿರ್ವಹಿಸುವ ಹಕ್ಕು ನಿಮಗಿದೆ, ಆದರೆ ಒಬ್ಬ ವ್ಯಕ್ತಿಯ ಮನೆಗೆ ನೀವು ಹೇಗೆ ಪ್ರವೇಶಿಸುತ್ತೀರಾ ಅವರನ್ನು ಬಂಧಿಸುವುದಕ್ಕೆ ನಿಮಗಿರುವ ಕಾನೂನಾತ್ಮಕ ಆಧಾರವೇನು ಎಂದು ಪೊಲೀಸರಿಗೆ ಕಠಿಣವಾಗಿ ಪ್ರಶ್ನಿಸಿದೆ. ಪ್ರತಿಭಟನೆಗೆ ಅನುಮತಿ ನಿರಾಕರಿಸುವುದು ಪೊಲೀಸರ ಹಕ್ಕಾಗಿದ್ದರೂ, ಕಾನೂನುಬಾಹಿರವಾಗಿ ಮನೆಗೆ ನುಗ್ಗಿ ಅವರ ಚಲನವಲನಗಳನ್ನು ನಿರ್ಬಂಧಿಸುವುದು ಸೂಕ್ತವಲ್ಲ ಎಂದು ಕೋರ್ಟ್ ಕಳವಳ ವ್ಯಕ್ತಪಡಿಸಿದೆ.

ವಿಚಾರಣೆ ವೇಳೆ ದೆಹಲಿ ಪೊಲೀಸರ ಪರ ವಕೀಲರು ವಾದ ಮಂಡಿಸಿ, ನಾವು ನದೀಮ್ ಖಾನ್ ಅವರನ್ನು ಬಂಧಿಸಿಲ್ಲ ಅಥವಾ ವಶಕ್ಕೆ ಪಡೆದಿಲ್ಲ. ಪ್ರತಿಭಟನೆಗೆ ಅನುಮತಿ ನಿರಾಕರಿಸಲಾಗಿದ್ದರೂ ಅವರು ಭಾಗವಹಿಸುತ್ತಾರೆ ಎಂಬ ಮಾಹಿತಿ ಬಂದಿದ್ದರಿಂದ, ಕೇವಲ ವಿಚಾರಣೆಗೆ ಮತ್ತು ಅವರ ಚಲನವಲನ ತಡೆಯಲು ಭೇಟಿ ನೀಡಿದ್ದೆವು ಎಂದು ತಿಳಿಸಿದ್ದಾರೆ.

ಆದರೆ ನದೀಮ್ ಖಾನ್ ಅವರ ಪರ ವಕೀಲರು, ಪೊಲೀಸರು ಕಚೇರಿ, ಮನೆಗೆ ಆಗಮಿಸಿ ಸುಮಾರು 8 ಗಂಟೆಗಳ ಕಾಲ ಗೃಹಬಂಧನದಲ್ಲಿಸಿ ನಿರಂತರ ನಿಗಾದಲ್ಲಿಟ್ಟಿದ್ದರು. ಪದೇ ಪದೇ ಕರೆ ಮಾಡಿ ಕಿರುಕುಳ ನೀಡುತ್ತಿದ್ದರು ಎಂದು ಆರೋಪಿಸಿದ್ದಾರೆ.

ಪ್ರಕರಣದ ಗಂಭೀರತೆಯನ್ನು ಪರಿಗಣಿಸಿದ ದೆಹಲಿ ಹೈಕೋರ್ಟ್, ಈ ಬಗ್ಗೆ ಎರಡು ವಾರಗಳ ಒಳಗಾಗಿ ಸಮಗ್ರ ಸ್ಥಿತಿ ವರದಿ ಸಲ್ಲಿಸುವಂತೆ ದೆಹಲಿ ಪೊಲೀಸರಿಗೆ ನೋಟಿಸ್ ನೀಡಿದೆ. ಜತೆಗೆ, ಮುಂದಿನ ದಿನಗಳಲ್ಲಿ ಅರ್ಜಿದಾರರಿಗೆ ಯಾವುದೇ ಕಾರಣಕ್ಕೂ ಫೋನ್ ಕರೆಗಳ ಮೂಲಕ ಕಿರುಕುಳ ನೀಡಬಾರದು ಎಂದು ಪೊಲೀಸರ ಹೇಳಿಕೆಯನ್ನು ದಾಖಲಿಸಿಕೊಂಡು ಕೋರ್ಟ್ ನಿರ್ದೇಶನ ನೀಡಿದೆ.

# ಸೌರಭ್ ವಿರುದ್ಧ ಬಿಜೆಪಿ ಸಚಿವ ಸಲ್ಲಿಸಿದ್ದ ಅರ್ಜಿ ವಜಾ

**ನವದೆಹಲಿ, ಅ.12:** ಆಮ್ ಆದ್ಮಿ ಪಕ್ಷದ ನಾಯಕ ಸೌರಭ್ ಭಾರದ್ವಾಜ್ ವಿರುದ್ಧ ಬಿಜೆಪಿ ನಾಯಕ, ದೆಹಲಿ ಸಚಿವ ಪರ್ವೇಶ್ ವರ್ಮಾ ಸಲ್ಲಿಸಿದ್ದ ಕ್ರಿಮಿನಲ್ ಮಾನನಷ್ಟ ದೂರು ಪ್ರಕರಣವನ್ನು ದೆಹಲಿಯ ರೌಸ್ ಅವೆನ್ಯೂ ನ್ಯಾಯಾಲಯವು ವಜಾಗೊಳಿಸಿದೆ. ಸಾಮಾಜಿಕ ಜಾಲತಾಣಗಳಲ್ಲಿ ಪ್ರಶ್ನೆಗಳನ್ನು ಕೇಳುವುದು ಮಾನನಷ್ಟ ಎನಿಸಿಕೊಳ್ಳುವುದಿಲ್ಲ ಎಂದು ಕೋರ್ಟ್ ಸ್ಪಷ್ಟಪಡಿಸಿದೆ. ಶಾಲೆಯೊಂದಕ್ಕೆ ಸಂಬಂಧಿಸಿದ ಪೋಕ್ಸೋ ಪ್ರಕರಣದ ವಿಷಯದಲ್ಲಿ ಸೌರಭ್ ಭಾರದ್ವಾಜ್ ಅವರು ತಮ್ಮ ಸೋಷಿಯಲ್ ಮೀಡಿಯಾ ಖಾತೆಗಳಲ್ಲಿ ಪೋಸ್ಟ್ ಮಾಡಿದ್ದರು.ಈ ಪೋಸ್ಟ್‌ಗಳು ತಮ್ಮ ಮತ್ತು ತಮ್ಮ ಕುಟುಂಬದ ತೇಜೋವಧೆ ಮಾಡುವಂತಿದ್ದು, ಸುಳ್ಳು ಆರೋಪಗಳಿಂದ ಕೂಡಿದೆ ಎಂದು ಪರ್ವೇಶ್ ವರ್ಮಾ ಆರೋಪಿಸಿದ್ದರು. ಅಲ್ಲದೆ, ತಮಗೂ, ಆ ಶಾಲೆಗೂ ಯಾವುದೇ ಸಂಬಂಧವಿಲ್ಲ ಎಂದು ಸ್ಪಷ್ಟಪಡಿಸಿ, ಭಾರದ್ವಾಜ್ ವಿರುದ್ಧ ಕ್ರಿಮಿನಲ್ ಮಾನನಷ್ಟ ಮೊಕದ್ದಮೆ ದಾಖಲಿಸಿದ್ದರು. ಸಾರ್ವಜನಿಕ ಜೀವನದಲ್ಲಿರುವವರ ಬಳಿ ಪ್ರಶ್ನೆಗಳನ್ನು ಕೇಳುವುದು ಮಾನನಷ್ಟದ ವ್ಯಾಪ್ತಿಗೆ ಬರುವುದಿಲ್ಲ ಎಂದು ಅಭಿಪ್ರಾಯಪಟ್ಟು ದೂರು ಅರ್ಜಿಯನ್ನು ರದ್ದುಗೊಳಿಸಿದೆ.

# ಸಿಜೆಪಿ ಪ್ರತಿಭಟನೆಯಲ್ಲಿ ಭಾಗಿ: ನಟನ ವಿರುದ್ಧ ಬಿಜೆಪಿ ನಾಯಕ ದೂರು

**ನವದೆಹಲಿ, ಅ.12:** ಬಾಲಿವುಡ್ ನಟ ಇಮ್ರಾನ್ ಖಾನ್ ಅವರ ಪೌರತ್ವ ಹಾಗೂ ವಲಸೆ ಸ್ಥಿತಿಗತಿ ಕುರಿತು ವಿವಾದ ಉಂಟಾಗಿದೆ. ಅಕ್ಟೋಬರ್ 10ರಂದು ಮುಂಬೈನ ಆಗಸ್ಟ್ ಕ್ರಾಂತಿ ಮೈದಾನದಲ್ಲಿ ನಡೆದ ಪ್ರತಿಭಟನೆಯಲ್ಲಿ ಭಾಗವಹಿಸಿದ್ದ ಇಮ್ರಾನ್‌ಖಾನ್ ವಿರುದ್ಧ ಕ್ರಮ ಕೈಗೊಳ್ಳುವಂತೆ ಬಿಜೆಪಿ ನಾಯಕ ಹಾಗೂ ಮಾಜಿ ಸಂಸದ ಕಿರೀಟ್ ಸೋಮಯ್ಯ ಮುಂಬೈ ಪೊಲೀಸರಿಗೆ ಲಿಖಿತ ದೂರು ನೀಡಿದ್ದಾರೆ. ಇಮ್ರಾನ್‌ಖಾನ್ ವಿದೇಶಿ ಪ್ರಜೆಯಾಗಿದ್ದು, ಸಾಗರೋತ್ತರ ಭಾರತೀಯ ನಾಗರಿಕ ಕಾರ್ಡ್ ಹೊಂದಿದ್ದಾರೆ. ಅಕ್ರಮ ರಾಜಕೀಯ ಪ್ರತಿಭಟನೆಯಲ್ಲಿ ಭಾಗವಹಿಸುವ ಮೂಲಕ ಅವರು ಒಸಿಐ ನಿಯಮಗಳು ಹಾಗೂ ವೀಸಾ ಷರತ್ತುಗಳನ್ನು ಉಲ್ಲಂಘಿಸಿದ್ದಾರೆ ಎಂದು ಸೋಮಯ್ಯ ಆರೋಪಿಸಿದ್ದಾರೆ.

ಅಕ್ಟೋಬರ್ 11ರಂದು ಮುಂಬೈನ ಗಾಮ್‌ದೇವಿ ಪೊಲೀಸ್ ಠಾಣೆಗೆ ಸಲ್ಲಿಸಿರುವ ದೂರಿನಲ್ಲಿ, ಅಕ್ಟೋಬರ್ 10ರಂದು ದಾಖಲಾಗಿರುವ ಎಫ್‌ಐಆರ್ ಸಂಖ್ಯೆ 813 ಅನ್ನು ಸೋಮಯ್ಯ ಉಲ್ಲೇಖಿಸಿದ್ದಾರೆ. ಈಗಾಗಲೇ ದಾಖಲಾಗಿರುವ ಎಫ್‌ಐಆರ್‌ನಲ್ಲಿ ಇಮ್ರಾನ್‌ಖಾನ್ ಹೆಸರು ಇದ್ದರೂ, ಅವರ ವಿದೇಶಿ ಪೌರತ್ವ ಹಾಗೂ ಒಸಿಐ ನಿಯಮಗಳ ಉಲ್ಲಂಘನೆ ಆರೋಪಗಳ ಬಗ್ಗೆ ಪ್ರತ್ಯೇಕ ತನಿಖೆ ನಡೆಸಬೇಕು. ಅಗತ್ಯವಿದ್ದರೆ ಹೆಚ್ಚುವರಿ ಕಾನೂನು ವಿಧಿಗಳನ್ನು ಅನ್ವಯಿಸಿ, ಅವರನ್ನು ಭಾರತದಿಂದ ಹೊರಗೆ ಕಳುಹಿಸುವ ಕ್ರಮವನ್ನೂ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

ಈ ಕುರಿತು ಹಿರಿಯ ಪೊಲೀಸ್ ಅಧಿಕಾರಿಗಳ ಗಮನಕ್ಕೆ ತಂದಿದ್ದರೂ ಕ್ರಮಕೈಗೊಂಡಿಲ್ಲ ಎಂದು ಆರೋಪಿಸಿರುವ ಸೋಮಯ್ಯ, ಸೋಮವಾರ ಮಧ್ಯಾಹ್ನ 12.30ಕ್ಕೆ ಗಾಮ್‌ದೇವಿ ಪೊಲೀಸ್ ಠಾಣೆಗೆ ಭೇಟಿ ನೀಡಿ ಪ್ರಕರಣದ ಕುರಿತು ವಿಚಾರಿಸುವುದಾಗಿ ತಿಳಿಸಿದ್ದಾರೆ.

ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ರಾಜೀನಾಮೆಗೆ ಆಗ್ರಹಿಸಿ ಅಕ್ಟೋಬರ್ 10ರಂದು



ಮುಂಬೈನ ಆಗಸ್ಟ್ ಕ್ರಾಂತಿ ಮೈದಾನದಲ್ಲಿ ಪ್ರತಿಭಟನೆ ಆಯೋಜಿಸಲಾಗಿತ್ತು. ಪ್ರತಿಭಟನಾಕಾರರು ಮೈದಾನದಲ್ಲಿ ಜಮಾಯಿಸುವುದನ್ನು ತಡೆಯಲು ಪೊಲೀಸರು ಕ್ರಮ ಕೈಗೊಂಡಿದ್ದು, ಈ ವೇಳೆ ಇಮ್ರಾನ್‌ಖಾನ್ ಸೇರಿದಂತೆ ನೂರಾರು ಮಂದಿಯನ್ನು ವಶಕ್ಕೆ ಪಡೆಯಲಾಗಿತ್ತು. ಪ್ರಕರಣಕ್ಕೆ ಸಂಬಂಧಿಸಿದಂತೆ ಇಮ್ರಾನ್ ಖಾನ್, ತುಷಾರ್ ಗಾಂಧಿ ಸೇರಿದಂತೆ ಹಲವರ ವಿರುದ್ಧ ಪ್ರಕರಣ ದಾಖಲಿಸಲಾಗಿದೆ. ಅಧಿಕಾರಿಗಳ ಆದೇಶ ಉಲ್ಲಂಘನೆ, ಅಕ್ರಮವಾಗಿ ತಡೆಯೊಡ್ಡುವುದು ಹಾಗೂ ಕಾನೂನುಬಾಹಿರ ಸಭೆ ನಡೆಸಿದ ಆರೋಪಗಳಿಗೆ ಸಂಬಂಧಿಸಿದಂತೆ ಈ ಪ್ರಕರಣ ದಾಖಲಾಗಿದೆ.

ಇಮ್ರಾನ್ ಖಾನ್ ಪ್ರಸ್ತುತ ಒಸಿಐ ಕಾರ್ಡ್ ಹೊಂದಿದ್ದಾರೆಯೇ ಎಂಬ ಬಗ್ಗೆ ಅಧಿಕೃತ ದೃಢೀಕರಣ ಇನ್ನೂ ಲಭ್ಯವಾಗಿಲ್ಲ. ಅವರ ಒಸಿಐ ಸ್ಥಿತಿಗತಿ ಹಾಗೂ ಭಾರತದಲ್ಲಿ ವಾಸ್ತವ್ಯಕ್ಕೆ ಸಂಬಂಧಿಸಿದ ಷರತ್ತುಗಳ ಬಗ್ಗೆ ಮಾಹಿತಿ ಪಡೆಯಲು ವಲಸೆ ಅಧಿಕಾರಿಗಳನ್ನು ಸಂಪರ್ಕಿಸಲಾಗುತ್ತಿದೆ ಎಂದು ಗಾಮ್‌ದೇವಿ ಪೊಲೀಸ್ ಠಾಣೆಯ ಹಿರಿಯ ಇನ್‌ಸ್ಪೆಕ್ಟರ್ ಪ್ರಶಾಂತ್ ಮೋಹಿತೆ ತಿಳಿಸಿದ್ದಾರೆ. ಇಮ್ರಾನ್ ಖಾನ್ ಅಮೆರಿಕದಲ್ಲಿ ಜನಿಸಿದ್ದು, ಈ ಹಿಂದೆ ತಾವು ಅಮೆರಿಕದ ಪ್ರಜೆ ಎಂಬುದನ್ನು ಸಾರ್ವಜನಿಕವಾಗಿ ಒಪ್ಪಿಕೊಂಡಿದ್ದರು ಎಂದು ವರದಿಯಾಗಿದೆ.

# ನೀರಿದ್ದರೆ ತಾನೇ ಹರಿಸಲು ಸಾಧ್ಯ? ಕರ್ನಾಟಕದ ಬರ ಪರಿಸ್ಥಿತಿಯ ವಾದಕ್ಕೆ ಮಹತ್ವ

## ಕಾವೇರಿ ನೀರು ಹಂಚಿಕೆ: ತಮಿಳುನಾಡಿಗೆ ಸುಪ್ರೀಂ ಕೋರ್ಟ್ ಪ್ರಶ್ನೆ, ವಿಚಾರಣೆ ಬಳಿಕ ಆದೇಶ ಕಾಯ್ದಿರಿಸಿದ ನ್ಯಾಯಾಲಯ

**ನವದೆಹಲಿ, ಅ.12:** ಕಾವೇರಿ ನದಿಯಿಂದ ಬಾಕಿ ಉಳಿದಿರುವ 11 ಟಿಎಂಸಿ ನೀರನ್ನು ಬಿಡುಗಡೆ ಮಾಡುವಂತೆ ತಮಿಳುನಾಡು ಸರ್ಕಾರ ಸಲ್ಲಿಸಿದ್ದ ಅರ್ಜಿ ವಿಚಾರಣೆ ವೇಳೆ ಸುಪ್ರೀಂ ಕೋರ್ಟ್ ಮಹತ್ವದ ಪ್ರಶ್ನೆ ಎತ್ತಿದೆ. ಮಳೆ ಕೊರತೆಯಿಂದ ಎರಡೂ ರಾಜ್ಯಗಳು ಸಂಕಷ್ಟ ಎದುರಿಸುತ್ತಿರುವಾಗ ಬಾಕಿ ನೀರನ್ನು ಹೇಗೆ ಬಿಡುಗಡೆ ಮಾಡಲು ಸಾಧ್ಯ ಎಂಬ ಅರ್ಥದಲ್ಲಿ ನ್ಯಾಯಪೀಠ ಅಸಮಾಧಾನ ವ್ಯಕ್ತಪಡಿಸಿದೆ. ವಿಚಾರಣೆ ಬಳಿಕ ನ್ಯಾಯಾಲಯ ಆದೇಶವನ್ನು ಕಾಯ್ದಿರಿಸಿದೆ.

ನ್ಯಾಯಮೂರ್ತಿಗಳಾದ ವಿಕ್ರಮ್‌ನಾಥ್ ಮತ್ತು ಅಪರೇಶ್ ಕುಮಾರ್ ಸಿಂಗ್ ಅವರನ್ನೊಳಗೊಂಡ ನ್ಯಾಯಪೀಠದ ಮುಂದೆ ಸೋಮವಾರ ಅರ್ಜಿ ವಿಚಾರಣೆ ನಡೆಯಿತು. ತಮಿಳುನಾಡು ಪರ ವಾದ ಮಂಡಿಸಿದ ವಕೀಲರು, ರಾಜ್ಯದಲ್ಲಿ ನೀರಿನ ಕೊರತೆಯಿಂದ ಕುರುವೈ ಮತ್ತು ಸಾಂಬಾ ಬೆಳೆಗಳಿಗೆ ಹಾನಿಯಾಗುವ ಆತಂಕವಿದೆ. ಪ್ರಸ್ತುತ 3,000 ಕ್ಯೂಸೆಕ್ ನೀರು ಸಾಕಾಗುವುದಿಲ್ಲ. ಕರ್ನಾಟಕದಿಂದ ಬಾಕಿ ಉಳಿದಿರುವ



11 ಟಿಎಂಸಿ ನೀರನ್ನು ಬಿಡುಗಡೆ ಮಾಡಲು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರಕ್ಕೆ ನಿರ್ದೇಶನ ನೀಡಬೇಕು ಎಂದು ಮನವಿ ಮಾಡಿದರು.

ಇದಕ್ಕೆ ಪ್ರತಿಕ್ರಿಯಿಸಿದ ನ್ಯಾಯಪೀಠ, ಮಳೆ ಕೊರತೆಯಿರುವಾಗ ಬಾಕಿ ನೀರನ್ನು ಬಿಡುಗಡೆ ಮಾಡುವುದು ಹೇಗೆ ಸಾಧ್ಯ ಎಂಬ ಪ್ರಶ್ನೆಯನ್ನು ಮುಂದಿಟ್ಟಿತು. ಸಾಮಾನ್ಯ ಮಳೆಯಾಗಿದ್ದರೆ ಪರಿಸ್ಥಿತಿ ಬೇರೆ ಇರುತ್ತಿತ್ತು ಎಂಬ ಅಭಿಪ್ರಾಯವನ್ನೂ ನ್ಯಾಯಾಲಯ ವ್ಯಕ್ತಪಡಿಸಿತು. ಕರ್ನಾಟಕದ ಪರ ವಕೀಲರು, ರಾಜ್ಯದ ಹಲವು ತಾಲೂಕುಗಳಲ್ಲಿ ಬರ ಘೋಷಿಸಲಾಗಿದ್ದು, ಜಲಾಶಯಗಳಲ್ಲಿ ಲಭ್ಯವಿರುವ ನೀರನ್ನು ಎಚ್ಚರಿಕೆಯಿಂದ ಬಳಸಬೇಕಿದೆ ಎಂದು ವಾದಿಸಿದರು. ಬೆಂಗಳೂರು ನಗರಕ್ಕೆ ಕುಡಿಯುವ ನೀರಿನ ಅಗತ್ಯವೂ ಇರುವುದರಿಂದ ಜಲಾಶಯಗಳ ನೀರನ್ನು ಸಂರಕ್ಷಿಸುವುದು ಅನಿವಾರ್ಯವಾಗಿದೆ ಎಂದು ತಿಳಿಸಿದರು.

ಕಾವೇರಿ ಜಲಾಶಯಗಳಲ್ಲಿ 57 ಟಿಎಂಸಿ ನೀರು ಮಾತ್ರ ಲಭ್ಯವಿದೆ. ಬೆಂಗಳೂರು ನಗರಕ್ಕೆ ಕುಡಿಯುವ ನೀರಿಗಾಗಿ ಸುಮಾರು 40 ಟಿಎಂಸಿ ನೀರು ಅಗತ್ಯವಿದೆ. ಇಂತಹ ಪರಿಸ್ಥಿತಿಯಲ್ಲಿ ತಮಿಳುನಾಡಿನ ಬೇಡಿಕೆಯಂತೆ ಹೆಚ್ಚುವರಿ ನೀರು ಹರಿಸುವುದು ಕಷ್ಟ ಎಂದು ರಾಜ್ಯದ ಪರ ವಕೀಲರು ನ್ಯಾಯಾಲಯಕ್ಕೆ ವಿವರಿಸಿದರು. ತಮಿಳುನಾಡಿಗೆ ನವೆಂಬರ್‌ನಲ್ಲಿ ಈಶಾನ್ಯ ಮುಂಗಾರು ಮಳೆಯ ಲಾಭ ಸಿಗುವ ಸಾಧ್ಯತೆಯಿದೆ. ಆದರೆ ಕರ್ನಾಟಕಕ್ಕೆ ಅದರ ಪ್ರಯೋಜನ ದೊರೆಯುವುದಿಲ್ಲ. ಈ ಅಂಶಗಳನ್ನೂ ಪರಿಗಣಿಸಿ ನೀರು ಹಂಚಿಕೆ ಕುರಿತು ನಿರ್ಧಾರ ಕೈಗೊಳ್ಳಬೇಕಿದೆ ಎಂದು ಕರ್ನಾಟಕದ ಪರ ವಾದಿಸಲಾಯಿತು.

ಅಕ್ಟೋಬರ್ 7ರ ವೇಳೆಗೆ ಬಾಕಿ ಉಳಿದಿದೆ ಎನ್ನಲಾದ 11 ಟಿಎಂಸಿ ನೀರನ್ನು ತಕ್ಷಣ ಬಿಡುಗಡೆ ಮಾಡಬೇಕು ಎಂಬುದು ತಮಿಳುನಾಡಿನ ಪ್ರಮುಖ ಬೇಡಿಕೆಯಾಗಿದೆ. ಕಾವೇರಿ ನದಿ ನೀರು ನಿಯಂತ್ರಣ ಸಮಿತಿ ಹಾಗೂ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಹಿಂದಿನ ನಿರ್ದೇಶನಗಳು ಸಾಕಷ್ಟು ಪ್ರಮಾಣದ ನೀರು ತಲುಪಿಸುವಲ್ಲಿ ವಿಫಲವಾಗಿವೆ ಎಂದು ತಮಿಳುನಾಡು ವಾದಿಸಿದೆ.

ಅಕ್ಟೋಬರ್ 9ರಿಂದ 15 ದಿನಗಳ ಕಾಲ ಬಿಳಿಗುಂಡ್ಲು ಅಳತೆ ಕೇಂದ್ರದಲ್ಲಿ ಪ್ರತಿದಿನ 3,000 ಕ್ಯೂಸೆಕ್ ನೀರು ತಲುಪಿಸುವಂತೆ ಪ್ರಾಧಿಕಾರ ನಿರ್ದೇಶನ ನೀಡಿದೆ. ಆದರೆ, ಈ ಪ್ರಮಾಣವು ಬಾಕಿ ನೀರಿನ ಕೊರತೆಯನ್ನು ನೀಗಿಸಲು ಸಾಕಾಗುವುದಿಲ್ಲ ಎಂದು ತಮಿಳುನಾಡು ಹೇಳಿತು. ಎರಡೂ ರಾಜ್ಯಗಳ ವಾದಗಳನ್ನು ಆಲಿಸಿದ ಸುಪ್ರೀಂ ಕೋರ್ಟ್ ತೀರ್ಪನ್ನು ಕಾಯ್ದಿರಿಸಿದೆ.

# ಎಸ್‌ಸಿ/ಎಸ್‌ಟಿ ಮೀಸಲಾತಿ ಹೆಚ್ಚಳ: ಕರ್ನಾಟಕ ಜಾರಿಮಾಡಿದ್ದ ಕಾಯ್ದೆ ರದ್ದುಗೊಳಿಸಿದ ಹೈಕೋರ್ಟ್

**ಬೆಂಗಳೂರು, ಅ.12:** ಕರ್ನಾಟಕದಲ್ಲಿ ಪರಿಶಿಷ್ಟ ಜಾತಿ (ಎಸ್‌ಸಿ) ಮತ್ತು ಪರಿಶಿಷ್ಟ ಪಂಗಡಗಳಿಗೆ (ಎಸ್‌ಟಿ) ಮೀಸಲಾತಿ ಪ್ರಮಾಣವನ್ನು ಹೆಚ್ಚಿಸಿ ಜಾರಿಗೆ ತರಲಾಗಿದ್ದ ಕಾಯ್ದೆಯನ್ನು ಹೈಕೋರ್ಟ್ ರದ್ದುಗೊಳಿಸಿದೆ. ಶಿಕ್ಷಣ ಸಂಸ್ಥೆಗಳು ಹಾಗೂ ರಾಜ್ಯ ಸರ್ಕಾರಿ ಸೇವೆಗಳಲ್ಲಿ ಎಸ್‌ಸಿ ಮೀಸಲಾತಿಯನ್ನು ಶೇ.15ರಿಂದ ಶೇ.17ಕ್ಕೆ ಮತ್ತು ಎಸ್‌ಟಿ ಮೀಸಲಾತಿಯನ್ನು ಶೇ.3ರಿಂದ ಶೇ.7ಕ್ಕೆ ಹೆಚ್ಚಿಸಿದ್ದ ಸರ್ಕಾರದ ಕ್ರಮಕ್ಕೆ ನ್ಯಾಯಾಲಯ ತಡೆ ನೀಡಿದೆ.

ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಹಾಗೂ ನ್ಯಾಯಮೂರ್ತಿ ಕೆ.ಎಸ್. ಹೇಮಲೇಖಾ ಅವರನ್ನೊಳಗೊಂಡ ಹೈಕೋರ್ಟ್ ವಿಭಾಗೀಯ ಪೀಠ ಈ ಮಹತ್ವದ ಆದೇಶ ಹೊರಡಿಸಿದೆ. ಮೀಸಲಾತಿ ಹೆಚ್ಚಳವನ್ನು ಪ್ರಶ್ನಿಸಿ ಮಹೇಂದ್ರ ಕುಮಾರ್ ಮಿತ್ರಾ ಎಂಬುವರು ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಪೀಠ, ರಾಜ್ಯದಲ್ಲಿ ಒಟ್ಟು ಮೀಸಲಾತಿ ಪ್ರಮಾಣವನ್ನು ಶೇ.50ರಿಂದ ಶೇ.56ಕ್ಕೆ ಹೆಚ್ಚಿಸಿದ್ದ ಕ್ರಮವನ್ನು ರದ್ದುಗೊಳಿಸಿದೆ.

ಏನಿದು ಮೀಸಲಾತಿ ಹೆಚ್ಚಳ: ಈ ಹಿಂದೆ ಕರ್ನಾಟಕದಲ್ಲಿ ಪರಿಶಿಷ್ಟ ಜಾತಿಯವರಿಗೆ ಶೇ.15 ಹಾಗೂ ಪರಿಶಿಷ್ಟ ಪಂಗಡದವರಿಗೆ ಶೇ.3ರಷ್ಟು ಮೀಸಲಾತಿ ಜಾರಿಯಲ್ಲಿತ್ತು. ನ್ಯಾಯಮೂರ್ತಿ ನಾಗಮೋಹನ್ ದಾಸ್ ಸಮಿತಿಯು ಜನಸಂಖ್ಯೆಯ ಆಧಾರದ ಮೇಲೆ ಎಸ್‌ಸಿ ಮೀಸಲಾತಿಯನ್ನು ಶೇ.15ರಿಂದ ಶೇ.17ಕ್ಕೆ ಹಾಗೂ ಎಸ್‌ಟಿ ಮೀಸಲಾತಿಯನ್ನು ಶೇ.3ರಿಂದ ಶೇ.7ಕ್ಕೆ ಹೆಚ್ಚಿಸುವಂತೆ ಸರ್ಕಾರಕ್ಕೆ ಶಿಫಾರಸು ಮಾಡಿತ್ತು. ಸಮಿತಿಯ ವರದಿಗೆ ಸಂಬಂಧಿಸಿದಂತೆ ನಡೆದ ಸರ್ವಪಕ್ಷ ಸಭೆಯಲ್ಲಿ ಎಲ್ಲ ಪಕ್ಷಗಳೂ ಮೀಸಲಾತಿ ಹೆಚ್ಚಳದ ಪ್ರಸ್ತಾವನೆಗೆ ಒಪ್ಪಿಗೆ ಸೂಚಿಸಿದ್ದವು.




**ಬೊಮ್ಮಾಯಿ ಸರ್ಕಾರ ಸುಗ್ರೀವಾಜ್ಞೆ:**

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಮೀಸಲಾತಿ ಪ್ರಮಾಣವನ್ನು ಒಟ್ಟು ಶೇ.18ರಿಂದ ಶೇ.24ಕ್ಕೆ ಹೆಚ್ಚಿಸುವ ಸಂಬಂಧ ಅಂದಿನ ಬಸವರಾಜ ಬೊಮ್ಮಾಯಿ ನೇತೃತ್ವದ ಬಿಜೆಪಿ ಸರ್ಕಾರ ಕ್ರಮ ಕೈಗೊಂಡಿತ್ತು. ಈ ಸಂಬಂಧ ರಾಜ್ಯ ಸಚಿವ ಸಂಪುಟವು ಕರಡು ವಿಧೇಯಕಕ್ಕೆ ಅನುಮೋದನೆ ನೀಡಿದ ಬಳಿಕ ಸರ್ಕಾರ ಸುಗ್ರೀವಾಜ್ಞೆ ಹೊರಡಿಸಿತ್ತು. ರಾಜ್ಯಪಾಲರೂ ಸುಗ್ರೀವಾಜ್ಞೆಗೆ ಒಪ್ಪಿಗೆ ನೀಡಿದ್ದರು. ನಂತರ ಸರ್ಕಾರ ಅಧಿಕೃತ ರಾಜ್ಯಪತ್ರ ಪ್ರಕಟಿಸಿ, 103 ಉಪಜಾತಿಗಳನ್ನು ಒಳಗೊಂಡ ಪರಿಶಿಷ್ಟ ಜಾತಿಯ ಮೀಸಲಾತಿಯನ್ನು ಶೇ.15ರಿಂದ ಶೇ.17ಕ್ಕೆ ಹಾಗೂ 56 ಉಪಪಂಗಡಗಳನ್ನು ಒಳಗೊಂಡ ಪರಿಶಿಷ್ಟ ಪಂಗಡದ ಮೀಸಲಾತಿಯನ್ನು ಶೇ.3ರಿಂದ ಶೇ.7ಕ್ಕೆ ಹೆಚ್ಚಿಸಿತ್ತು.

**50ರಿಂದ ಶೇ.56ಕ್ಕೆ ಏರಿಕೆ:** ಇದರಿಂದ ರಾಜ್ಯದಲ್ಲಿ ಒಟ್ಟು ಮೀಸಲಾತಿ ಪ್ರಮಾಣ ಶೇ.50ರಿಂದ ಶೇ.56ಕ್ಕೆ ಏರಿಕೆಯಾಗಿತ್ತು. ಇದೀಗ ಈ ಮೀಸಲಾತಿ ಹೆಚ್ಚಳವನ್ನು ಹೈಕೋರ್ಟ್ ರದ್ದುಗೊಳಿಸಿರುವುದು ರಾಜ್ಯದಲ್ಲಿ ಮಹತ್ವದ ಬೆಳವಣಿಗೆಯಾಗಿದೆ.

## ಪರಿಶಿಷ್ಟರ ಮೀಸಲಾತಿ ಹೆಚ್ಚಳ ರದ್ದುಪ್ರಶ್ನಿಸಿ ಸುಪ್ರೀಂನಲ್ಲಿ ರಿಟ್ ಅರ್ಜಿ ಸಲ್ಲಿಸಬೇಕು: ಸಂಸದ ಬಸವರಾಜ ಬೊಮ್ಮಾಯಿ ಸಲಹೆ

ರಾಜ್ಯ ಹೈಕೊರ್ಟ್ ಎಸ್‌ಸಿ/ಎಸ್‌ಟಿ ಮೀಸಲಾತಿ ಹೆಚ್ಚಳವನ್ನು ರದ್ದು ಪಡೆಸಿರುವುದನ್ನು ಪ್ರಶ್ನಿಸಿ ರಾಜ್ಯ ಸರ್ಕಾರ ಸುಪ್ರೀಂ ಕೋರ್ಟ್ ನಲ್ಲಿ ರಿಟ್ ಪಿಟಿಷನ್ ಹಾಕಬೇಕು. ಇಲ್ಲದಿದ್ದರೆ ನಾವೇ ಸುಪ್ರೀಂ ಕೋರ್ಟ್‌ಗೆ ತೆಗೆದುಕೊಂಡು ಹೋಗುತ್ತೇವೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ನಮ್ಮ ಸರ್ಕಾರ ಮೀಸಲಾತಿಯನ್ನು ಹೆಚ್ಚು ಮಾಡುವಂತಹ ಸಂದರ್ಭದಲ್ಲಿ ನ್ಯಾ.ನಾಗಮೋಹನ್ ದಾಸ್ ಅವರ ವರದಿ ಆಧಾರದ ಮೇಲೆ, ಅದಕ್ಕೆ ವಿಧಾನ ಮಂಡಲದ ಎರಡೂ ಸದನದಲ್ಲಿ ಕಾನೂನನ್ನು ಪಾಸ್ ಮಾಡಿ ಮಾಡಿರುವಂತದ್ದು. ಅದರ ಹಿಂದೆ ಸಂವಿಧಾನ ಎಸ್.ಸಿ, ಎಸ್.ಟಿ ಜನಾಂಗಕ್ಕೆ ಜನಸಂಖ್ಯೆ ಆಧಾರದ ಮೇಲೆ ಮೀಸಲಾತಿಯನ್ನು ಕೊಡುವ ಅವಕಾಶ ಇದೆ ಅನ್ನುವುದು ಸಂವಿಧಾನದಲ್ಲಿ ಇರುವ ಕಾರಣ ಮತ್ತು ನಾಗಮೋಹನ್ ದಾಸ್ ವರದಿ ಶಿಫಾರಸಿನ ಕಾರಣ ಇದು ಕಾನೂನನ್ನು ಮಾಡಿದೆ ಹೊರತಾಗಿ, ಇದು ಆದೇಶ ಅಲ್ಲ ಎಂದು ತಿಳಿಸಿದ್ದಾರೆ.



ಹಾಗೆ ಯಾರು ಪಿ.ಐ.ಎಲ್ ಹೋಗಿದ್ದಾರೆ ಅವರು ಎಸ್‌ಸಿ, ಎಸ್‌ಟಿ ಜನಾಂಗದ ಅಭಿವೃದ್ಧಿಯ ವಿರೋಧಿಗಳಾಗಿ ಪಿ.ಐ.ಎಲ್ ಹಾಕಿದ್ದರು. ರಾಜ್ಯ ಸರ್ಕಾರ ಇದನ್ನು ಖಂಡಿತವಾಗಿಯೂ ಸುಪ್ರೀಂ ಕೋರ್ಟ್‌ಗೆ ತೆಗೆದುಕೊಂಡು ಹೋಗಬೇಕು. ಮತ್ತು ಬೇರೆ ಬೇರೆ ರಾಜ್ಯಗಳಲ್ಲಿ 50%ಕ್ಕಿಂತ ಹೆಚ್ಚು ಮಿಸಲಾತಿ ಆಗಿದೆ. ತಮಿಳುನಾಡು, ಛತ್ತೀಸಗಢ ಸೇರಿದಂತೆ ಅನೇಕ ರಾಜ್ಯಗಳಲ್ಲಿ ಆಗಿದೆ, ಆ ಉದಾಹರಣೆ ಸಮೇತವಾಗಿ ಸುಪ್ರೀಂಕೋರ್ಟ್‌ನಲ್ಲಿ ಅರ್ಜಿ ಹಾಕಬೇಕು. ರಾಜ್ಯ ಸರ್ಕಾರ ಹಾಕದಿದ್ದರೆ ನಾವು ಸುಪ್ರೀಂ ಕೋರ್ಟ್‌ಗೆ ತೆಗೆದುಕೊಂಡು ಹೋಗುತ್ತೇವೆ ಎಂದು ತಿಳಿಸಿದ್ದಾರೆ.

# ತಾಪಂ, ಜಿಪಂ ಚುನಾವಣೆ; ಜಿಲ್ಲಾವಾರು ಸಭೆಗಳನ್ನು ಆರಂಭಿಸಿದ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ

ಬೆಂಗಳೂರು, ಅ.12: ಮುಂಬರುವ ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿ ಹಾಗೂ ಸದ್ಯ ಘೋಷಣೆಯಾಗಿರುವ ವಿಧಾನ ಪರಿಷತ್ ಚುನಾವಣೆಗೆ ಸಂಬಂಧಿಸಿದಂತೆ ಜೆಡಿಎಸ್ ರಾಜ್ಯಾಧ್ಯಕ್ಷ ಹಾಗೂ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಜಿಲ್ಲಾ ಅವರು ಘಟಕಗಳ ಪದಾಧಿಕಾರಿಗಳು ಹಾಗೂ ಮುಖಂಡರ ಸಭೆಗಳನ್ನು ಕರೆದು ಚರ್ಚೆ ನಡೆಸುತ್ತಿದ್ದಾರೆ.

ಇದರ ಆರಂಭದ ಭಾಗವಾಗಿ ಸೋಮವಾರ ಬೆಂಗಳೂರಿನ ಪಕ್ಷದ ಕೇಂದ್ರ ಕಚೇರಿ ಜೆಪಿ ಭವನದಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯ ಮುಖಂಡರನ್ನು ಕರೆದು ಸಚಿವರು ಮಾತುಕತೆ ನಡೆಸಿದರು.

ಸಂಘಟನೆಯ ಜೊತೆಗೆ ಮುಂಬರುವ ಚುನಾವಣೆಗಳನ್ನು ಎದುರಿಸುವ ನಿಟ್ಟಿನಲ್ಲಿ ಸಚಿವರು ಜಿಲ್ಲಾ ಮುಖಂಡರೊಂದಿಗೆ ಚರ್ಚೆ ನಡೆಸಿದರಲ್ಲವೇ; ತಾಲೂಕು ಮತ್ತು ಜಿಲ್ಲಾ ಪಂಚಾಯತಿ ಚುನಾವಣೆಗಳಿಗೆ ಅಭ್ಯರ್ಥಿಗಳ ಪಟ್ಟಿಯನ್ನು ಸಿದ್ಧ ಮಾಡುವಂತೆ ಜಿಲ್ಲಾ ಅಧ್ಯಕ್ಷರಿಗೆ ಸೂಚಿಸಿದರು. ಅಲ್ಲದೆ ಜಿಲ್ಲಾಮಟ್ಟದಲ್ಲಿ ಜೆಡಿಎಸ್ ಮತ್ತು ಬಿಜೆಪಿ ನಡುವಿನ ಮೈತ್ರಿ ಸಂಬಂಧಗಳು ಹೇಗಿವೆ ಹಾಗೂ ಎರಡು ಪಕ್ಷಗಳ ಮುಖಂಡರು ಮತ್ತು ಕಾರ್ಯಕರ್ತರ ನಡುವೆ ಸಮನ್ವಯತೆ ಯಾವ ರೀತಿಯಲ್ಲಿದೆ ಎಂಬ ಬಗ್ಗೆ ಸಚಿವರು ಜಿಲ್ಲಾ ಅಧ್ಯಕ್ಷರು ಹಾಗೂ ಮುಖಂಡರುಗಳಿಂದ ಮಾಹಿತಿಯನ್ನು ಪಡೆದುಕೊಂಡರು.



ಪದವೀಧರ ಮತ್ತು ಶಿಕ್ಷಕರ ಕ್ಷೇತ್ರಗಳಿಂದ ವಿಧಾನ ಪರಿಷತ್ತಿಗೆ ನಡೆಯುತ್ತಿರುವ ಚುನಾವಣೆಗೆ ಎನ್.ಡಿ.ಎ ಅಭ್ಯರ್ಥಿಗಳು ಕಣದಲ್ಲಿದ್ದು ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಬಿಜೆಪಿಯೊಂದಿಗೆ ಸಮನ್ವಯತೆಯಿಂದ ಕೆಲಸ ಮಾಡಬೇಕು ಎಂದು ಸಚಿವರು ಸೂಚಿಸಿದರು.

ಸಭೆಯಲ್ಲಿ ಎಲ್ಲಾ ವಿಧಾನಸಭಾ ಕ್ಷೇತ್ರಗಳ ಮುಖಂಡರು ತಾಲೂಕು ಘಟಕಗಳ ಅಧ್ಯಕ್ಷರು ಸೇರಿದಂತೆ ಪದಾಧಿಕಾರಿಗಳೆಲ್ಲರೂ ಭಾಗಿಯಾಗಿದ್ದರು.

ಶಿಡ್ಲಘಟ್ಟ ಶಾಸಕ ಮೇಲೂರು ರವಿ, ಜೆಡಿಎಸ್ ರಾಜ್ಯ ಕೋರ್ ಸಮಿತಿ ಅಧ್ಯಕ್ಷ ಎಂ.ಕೃಷ್ಣಾರೆಡ್ಡಿ, ವಿಧಾನ ಪರಿಷತ್ ಮಾಜಿ ಸದಸ್ಯ ಕೆ.ಎ. ತಿಪ್ಪೇಸ್ವಾಮಿ, ಜೆಡಿಎಸ್ ರಾಜ್ಯ ಮಹಿಳಾ ಘಟಕದ ಅಧ್ಯಕ್ಷೆ ರಶ್ಮಿ ರಾಮೇಗೌಡ, ಚಿಕ್ಕ ಬಳ್ಳಾಪುರ ಜಿಲ್ಲಾಧ್ಯಕ್ಷ ಮುನಿಯಪ್ಪ ಸೇರಿದಂತೆ ಅನೇಕ ಮುಖಂಡರು ಹಾಜರಿದ್ದರು.



ಬೆಂಗಳೂರಿನ ವಿಧಾನಸೌಧದಲ್ಲಿ ಚೆನ್ನಮ್ಮ ಕಿತ್ತೂರು ಉತ್ಸವದ ವಿಜಯಜ್ಯೋತಿ ಯಾತ್ರೆಗೆ ಚಾಲನೆ

# ವಿಧಾನ ಪರಿಷತ್ ದ್ವೈವಾರ್ಷಿಕ ಚುನಾವಣೆ 43 ಅಭ್ಯರ್ಥಿಗಳು ಅಂತಿಮ ಕಣದಲ್ಲಿ

**ಬೆಂಗಳೂರು, ಅ.12:** ವಿಧಾನ ಪರಿಷತ್‌ನ ದ್ವೈ ವಾರ್ಷಿಕ ಚುನಾವಣೆಯಲ್ಲಿ ಶಿಕ್ಷಕ ಮತ್ತು ಪದವೀಧರ ಕ್ಷೇತ್ರಗಳಿಂದ ಒಟ್ಟು 43 ಅಭ್ಯರ್ಥಿಗಳು ಚುನಾವಣಾ ಕಣದಲ್ಲಿ ಇದ್ದಾರೆ.

ಅ.23 ರಂದು ಮತದಾನ ನಡೆಯಲಿರುವ 2 ಪದವೀಧರ ಹಾಗೂ 2 ಶಿಕ್ಷಕರ ಕ್ಷೇತ್ರದ ಚುನಾವಣೆ ಕಾವು ದಿನದಿಂದ ದಿನಕ್ಕೆ ಏರತೊಡಗಿದೆ.ಬೆಂಗಳೂರು ಶಿಕ್ಷಕ ಕ್ಷೇತ್ರದಲ್ಲಿ ಆಡಳಿತಾರೂಢ ಕಾಂಗ್ರೆಸ್ ಅಭ್ಯರ್ಥಿ ಪುಟ್ಟಣ್ಣ, ಜೆಡಿಎಸ್ ಅಭ್ಯರ್ಥಿ ಎ.ಪಿ.ರಂಗನಾಥ ಸೇರಿದಂತೆ ಆರು ಮಂದಿ ಚುನಾವಣಾ ಸ್ಪರ್ಧೆಯಲ್ಲಿದ್ದಾರೆ.ಪಶ್ಚಿಮ ಪದವೀಧರ ಕ್ಷೇತ್ರದಲ್ಲಿ ಕಾಂಗ್ರೆಸ್‌ನ ಮೋಹನ್ ಲಿಂಬಿಕಾಯಿ, ಬಿಜೆಪಿಯ ಎಸ್.ವಿ.ಸಂಕನೂರ ಸೇರಿದಂತೆ 14 ಮಂದಿ ಅಭ್ಯರ್ಥಿಗಳು ಚುನಾವಣಾ ಕಣದಲ್ಲಿದ್ದಾರೆ.

ಆಗ್ನೇಯ ಪದವೀಧರ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಶಶಿ, ಹುಲಿಕುಂಟೇಮಠ್, ಬಿಜೆಪಿ ಅಭ್ಯರ್ಥಿ ಕೆ.ಎಂ.ಸುರೇಶ ಸೇರಿದಂತೆ 10 ಅಭ್ಯರ್ಥಿಗಳು ಸ್ಪರ್ಧೆಯಲ್ಲಿದ್ದಾರೆ.

ಈಶಾನ್ಯ ಶಿಕ್ಷಕರ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಮಟ್ಟೂರು, ಬಿಜೆಪಿ ಅಭ್ಯರ್ಥಿ ಶಶಿಲ್ ಜಿ ನಮೋಶಿ ಸೇರಿದಂತೆ ಒಟ್ಟು 13 ಅಭ್ಯರ್ಥಿಗಳು ಮೇಲನೆ ಚುನಾವಣೆ ಸ್ಪರ್ಧೆಯಲ್ಲಿದ್ದಾರೆ. ಆಡಳಿತ ಮತ್ತು ಪ್ರತಿಪಕ್ಷಗಳ ನಡುವೆ ಈ ಚುನಾವಣೆ ಪ್ರತಿಷ್ಠೆಯಾಗಿದ್ದು, ಶಿಕ್ಷಕರ ಮತ್ತು ಪದವೀಧರ ಮತದಾರರ ಮನ ಗೆಲ್ಲಲು ಮೂರೂ ಪಕ್ಷಗಳು ಹರಸಾಹಸ ಮಾಡುತ್ತಿದ್ದು, ನಿರಂತರ ಚುನಾವಣಾ ಪ್ರಚಾರದಲ್ಲಿ ತೊಡಗಿವೆ. ಪ್ರತಿನಿತ್ಯ ಒಂದಲ್ಲಾ ಒಂದು ಸಭೆ, ಸಮಾವೇಶಗಳನ್ನು ನಡೆಸಿ ಮತದಾರರ ಮನವೊಲಿಸುವ ಪ್ರಯತ್ನವನ್ನು ರಾಜಕೀಯ ಪಕ್ಷಗಳ ನಾಯಕರು, ಮುಖಂಡರು, ಕಾರ್ಯಕರ್ತರು ಮಾಡುತ್ತಿದ್ದಾರೆ.

ಅ.27ರಂದು ಮತ ಎಣಿಕೆ ನಡೆಯಲಿದ್ದು, ಬಹುತೇಕ ಅಂದು ಸಂಜೆ ವೇಳೆಗೆ ಫಲಿತಾಂಶ ದೊರೆಯುವ ಸಾಧ್ಯತೆಯಿದೆ. ಪ್ರಾಶಸ್ತ್ಯದ ಮತದಾನವಾಗಿರುವುದರಿಂದ ಫಲಿತಾಂಶ ವಿಳಂಬವಾದರೂ ಆಗಬಹುದು.ವಿಧಾನಪರಿಷತ್ ಸದಸ್ಯತ್ವದಿಂದ ಚಿದಾನಂದ ಎಂ.ಗೌಡ, ಎಸ್.ವಿ.ಸಂಕನೂರ, ಶಶಿಲ್ ಜಿ. ನಮೋಶಿ ಹಾಗೂ ಪುಟ್ಟಣ್ಣ ಅವರು ನ.11 ರಂದು ನಿವೃತ್ತಿ ಹೊಂದಲಿದ್ದಾರೆ.

ಇವರ ನಿವೃತ್ತಿಯಿಂದ ತೆರವಾಗುವ ವಿಧಾನಪರಿಷತ್ ಸದಸ್ಯ ಸ್ಥಾನಗಳಿಗೆ ಚುನಾವಣಾ ಆಯೋಗ ಚುನಾವಣೆ ಪ್ರಕ್ರಿಯೆಯನ್ನು ಆರಂಭಿಸಿದೆ.ಎನ್‌ಡಿಎ ಮಿತ್ರಪಕ್ಷಗಳನ್ನು ಬಿಜೆಪಿ ಮತ್ತು ಜೆಡಿಎಸ್ ಹೊಂದಾಣಿಕೆ ಮಾಡಿಕೊಂಡಿದ್ದು, ಮೂರು ಕ್ಷೇತ್ರಗಳಲ್ಲಿ ಬಿಜೆಪಿ, ಒಂದು ಕ್ಷೇತ್ರದಲ್ಲಿ ಜೆಡಿಎಸ್ ಸ್ಪರ್ಧಿಸಿದೆ. ಆಡಳಿತಾರೂಢ ಕಾಂಗ್ರೆಸ್ ನಾಲ್ಕು ಕ್ಷೇತ್ರಗಳಲ್ಲಿ ತನ್ನ ಅಭ್ಯರ್ಥಿಗಳನ್ನು ಕಣಕ್ಕಿಳಿಸಿದೆ.

# ರಾಜ್ಯೋತ್ಸವ ಪ್ರಶಸ್ತಿ ಆಯ್ಕೆ ಸಮಿತಿಗೆ ಆರು ಸದಸ್ಯರ ಸೇರ್ಪಡೆ

**ಬೆಂಗಳೂರು, ಅ.12:** ಪ್ರಸಕ್ತ ಸಾಲಿನ ಕನ್ನಡ ರಾಜ್ಯೋತ್ಸವ ಪ್ರಶಸ್ತಿಗೆ ಪುರಸ್ಕೃತರನ್ನು ಆಯ್ಕೆ ಮಾಡಲು ರಚಿಸಲಾಗಿರುವ ಆಯ್ಕೆ ಸಲಹಾ ಸಮಿತಿಗೆ ನಟ, ನಿರ್ದೇಶಕ ನಿರ್ಮಾಪಕ ಎಸ್.ನಾರಾಯಣ್ ಸೇರಿದಂತೆ ಆರು ಮಂದಿ ಸದಸ್ಯರನ್ನು ಸೇರ್ಪಡೆ ಮಾಡಲಾಗಿದೆ.



ಈ ಸಂಬಂಧ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಆದೇಶ ಹೊರಡಿಸಿದ್ದು, ಚಲನಚಿತ್ರ ಕ್ಷೇತ್ರದಲ್ಲಿ ಎಸ್.ನಾರಾಯಣ್ ಅವರಲ್ಲದೆ ಮದನ್ ಮಲ್ಲು, ನಂಜುಂಡೇಗೌಡ ಅವರನ್ನು ಸಲಹಾ ಸಮಿತಿ ಸದಸ್ಯರನ್ನಾಗಿ ನೇಮಕ ಮಾಡಲಾಗಿದೆ.

ಪತ್ರಿಕೋದ್ಯಮ ಕ್ಷೇತ್ರದಲ್ಲಿ ಹಿರಿಯ ಪತ್ರಕರ್ತ ಅಬ್ಬೂರು ರಾಜಶೇಖರ್, ಸಮಾಜಸೇವಾ ಕ್ಷೇತ್ರದಲ್ಲಿ ನಂಜುಂಡಿ.ಕೆ.ಪಿ ಅವರನ್ನು ಸಲಹಾ ಸಮಿತಿಯ ಸದಸ್ಯರನ್ನಾಗಿ ಸೇರ್ಪಡೆ ಮಾಡಿ ಆದೇಶಿಸಲಾಗಿದೆ.

ಅ.8ರಂದು ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರನ್ನು ಆಯ್ಕೆ ಮಾಡಲು ಮುಖ್ಯಮಂತ್ರಿ ಅಧ್ಯಕ್ಷತೆ ಯಲ್ಲಿ ಆಯ್ಕೆ ಸಮಿತಿ ಹಾಗೂ ವಿವಿಧ ಕ್ಷೇತ್ರಗಳ ಪರಿಣಿತರನ್ನು ಒಳಗೊಂಡ ಆಯ್ಕೆಯ ಸಲಹಾ ಸಮಿತಿ ಸದಸ್ಯರನ್ನು ನೇಮಕ ಮಾಡಿ ಸರ್ಕಾರ ಆದೇಶ ಹೊರಡಿಸಿತ್ತು.

# ನಂದಿನಿ ಹಾಲಿನ ಪುಡಿ ಸಂಪೂರ್ಣ ಸುರಕ್ಷಿತ

## ಕಲಬೆರಕೆ ಆರೋಪಗಳಿಗೆ ತೆರೆ ಎಳೆದ ಲ್ಯಾಬ್ ವರದಿ

ಬೆಂಗಳೂರು, ಅ.12: ನಂದಿನಿ ಹಾಲಿನ ಪುಡಿ ಕಲಬೆರಕ ಎಂಬ ಆರೋಪಗಳಿಗೆ ಕೊನೆಗೂ ತೆರೆ ಬಿದ್ದಿದೆ. ಆಹಾರ ಸುರಕ್ಷತೆ ಮತ್ತು ಗುಣ ಮಟ್ಟ ಕಾಯ್ದೆಯಡಿ ನಡೆಸಲಾದ ತಾಲೂಕು ಮತ್ತು ರಾಜ್ಯಮಟ್ಟದ ಪ್ರಯೋಗಾಲಯದ (ಲ್ಯಾಬ್) ಪರೀಕ್ಷಾ ವರದಿಗಳು ಹೊರಬಿದ್ದಿದ್ದು, ನಂದಿನಿ ಹಾಲಿನ ಪುಡಿ ಸಂಪೂರ್ಣವಾಗಿ ಸುರಕ್ಷಿತ ಹಾಗೂ ಉತ್ಕೃಷ್ಟ ಗುಣ ಮಟ್ಟದಿಂದ ಕೂಡಿದೆ ಎಂಬುದು ಅಧಿಕೃತವಾಗಿ ದೃಢಪಟ್ಟಿದೆ.

ಕೆಲ ದಿನಗಳ ಹಿಂದೆ ನಂದಿನಿ ಹಾಲಿನ ಪುಡಿಯಲ್ಲಿ ಕಲಬೆರಕೆ ಮಾಡಲಾಗುತ್ತಿದೆ ಎಂಬ ಗಂಭೀರ ಆರೋಪಗಳು ಕೇಳಿಬಂದಿದ್ದವು. ಸಾರ್ವಜನಿಕರ ಆರೋಗ್ಯ ಮತ್ತು ಕೆಎಂಎಫ್‌ನ ವಿಶ್ವಾಸಾರ್ಹತೆಯ ದೃಷ್ಟಿಯಿಂದ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿದ ರಾಜ್ಯ ಆರೋಗ್ಯ ಸಚಿವರು, ತಕ್ಷಣವೇ ಹಾಲಿನ ಪುಡಿಯ ಗುಣಮಟ್ಟ ಪರೀಕ್ಷೆ ನಡೆಸುವಂತೆ ಅಧಿಕಾರಿಗಳಿಗೆ ಸ್ಪಷ್ಟ ಸೂಚನೆ ನೀಡಿದ್ದರು. ಸೆಪ್ಟೆಂಬರ್ 26ರಂದು ರಾಜ್ಯದ ವಿವಿಧ ಕೆಎಂಎಫ್ ಡೈರಿಗಳಿಂದ ನಂದಿನಿ ಮಿಲ್ಕ್ ಪೌಡರ್‌ನ ಮಾದರಿಗಳನ್ನು ಆಹಾರ ಸುರಕ್ಷತಾ ಇಲಾಖೆಯ ಅಧಿಕಾರಿಗಳು ಸಂಗ್ರಹಿಸಿದ್ದರು.




ಬಳಿಕ ಈ ಮಾದರಿಗಳನ್ನು ಎಫ್‌ಎಸ್‌ಎಸ್‌ಎಐ ಅನುಮೋದಿತ ಮಾನ್ಯತೆ ಪಡೆದ ಪರೀಕ್ಷಾಗಾರಗಳಿಗೆ ರವಾನಿಸಲಾಗಿತ್ತು. ಲ್ಯಾಬ್ ವರದಿಯ ಅಧಿಕೃತ ಪ್ರಯೋಗಾಲಯ ವರದಿಯ ಪ್ರಕಾರ, ನಂದಿನಿ ಹಾಲಿನ ಪುಡಿಯಲ್ಲಿ ಯಾವುದೇ ರೀತಿಯ ಹಾನಿಕಾರಕ ರಾಸಾಯನಿಕಗಳು, ಅನಗತ್ಯ ಪದಾರ್ಥಗಳು ಅಥವಾ ಕಲಬೆರಕೆ ಅಂಶಗಳು ಪತ್ತೆಯಾಗಿಲ್ಲ. ನಿಗದಿಪಡಿಸಿದ ಎಲ್ಲಾ ಆಹಾರ ಸುರಕ್ಷತಾ ನಿಯಮಗಳು ಹಾಗೂ ಗುಣಮಟ್ಟದ ಮಾನದಂಡಗಳನ್ನು ನಂದಿನಿ ಉತ್ಪನ್ನವು ಪೂರೈಸಿದೆ. ಸಾರ್ವಜನಿಕರು ಮತ್ತು ಮಕ್ಕಳು ಯಾವುದೇ ಆತಂಕವಿಲ್ಲದೆ ಬಳಸಲು ಇದು ಸಂಪೂರ್ಣ ಯೋಗ್ಯವಾಗಿದೆ ಎಂಬುದು ಅಧಿಕೃತವಾಗಿ ದೃಢಪಟ್ಟಿದೆ.

ಕೋಟಿಗಟ್ಟಲೆ ಗ್ರಾಹಕರ ನಂಬಿಕೆಗೆ ಹೆಸರುವಾಸಿಯಾಗಿರುವ ನಂದಿನಿ ಬ್ರ್ಯಾಂಡ್ ವಿರುದ್ಧ ಕೇಳಿಬಂದಿದ್ದ ಅಪಪ್ರಚಾರಕ್ಕೆ ಈ ವರದಿಯು ಸೂಕ್ತ ಉತ್ತರ ನೀಡಿದೆ. ಸುಳ್ಳು ವದಂತಿಗಳಿಗೆ ಕಿವಿಗೊಡದೆ ಗ್ರಾಹಕರು ನಂದಿನಿ ಉತ್ಪನ್ನಗಳನ್ನು ಎಂದಿನಂತೆ ಬಳಸಬಹುದು ಎಂದು ಅಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ.

# ಉದ್ಯೋಗಖಾತ್ರಿ ಹಣ ಪಾವತಿ ವಿಳಂಬ ಮಾಡಿದ ಪಿಡಿಒ, ಇಒ, ಡಿಎಸ್‌ಗಳಿಗೆ ನೋಟಿಸ್: ಸಚಿವ ಈಶ್ವರ ಖಂಡ್ರೆ ಸೂಚನೆ

**ಬೆಂಗಳೂರು, ಅ.12:** ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ –ವಿಬಿಜಿ ರಾಮ್ ಜಿಯಡಿ ಕಾರ್ಮಿಕರಿಗೆ ಕೂಲಿ ಹಣ ಪಾವತಿಸುವಲ್ಲಿ ವಿಳಂಬ ಹಾಗೂ ನಿರ್ಲಕ್ಷ್ಯ ತೋರಿದ 308 ಪಿಡಿಒ, 12 ಉಪ ಕಾರ್ಯದರ್ಶಿ ಮತ್ತು 74 ತಾಲೂಕು ಕಾರ್ಯನಿರ್ವಹಣಾಧಿಕಾರಿಗಳಿಗೆ ಕಾರಣ ಕೇಳಿ ನೋಟಿಸ್ ನೀಡುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಸೂಚನೆ ನೀಡಿದ್ದಾರೆ.

ಇಲಾಖೆಯ ಕಾರ್ಯದರ್ಶಿ ಮತ್ತು 12 ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ಈ ಸಂಬಂಧ ಲಿಖಿತ ಸೂಚನೆ ನೀಡಿರುವ ಸಚಿವರು, ವಿಬಿಜಿ ರಾಮ್ ಜಿ ಅಡಿ ಕೆಲಸ ಮಾಡುವ ಫಲಾನುಭವಿಗಳಿಗೆ 15 ದಿನಗಳ ಒಳಗಾಗಿ ಕೂಲಿ ಹಣ ಪಾವತಿ ಮಾಡದಿದ್ದರೆ ಸಂಬಂಧಿತ ಪಿಡಿಓಗಳನ್ನೇ ಹೊಣೆ ಮಾಡಲಾಗುವುದು ಎಂಬ ಸ್ಪಷ್ಟ ಸೂಚನೆ ನೀಡಿದ್ದರೂ 12 ಜಿಲ್ಲೆಗಳ 311 ಗ್ರಾಮ ಪಂಚಾಯತಿಗಳಲ್ಲಿ ವಿಳಂಬ ಆಗಿರುವ ಬಗ್ಗೆ ಸಚಿವರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಗ್ರಾಮ ಪಂಚಾಯತಿಗಳಿಗೆ ವಿಬಿಜಿ ರಾಮ್ ಜಿ ಕೂಲಿ ಹಣ ಬಿಡುಗಡೆ ಆಗಿದ್ದರೂ ಕೆಲಸ ಮಾಡಿದ ಅಕುಶಲ ಕಾರ್ಮಿಕರಿಗೆ ಕೂಲಿ ಹಣ ಪಾವತಿಸದಿರುವುದನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿರುವ ಸಚಿವರು, ಅಧಿಕಾರಿಗಳ ಇಂತಹ ನಿರ್ಲಕ್ಷ್ಯದಿಂದಾಗಿ, ಬರ ಪರಿಸ್ಥಿತಿಯಲ್ಲೂ ಜನ ವಿಬಿಜಿ ರಾಮ್ ಜಿ ಕೆಲಸಕ್ಕೆ ಬರಲು ಹಿಂದೇಟು ಹಾಕಿ, ಗುಳೆ ಹೋಗುತ್ತಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದ್ದಾರೆ.



ಬಾಗಲಕೋಟೆ ಜಿಲ್ಲೆಯಲ್ಲಿ 23, ಬೆಳಗಾವಿಯಲ್ಲಿ 52, ಚಾಮರಾಜನಗರದಲ್ಲಿ 13, ಚಿಕ್ಕಮಗಳೂರು ಜಿಲ್ಲೆಯಲ್ಲಿ 14, ದಕ್ಷಿಣ ಕನ್ನಡದಲ್ಲಿ 15, ಹಾಸನ ಜಿಲ್ಲೆಯಲ್ಲಿ 47, ಕೊಡಗು ಜಿಲ್ಲೆ 25, ಮಂಡ್ಯ ಜಿಲ್ಲೆ 13, ಮೈಸೂರು ಜಿಲ್ಲೆಯಲ್ಲಿ 53, ಶಿವಮೊಗ್ಗ ಜಿಲ್ಲೆ 14, ಉಡುಪಿ ಜಿಲ್ಲೆಯಲ್ಲಿ 23, ವಿಜಯಪುರ ಜಿಲ್ಲೆಯಲ್ಲಿ 16 ಸೇರಿ ಒಟ್ಟು 311 ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಕೆಲಸ ಮಾಡಿದ ಅಕುಶಲ ಕಾರ್ಮಿಕರಿಗೆ ಕೂಲಿ ಹಣ ಪಾವತಿ ಮಾಡುವಲ್ಲಿ ವಿಳಂಬ ಆಗಿರುವ ಹಿನ್ನೆಲೆಯಲ್ಲಿ ಈ ಎಲ್ಲ ಗ್ರಾ.ಪಂ.ಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಮೇಲ್ವಿಚಾರಣೆ ಮಾಡಬೇಕಾದ ಜವಾಬ್ದಾರಿ ಹೊತ್ತ ತಾಲೂಕು ಕಾರ್ಯ ನಿರ್ವಹಣಾಧಿಕಾರಿಗಳು ಹಾಗೂ 12 ಜಿಲ್ಲಾ ಪಂಚಾಯತಿಗಳ ಉಪ ಕಾರ್ಯದರ್ಶಿಗಳಿಗೆ ಕಾರಣ ಕೇಳಿ ನೋಟಿಸ್ ನೀಡಿ, ಸಮಜಾಯಿಷಿ ಪಡೆಯುವಂತೆ ಸೂಚಿಸಿದ್ದಾರೆ.

ಇನ್ನು ಮುಂದೆ ಈ ರೀತಿ ಯಾವುದೇ ಪಂಚಾಯತಿಯಲ್ಲಿ ಕೂಲಿ ಹಣ ಪಾವತಿಯಲ್ಲಿ ವಿಳಂಬ ಆಗದಂತೆ ಕ್ರಮ ವಹಿಸಲು ಇಲಾಖೆಯ ಕಾರ್ಯದರ್ಶಿ ಮತ್ತು 12 ಜಿಲ್ಲೆಗಳ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳಿಗೆ ಈಶ್ವರ ಖಂಡ್ರೆ ಸ್ಪಷ್ಟ ಸೂಚನೆ ನೀಡಿದ್ದಾರೆ.

# ಸಹಪ್ರಯಾಣಿಕರಿಗೆ ಕಿರಿಕಿರಿ ಮಾಡಿದರೆ ಬಸ್‌ನಿಂದ ಹೊರಕ್ಕೆ: ಬಿಎಂಟಿಸಿ ಎಚ್ಚರಿಕೆ

## ಮೊಬೈಲ್‌ನಲ್ಲಿ ಜೋರಾಗಿ ಹಾಡು ಕೇಳುವುದು, ರೀಲ್ಸ್ ನೋಡುವುದಕ್ಕೆ ನಿಷೇಧ

ಬೆಂಗಳೂರು, ಅ.12: ಬಿಎಂಟಿಸಿ ಬಸ್‌ಗಳಲ್ಲಿ ಪ್ರಯಾಣಿಕರು ತಮ ಮೊಬೈಲ್ ಸ್ಪೀಕರ್‌ನಲ್ಲಿ ಜೋರಾಗಿ ಹಾಡುಗಳನ್ನು ಕೇಳುವುದಾಗಲೀ ಅಥವಾ ರೀಲ್ಸ್ ನೋಡುತ್ತಾ ಸಹ ಪ್ರಯಾಣಿಕರಿಗೆ ತೊಂದರೆ ಕೊಟ್ಟರೆ ತಕ್ಷಣ ಅಂತಹ ಪ್ರಯಾಣಿಕ ರನ್ನು ಬಸ್‌ನಿಂದ ಕೆಳಗೆ ಇಳಿಸಲಾಗುತ್ತದೆ ಎಚ್ಚರ.

ಬಿಎಂಟಿಸಿ ಬಸ್‌ಗಳಲ್ಲಿ ಇತ್ತೀಚೆಗೆ ಜೋರಾಗಿ ಹಾಡು ಕೇಳುವುದು, ರೀಲ್ಸ್ ನೋಡುವವರ ಸಂಖ್ಯೆ ಹೆಚ್ಚಾಗುತ್ತಿದೆ. ಅದನ್ನು ತಡೆಯುವ ಉದ್ದೇಶದಿಂದ ಬಿಎಂಟಿಸಿ ಮುಂದಾಗಿದೆ. ಬಸ್‌ನಲ್ಲಿ ಪ್ರಯಾಣಿಕರು ಮೊಬೈಲ್ ನಲ್ಲಿ ಜೋರಾಗಿ ಶಬ್ದ ಮಾಡಿದರೆ ನಿರ್ವಹಕರು ಅಥವಾ ಚಾಲಕರು ಮೊದಲು ಬಂದ್ ಮಾಡಲು ಹೇಳುತ್ತಾರೆ. ಮಾತು ಕೇಳದಿದ್ದರೆ ಅಂತಹ ಪ್ರಯಾಣಿಕರನ್ನು ಬಸ್‌ನಿಂದ ಕೆಳಗೆ ಇಳಿಸುವಂತೆ ಬಿಎಂಟಿಸಿ ಸೂಚಿಸಿದೆ. ಲೌಡ್‌ಸ್ಪೀಕರ್ ಹಾಕುವುದನ್ನು ಸಹಪ್ರಯಾಣಿಕರು ಯಾರಾದರೂ ಪ್ರಶ್ನಿಸಿದರೆ ಉಳಿದವರು ಅವರಿಗೆ ಧ್ವನಿಗೂಡಿಸಬೇಕು. ಅದು ಬಿಟ್ಟು ಒಬ್ಬರೇ ಅದನ್ನು ಖಂಡಿಸಿದರೆ ನಿಯಂತ್ರಿಸಲು ಸಾಧ್ಯವಾಗುವುದಿಲ್ಲ.




ಹಾಗಾಗಿ ಬಸ್‌ನಲ್ಲಿ ಮೊಬೈಲ್‌ನಿಂದ ಇತರರಿಗೆ ಕಿರಿಕಿರಿಯಾದರೆ ಅದನ್ನು ಎಲ್ಲರೂ ಪ್ರಶ್ನಿಸಿದರೆ ತಡೆಗಟ್ಟಬಹುದು.

ಈಗಾಗಲೇ ಬಿಎಂಟಿಸಿ ಬಸ್‌ಗಳಲ್ಲಿ ಈ ಬಗ್ಗೆ ಸೂಚನಾ ಫಲಕಗಳನ್ನು ಹಾಕಿದ್ದರೂ ಸಹ ಪ್ರಯಾಣಿಕರು ಕ್ಯಾರೆ ಅನ್ನುತ್ತಿಲ್ಲ. ಒಬ್ಬೊಬ್ಬರಂತು ಮೊಬೈಲ್‌ನಲ್ಲಿ ಜೋರಾಗಿ ಮಾತನಾಡುವುದು ಬಸ್‌ನಲ್ಲಿದ್ದವರಿಗೆಲ್ಲಾ ಕೇಳಿಸುತ್ತದೆ. ಇದು ಇನ್ನೂ ಕಿರಿಕಿರಿಯೆನಿಸುತ್ತದೆ. ಈ ಬಗ್ಗೆ ಪ್ರಶ್ನಿಸಿದರೆ ಬಸ್‌ನೊಳಗೆ ಜಗಳವೇ ನಡೆದು ಹೊಡೆದಾಟವಾಗಿರುವುದನ್ನೂ ಸಹ ನಾವು ನೋಡಿದ್ದೇವೆ. ಹಾಗಾಗಿ ಇತರೆ ಪ್ರಯಾಣಿಕರಿಗೆ ತೊಂದರೆಯಾಗದಂತೆ ಮೊಬೈಲ್ ಬಳಸುವುದು ಒಳ್ಳೆಯದು. ಮೊಬೈಲ್ ಸ್ಪೀಕರ್ ಬಳಕೆ ಯಿಂದಾಗಿ ಬಸ್ ಚಾಲಕರು, ನಿರ್ವಹಕರು ಹಾಗೂ ಸಹ ಪ್ರಯಾಣಿಕರಿಗೆ ತೊಂದರೆಯಾಗುತ್ತದೆ. ಹಾಗಾಗಿ ಬಿಎಂಟಿಸಿ ಈ ರೀತಿಯ ನಿರ್ಧಾರಕ್ಕೆ ಬಂದಿದೆ.

ಇನ್ನು ಮುಂದೆ ಬಿಎಂಟಿಸಿ ಬಸ್‌ಗಳಲ್ಲಿ ಪ್ರಯಾಣಿಸುವವರು ಈ ಬಗ್ಗೆ ಎಚ್ಚರಿಕೆ ವಹಿಸಬೇಕಿದೆ. ಇಲ್ಲದಿದ್ದರೆ ಬಸ್‌ನಿಂದ ಕೆಳಗೆ ಇಳಿಯಬೇಕಿದೆ ಜೋಕೆ ಎಂಬ ಎಚ್ಚರಿಕೆ ನೀಡಲಾಗಿದೆ.

**ವಿಧಾನಸೌದ ಎದುರು, ಫ್ರೀಡಂಪಾರ್ಕ್‌ನಲ್ಲಿ ಬೃಹತ್ ಪ್ರತಿಭಟನೆ**

# ರೈತರ ಸಂಕಷ್ಟಕ್ಕೆ ಶಾಶ್ವತ ಪರಿಹಾರ ಕಲ್ಪಿಸಿ: ರೈತ ಸಂಘಟನೆಗಳ ಒಕ್ಕೂಟ, ಕಬ್ಬು ಬೆಳೆಗಾರರ ಸಂಘ ಆಗ್ರಹ

**ಬೆಂಗಳೂರು ಅ.12:** ರಾಜ್ಯದಲ್ಲಿ ತೀವ್ರ ಬರಗಾಲದಿಂದ ಕೃಷಿ ಕ್ಷೇತ್ರ ಸಂಕಷ್ಟಕ್ಕೆ ಸಿಲುಕಿದ್ದು, ಲಕ್ಷಾಂತರ ರೈತ ಕುಟುಂಬಗಳು ಆರ್ಥಿಕ ಸಂಕಷ್ಟವನ್ನು ಎದುರಿಸುತ್ತಿವೆ. ಮಳೆಯ ಕೊರತೆ, ಬೆಳೆನಾಶ, ಕೃಷಿ ಉತ್ಪಾದನಾ ವೆಚ್ಚದ ಏರಿಕೆ, ವಿದ್ಯುತ್ ಸಮಸ್ಯೆ ಹಾಗೂ ಸಾಲದ ಹೊರೆಗಳಿಂದ ರೈತರು ಕಂಗಾಲಾಗಿದ್ದಾರೆ.

ಇಂತಹ ಪರಿಸ್ಥಿತಿಯಲ್ಲಿ ರೈತರ ನೆರವಿಗೆ ಧಾವಿಸಬೇಕಾದ ಸರ್ಕಾರಗಳು ಕೇವಲ ತಾತ್ಕಾಲಿಕ ಪರಿಹಾರಕ್ಕೆ ಸೀಮಿತವಾಗದೆ, ರೈತರ ಸಂಕಷ್ಟಕ್ಕೆ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ರಾಜ್ಯ ರೈತ ಸಂಘಟನೆಗಳ ಒಕ್ಕೂಟ ಹಾಗೂ ರಾಜ್ಯ ಕಬ್ಬು ಬೆಳೆಗಾರರ ಸಂಘವು ವಿಧಾನಸೌಧ ಎದುರು ಬೆಂಗಳೂರಿನ ಫ್ರೀಡಂ ಪಾರ್ಕ್‌ಲ್ಲಿ ಬೃಹತ್ ಪ್ರತಿಭಟನಾ ಧರಣಿ ಸತ್ಯಾಗ್ರಹ ನಡೆಸಿದರು

ರಾಜ್ಯದಲ್ಲಿ 217 ತಾಲೂಕುಗಳಲ್ಲಿ ಮಳೆಯ ಅಭಾವದಿಂದ ಬೆಳೆ ಕೈಕೊಟ್ಟಿರುವ ಸಂದರ್ಭದಲ್ಲಿ ರೈತರು ಬಿತ್ತನೆ ಬೀಜ, ರಸಗೊಬ್ಬರ, ಕೀಟನಾಶಕ, ಕೂಲಿ, ಕೃಷಿ ಯಂತ್ರೋಪಕರಣ ಮತ್ತು ನೀರಾವರಿಗಾಗಿ ಮಾಡಿದ ವೆಚ್ಚವನ್ನು ಮರಳಿ ಗಳಿಸಿಕೊಳ್ಳಲಾಗದ ಪರಿಸ್ಥಿತಿ ನಿರ್ಮಾಣವಾಗಿದೆ.




ಒಂದು ಕಡೆ ಬೆಳೆನಷ್ಟವಾದರೆ, ಮತ್ತೊಂದು ಕಡೆ ಕುಟುಂಬದ ಜೀವನ ನಡೆಸುವುದು ಕಷ್ಟವಾಗಿದೆ. ಸಾಲ ವಸೂಲಾತಿ ಕಿರುಕುಳ ಹೆಚ್ಚಾಗುತ್ತಿದೆ. ಅಂದಾಜು 20,000 ಕೋಟಿ ರೂ.ಗಳಿಗೂ ಅಧಿಕ ಬೆಳೆನಷ್ಟದಿಂದ ರೈತರು ಕಂಗಾಲಾಗಿದ್ದಾರೆ. ಮಹಾರಾಷ್ಟ್ರ ರಾಜ್ಯದಲ್ಲಿ ಎರಡು ಲಕ್ಷ ರೂ. ತನಕ ರೈತರ ಸಾಲ ಮನ್ನಾ ಮಾಡಿದ್ದಾರೆ, ತಮಿಳುನಾಡಿನಲ್ಲಿ ರೈತರ ಸಾಲ ಮನ್ನಾ ಮಾಡಿದ್ದಾರೆ ಆದರೆ ಅಲ್ಲಿ ರೈತರಿಗೆ ಇಷ್ಟೊಂದು ಭೀಕರವಾದ ಕಷ್ಟ ಇರಲಿಲ್ಲ. ಆದ್ದರಿಂದ ಕೂಡಲೇ ರಾಜ್ಯದಲ್ಲಿ ಸಾಲಮನ್ನಾ ಮಾಡಬೇಕೆಂದು ರಾಜ್ಯಾಧ್ಯಕ್ಷ ಕುರುಬೂರು ಶಾಂತಕುಮಾರ್ ಸರ್ಕಾರವನ್ನು ಒತ್ತಾಯಿಸಿದರು

**ಕಬ್ಬಿನ ಬೆಲೆ ಏರಿಕೆ:**

ಕಬ್ಬಿನಿಂದ ಉತ್ಪಾದಿಸುವ ಸಕ್ಕರೆ ಬೆಲೆಯನ್ನು ವಾಣಿಜ್ಯ ಬಳಕೆ ಪ್ರತ್ಯೇಕವಾದ ದರ ಗ್ರಾಹಕ ಬಳಕೆದಾರರಿಗೆ ಸಾಮಾನ್ಯ ದರ ನಿಗದಿ ಮಾಡಿ. ಇದರಲ್ಲಿ ಹೆಚ್ಚುವರಿ ಲಾಭವನ್ನ. ಕಬ್ಬು ಬೆಳೆಗಾರರ ಕಬ್ಬಿನ ಉತ್ಪಾದನಾ ವೆಚ್ಚವು ಗಣನೀಯವಾಗಿ ಏರಿಕೆಯಾಗಿರುವುದರಿಂದ, ಕೇಂದ್ರ ಸರ್ಕಾರವು ಕಬ್ಬಿನ ಎಫ್‌ಆರ್‌ಪಿ ದರವನ್ನು. ಕನಿಷ್ಠ 10.25 ಇಳುವರಿಗೆ 4500 ರೂ ಗೆ ಹೆಚ್ಚಿಸಬೇಕು. ರಾಜ್ಯ ಸರ್ಕಾರವು ತಮಿಳುನಾಡು ಮಾದರಿಯಲ್ಲಿ ಕಬ್ಬಿನ ಎಸ್‌ಎಪಿ ದರವನ್ನು ಎಫ್‌ಆರ್‌ಪಿ ದರಕ್ಕೆ ಹೆಚ್ಚುವರಿ ಆಗಿ ಟನ್‌ಗೆ 800 ರೂ.ಗಳು ಏರಿಕೆ ಮಾಡಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಸುರೇಶ್ ಮ ಪಾಟೀಲ್, ನರಸಾರೆಡ್ಡಿ ಪೊಲೀಸ್ ಪಟೇಲ್. ಕರಬಸಪ್ಪಗೌಡ. ಗುರುಸಿದ್ದಪ್ಪ.. ದೇವಕುಮಾರ್ ಎಲ್ಲಪ್ಪನಾಯಕ. ಧರ್ಮರಾಜ್. ರಾಜ್ಯ ಸಂಘಟನಾ ಕಾರ್ಯದರ್ಶಿ ಅತ್ತಹಳ್ಳಿ ದೇವರಾಜ್, ಬರಡನಪುರ ನಾಗರಾಜ್, ರಗಸೂರು ಶಂಕರ್, ಮೂಕ್ಕಳ್ಳಿ ಮಹದೇವಸ್ವಾಮಿ, ಮಾರ್ಬಳ್ಳಿ ನೀಲಕಂಠಪ್ಪ, ಉಡಿಗಾಲ ರೇವಣ್ಣ,




ವೇತನ ಹೆಚ್ಚಳ ಮತ್ತು ಬಾಕಿ ಪಾವತಿ ಬಿಡುಗಡೆಗೆ ಆಗ್ರಹಿಸಿ, AIUTUC ಬೆಂಬಲದೊಂದಿಗೆ 'ಕರ್ನಾಟಕ ಸಂಯುಕ್ತ ಆಶಾ ಕಾರ್ಯಕರ್ತೆಯರ ಸಂಘ'ವು ಸೋಮವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಧರಣಿ ನಡೆಸಿತು.

## ಐಐಟಿ ಪುಣೆಯ ಡಾ.ಅಪರ್ಣಾ ಸಾಹಾಗೆ ಗೌರವ

# ಡಾ.ಶರಣಬಸವಪ್ಪ ಅಪ್ಪಾಜಿ ತಂತ್ರಜ್ಞಾನ–ನಾವಿನ್ಯತಾ ಪ್ರಶಸ್ತಿ

**ಕಲಬುರಗಿ, ಅ. 12:** ಪುಣೆಯ ಭಾರತೀಯ ತಂತ್ರಜ್ಞಾನ ಸಂಸ್ಥೆ (ಐಐಟಿ)ಯ ಕಂಪ್ಯೂಟರ್ ಸೈನ್ಸ್ ಆ್ಯಂಡ್ ಇಂಜಿನಿಯರಿಂಗ್ ವಿಭಾಗದ ಕಲಬುರಗಿ ಮೂಲದ ಡಾ. ಶ್ರೀಪರ್ಣಾ ಸಾಹಾ ಅವರು ತಂತ್ರಜ್ಞಾನ ಮತ್ತು ನಾವೀನ್ಯತಾ ಕ್ಷೇತ್ರದಲ್ಲಿ ಅತ್ಯುತ್ತಮ ಸಾಧನೆ ಮಾಡುತ್ತಿರುವ ಮಹಿಳೆಯರನ್ನು ಗೌರವಿಸುವ ಉದ್ದೇಶದಿಂದ ಸ್ಥಾಪಿಸಲಾಗಿರುವ ಪ್ರತಿಷ್ಠಿತ ಇನ್‌ಸ್ಟಿಟ್ಯೂಷನ್ ಆಫ್ ಎಲೆಕ್ಟ್ರಾನಿಕ್ಸ್ ಆ್ಯಂಡ್ ಟೆಲಿಕಮ್ಯುನಿಕೇಶನ್ ಇಂಜಿನಿಯರ್ಸ್ (ಐಇಟಿಇ) ಪೂಜ್ಯ ಡಾ. ಶರಣಬಸವಪ್ಪ ಅಪ್ಪಾಜಿ ಪ್ರಶಸ್ತಿಗೆ ಭಾಜನರಾಗಿದ್ದಾರೆ.

ಇತ್ತೀಚೆಗೆ ಕೋಲ್ಕತ್ತಾದಲ್ಲಿ ನಡೆದ 69ನೇ ವಾರ್ಷಿಕ ಐಇಟಿಇ ಸಮಾವೇಶದಲ್ಲಿ ವಿವಿಧ ಗಣ್ಯರ ಹೆಸರಿನಲ್ಲಿ ಸ್ಥಾಪಿಸಲಾಗಿರುವ 37 ಐಇಟಿಇ ಪ್ರಶಸ್ತಿಗಳೊಂದಿಗೆ, ಎರಡು ಜೀವಮಾನ ಸಾಧನೆ ಪ್ರಶಸ್ತಿಗಳು, ಮೂರು ಐಇಟಿಇ ಕಾರ್ಪೊರೇಟ್ ಪ್ರಶಸ್ತಿಗಳು ಹಾಗೂ ಎರಡು ಐಇಟಿಇ ಅತ್ಯುತ್ತಮ ಸಂಶೋಧನಾ ಪ್ರಬಂಧ ಪ್ರಶಸ್ತಿಗಳನ್ನು ಪ್ರದಾನ ಮಾಡಲಾಯಿತು. ಈ ವರ್ಷ ಇದೇ ಮೊದಲ ಬಾರಿಗೆ ಪರಿಚಯಿಸಲಾದ ಐಇಟಿಇ ಪೂಜ್ಯ ಡಾ. ಶರಣಬಸವಪ್ಪ ಅಪ್ಪಾಜಿ ಪ್ರಶಸ್ತಿಯನ್ನು ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿ ಬಸವರಾಜ ದೇಶಮುಖ ಅವರು ಐಇಟಿಇ ಪದಾಧಿಕಾರಿಗಳ ಸಮ್ಮುಖದಲ್ಲಿ ಡಾ. ಶ್ರೀಪರ್ಣಾ ಸಾಹಾ ಅವರಿಗೆ ಪ್ರದಾನ ಮಾಡಿದರು.




ಡಾ. ಶರಣಬಸವಪ್ಪ ಅಪ್ಪಾಜಿ ಪ್ರಶಸ್ತಿಗಾಗಿ ಒಟ್ಟು 37 ಅರ್ಜಿಗಳು/ನಾಮನಿರ್ದೇಶನಗಳು ದಾಖಲಾಗಿದ್ದು, ತೀರ್ಪುಗಾರರ ಸಮಿತಿ ಡಾ. ಸಾಹಾ ಅವರ ವಿಶೇಷ ಪರಿಣಿತಿ ಕ್ಷೇತ್ರದಲ್ಲಿನ ಸಾಧನೆ ಹಾಗೂ ನವೀನ ಚಿಂತನೆಗಳನ್ನು ಪರಿಗಣಿಸಿ ಅವರನ್ನು ಪ್ರಶಸ್ತಿಗೆ ಆಯ್ಕೆ ಮಾಡಿತು.

ಐಇಟಿಇ ಜೀವಮಾನ ಸಾಧನೆ ಪ್ರಶಸ್ತಿಗಳನ್ನು ಲೆಫ್ಟಿನೆಂಟ್ ಜನರಲ್ ಡಾ. ಎ.ಕೆ.ಎಸ್. ಚಂದಾಲೆ ಹಾಗೂ ಪ್ರೊ. ಜಿ.ಎಸ್.ಎನ್. ರಾವ್ ಅವರಿಗೆ ಪ್ರದಾನ ಮಾಡಲಾಯಿತು. ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ (ಇಸ್ರೋ)ಯ ಖ್ಯಾತ ವಿಜ್ಞಾನಿ ಡಾ. ಸಿ.ಎಸ್. ಮಧುಸೂದನ್ ಅವರಿಗೆ ಬಾಹ್ಯಾಕಾಶ ಹಾಗೂ ಕಾರ್ಯತಂತ್ರದ ತಂತ್ರಜ್ಞಾನ ಕ್ಷೇತ್ರಕ್ಕೆ ನೀಡಿದ ಮಹತ್ವದ ಕೊಡುಗೆಯನ್ನು ಗುರುತಿಸಿ ಐಇಟಿಇ ದೇವಿ ಸಿಂಗ್ ಸ್ಮಾರಕ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಐಇಟಿಇಯ ಪ್ರಮುಖ ವಿಭಾಗಗಳ ಇತರ ಪ್ರಶಸ್ತಿಗಳಲ್ಲಿ, ಆ್ಯಂಟೆನಾ ವ್ಯವಸ್ಥೆಗಳ ಕ್ಷೇತ್ರದಲ್ಲಿನ ಶ್ರೇಷ್ಠ ಸಾಧನೆಗಾಗಿ ಎನ್‌ಐಟಿ ವಾರಂಗಲ್‌ನ ಡಾ. ಗೋಪಿ ರಾಮ್ ಅವರಿಗೆ ಪ್ರಶಸ್ತಿ ಲಭಿಸಿತು. ವಸ್ತುಗಳು, ಸಾಧನಗಳು ಹಾಗೂ ಅವುಗಳ ಅನ್ವಯಿಕೆಗಳನ್ನು ಒಳಗೊಂಡ ಆಪ್ಟೋ–ಎಲೆಕ್ಟ್ರಾನಿಕ್ಸ್ ಕ್ಷೇತ್ರದ ಮಹತ್ವದ ಪ್ರಗತಿಗಾಗಿ ಐಐಟಿ–ಐಎಸ್‌ಎಮ್ ಧನಬಾದ್‌ನ ಪ್ರೊ. ಸಂಜೀವ್ ಕುಮಾರ್ ರಘುವಂಶಿ ಹಾಗೂ ಪಂಜಾಬ್ ಇಂಜಿನಿಯಯಿರಿಂಗ್ ಕಾಲೇಜು, ಚಂಡೀಗಢದ ಡಾ. ಸಿಮ್ರನ್‌ಜಿತ್ ಸಿಂಗ್ ಅವರಿಗೆ ಜಂಟಿಯಾಗಿ ಐಇಟಿಇ–ಸಿಇಓಟಿ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಶರಣಬಸವೇಶ್ವರ ಸಂಸ್ಥಾನದ 9ನೇ ಮಹಾದಾಸೋಹ ಪೀಠಾಧಿಪತಿ ಪೂಜ್ಯ ದೊಡ್ಡಪ್ಪ ಅಪ್ಪಾಜಿ ಹಾಗೂ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷರು ಹಾಗೂ ಶರಣಬಸವ ವಿಶ್ವವಿದ್ಯಾಲಯದ ಕುಲಾಧಿಪತಿಗಳಾದ ಮಾತೋಶ್ರೀ ಪೂಜ್ಯ ಡಾ. ದಾಕ್ಷಾಯಿಣಿ ಅವ್ವಾಜಿ ಅವರು ಡಾ. ಶ್ರೀಪರ್ಣಾ ಸಾಹಾ ಅವರಿಗೆ ಐಇಟಿಇ ಪೂಜ್ಯ ಡಾ. ಶರಣಬಸವಪ್ಪ ಅಪ್ಪಾಜಿ ಪ್ರಶಸ್ತಿ ದೊರೆತಿರುವುದಕ್ಕೆ ಅಭಿನಂದನೆ ಸಲ್ಲಿಸಿ, ಆಶೀರ್ವದಿಸಿದ್ದಾರೆ.

## ಪಾಲಿಕೆ ಕಚೇರಿಗೆ ಬೀಗ ಜಡಿದು ಪ್ರತಿಭಟನೆ: ಬೀದಿ ವ್ಯಾಪಾರ ವಲಯಗಳಿಗೆ ಸೂಕ್ತ ಸೌಲಭ್ಯಗಳಿಗೆ ಆಗ್ರಹ

**ಕಲಬುರಗಿ, ಅ. 12:** ನಗರದ ಬೀದಿ ವ್ಯಾಪಾರಿಗಳಿಗೆ ಸೂಕ್ತ ವ್ಯಾಪಾರ ವಲಯಗಳನ್ನು ಗುರುತಿಸಿ, ಅಗತ್ಯ ಮೂಲಸೌಕರ್ಯಗಳನ್ನು ಕಲ್ಪಿಸಬೇಕು ಎಂದು ಆಗ್ರಹಿಸಿ ಅಖಿಲ ಕರ್ನಾಟಕ ರಾಜ್ಯ ಬೀದಿ ವ್ಯಾಪಾರಿಗಳ ಸಂಘದ ನೇತೃತ್ವದಲ್ಲಿ ಮಹಾನಗರ ಪಾಲಿಕೆ ಕಚೇರಿಗೆ ಮುತ್ತಿಗೆ ಹಾಕಿ, ಬೀಗ ಜಡಿದು ಪ್ರತಿಭಟನೆ ನಡೆಸಲಾಯಿತು.



ನಗರದ ವಿವಿಧ ಪ್ರದೇಶಗಳಲ್ಲಿ ಬೀದಿ ವ್ಯಾಪಾರಿಗಳು ರಸ್ತೆಯ ಮಧ್ಯಭಾಗದಲ್ಲಿ ಕುಳಿತು ವ್ಯಾಪಾರ ಮಾಡುತ್ತಿರುವುದರಿಂದ ಸಾರ್ವಜನಿಕರಿಗೆ ಹಾಗೂ ವಾಹನ ಸವಾರರಿಗೆ ತೊಂದರೆಯಾಗುತ್ತಿದೆ. ಈ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸುವ ಉದ್ದೇಶದಿಂದ ಬೀದಿ ವ್ಯಾಪಾರಿಗಳಿಗೆ ಪ್ರತ್ಯೇಕ ಸ್ಥಳಾವಕಾಶ ಒದಗಿಸಬೇಕು. ಹಳೆಯ ಚೌಪಾಟಿ ಹನುಮಾನ ಮಂದಿರದ ಪಕ್ಕದಲ್ಲಿ ವ್ಯಾಪಾರಿಗಳಿಗೆ ಅಗತ್ಯ ಮೂಲಸೌಕರ್ಯ ಕಲ್ಪಿಸಿ, ನ್ಯಾಯಾಲಯದ ಆದೇಶದಂತೆ ಸ್ಥಳಾಂತರಿಸಲು ಕ್ರಮ ಕೈಗೊಳ್ಳಬೇಕು ಎಂದು ಸಂಘದ ಪದಾಧಿಕಾರಿಗಳು ಒತ್ತಾಯಿಸಿದರು.

2014ರ ಬೀದಿ ವ್ಯಾಪಾರಿಗಳ ಕಾಯ್ದೆಯಡಿ ಕಲಬುರಗಿ ನಗರದಲ್ಲಿ ಸೂಪರ್ ಮಾರ್ಕೆಟ್‌ನ ಹಳೆಯ ಚೌಪಾಟಿ ಸ್ಥಳ, ಸರ್ಕಾರಿ ಐಟಿಐ ಕಾಲೇಜು ಎದುರು, ಡಂಕಾ ವೃತ್ತದಿಂದ ಪಾಕೀಜಾ ವೈನ್ ಶಾಪ್‌ವರೆಗೆ, ಕೆಎಂಎಫ್ ಡೇರಿ ಎದುರು, ಅಣಿಕಲ್ ಪೆಟ್ರೋಲ್ ಪಂಪ್ ಎದುರು, ಹಳೆಯ ಅಂಡರ್‌ಬ್ರಿಡ್ಜ್‌ನ ಪಂಚಶೀಲ ನಗರ ಹಾಗೂ ಆಳಂದ ಚೆಕ್‌ಪೋಸ್ಟ್ ಸೇರಿದಂತೆ ಏಳು ವ್ಯಾಪಾರ ವಲಯಗಳನ್ನು ಗುರುತಿಸಲಾಗಿತ್ತು. ಆದರೆ, ಈವರೆಗೆ ವ್ಯಾಪಾರಿಗಳಿಗೆ ಸಮರ್ಪಕವಾಗಿ ಸ್ಥಳಾವಕಾಶ ಕಲ್ಪಿಸಲಿಲ್ಲ ಎಂದು ಪ್ರತಿಭಟನಾಕಾರರು ದೂರಿದರು.

2017ರ ಫೆಬ್ರುವರಿ 21ರಂದು ಬೀದಿ ವ್ಯಾಪಾರಿಗಳ ಅಭಿವೃದ್ಧಿಗಾಗಿ ದಿನದಯಾಳ್ ಅಂತ್ಯೋದಯ ಯೋಜನೆ–ರಾಷ್ಟ್ರೀಯ ನಗರ ಜೀವನೋಪಾಯ ಅಭಿಯಾನದಡಿ ರೂ.50 ಲಕ್ಷ ಅನುದಾನ ಬಿಡುಗಡೆಯಾಗಿದ್ದರೂ, ಗುರುತಿಸಲಾದ ವ್ಯಾಪಾರ ವಲಯಗಳಲ್ಲಿ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಚಪ್ಪಲ್ ಬಜಾರ್, ಬಾಂಡೆ ಬಜಾರ್, ಬಟ್ಟೆ ಬಜಾರ್, ಸರಾಫ್ ಬಜಾರ್, ಕಿರಾಣಾ ಬಜಾರ್ ಹಾಗೂ ಜನತಾ ಬಜಾರ್ ಪ್ರದೇಶಗಳ ವ್ಯಾಪಾರಿಗಳ ಸಮಸ್ಯೆಗಳನ್ನು ಗಂಭೀರವಾಗಿ ಪರಿಗಣಿಸಿ, ಅವರಿಗೆ ಪ್ರತ್ಯೇಕ ವ್ಯಾಪಾರ ಸ್ಥಳಗಳನ್ನು ಒದಗಿಸಬೇಕು ಎಂದು ಆಗ್ರಹಿಸಿದರು.

ಮಹಾನಗರ ಪಾಲಿಕೆ ಅಧಿಕಾರಿಗಳು, ಮೇಯರ್, ಸ್ಥಾಯಿ ಸಮಿತಿ ಅಧ್ಯಕ್ಷರು ಹಾಗೂ ಪಾಲಿಕೆ ಸದಸ್ಯರು ಈ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ, ಒಂದು ವಾರದೊಳಗೆ ಬೇಡಿಕೆಗಳನ್ನು ಈಡೇರಿಸಬೇಕು. ಇಲ್ಲದಿದ್ದರೆ ಜನತಾ ಬಜಾರ್ ರಸ್ತೆಯಲ್ಲಿ ರಸ್ತೆ ತಡೆ ನಡೆಸುವುದು ಅನಿವಾರ್ಯವಾಗಲಿದೆ ಎಂದು ಸಂಘದ ರಾಜ್ಯಾಧ್ಯಕ್ಷ ಜಗನ್ನಾಥ ಎಸ್. ಸೂರ್ಯವಂಶಿ ಎಚ್ಚರಿಕೆ ನೀಡಿದರು.

## ಎಂ.ಕೆ. ಹುಬ್ಬಳ್ಳಿ ಬಳಿ 32.40 ಲಕ್ಷ ರೂ. ಮೌಲ್ಯದ 24 ಸಾವಿರ ಲೀಟರ್ ಅಕ್ರಮ ಮದ್ಯ ವಶ

**ಬೆಳಗಾವಿ, ಅ.12:** ಜಿಲ್ಲೆಯ ಎಂ.ಕೆ. ಹುಬ್ಬಳ್ಳಿ ಬಳಿ ಅಕ್ರಮವಾಗಿ ಸಾಗಿಸುತ್ತಿದ್ದ 24,000 ಲೀಟರ್ ಮದ್ಯವನ್ನು ಅಬಕಾರಿ ಅಧಿಕಾರಿಗಳು ವಶಪಡಿಸಿಕೊಂಡಿದ್ದಾರೆ. ಶನಿವಾರ ಮಧ್ಯರಾತ್ರಿ ಈ ಕಾರ್ಯಾಚರಣೆ ನಡೆದಿದ್ದು, ವಶಪಡಿಸಿಕೊಳ್ಳಲಾದ ಟ್ಯಾಂಕರ್ ಮತ್ತು ಮದ್ಯದ ಒಟ್ಟು ಮೌಲ್ಯವನ್ನು 32.40 ಲಕ್ಷ ರೂಪಾಯಿ ಎಂದು ಅಂದಾಜಿಸಲಾಗಿದೆ.

ಅಬಕಾರಿ ಅಧಿಕಾರಿಗಳ ಪ್ರಕಾರ, ಹೊಲಿಹೊಸೂರು ಗ್ರಾಮವನ್ನು ಎಂ.ಕೆ. ಹುಬ್ಬಳ್ಳಿ ಪಟ್ಟಣಕ್ಕೆ ಸಂಪರ್ಕಿಸುವ ರಾಜ್ಯ ಹೆದ್ದಾರಿಯಲ್ಲಿ ಗಸ್ತು ತಿರುಗುತ್ತಿದ್ದಾಗ ಮಧ್ಯರಾತ್ರಿ 12.25ರ ಸುಮಾರಿಗೆ ಈ ಜಪ್ತಿ ಕಾರ್ಯಾಚರಣೆ ನಡೆಯಿತು. ಅಧಿಕಾರಿಗಳು ಟ್ಯಾಂಕರ್ ಅನ್ನು ತಡೆದು ನಿಲ್ಲಿಸಿದರು. ವಾಹನವನ್ನು ಪರಿಶೀಲಿಸಿದಾಗ, ಅದರಲ್ಲಿ 24,000 ಲೀಟರ್ ಮದ್ಯವನ್ನು ಅಕ್ರಮವಾಗಿ ಸಾಗಿಸುತ್ತಿರುವುದು ಪತ್ತೆಯಾಯಿತು. ನಂತರ ಕಾನೂನು ಜಾರಿ ಕ್ರಮದ ಭಾಗವಾಗಿ ಟ್ಯಾಂಕರ್ ಮತ್ತು ಅದರಲ್ಲಿನ ಮದ್ಯವನ್ನು ವಶಪಡಿಸಿಕೊಳ್ಳಲಾಯಿತು. ವಾಹನ ಚಾಲಕನನ್ನು ವಿಜಯಪುರ ಜಿಲ್ಲೆಯ ಬೋಳಚಿಕ್ಕಲಕಿ ಗ್ರಾಮದ ನಿವಾಸಿ ಬಂದೇನವಾಜ್ ನಬಿ ಸಾಬ್ ಟಿಗುನಿಬಿದರಿ ಎಂದು ಗುರುತಿಸಲಾಗಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ವಿಚಾರಣೆಗೆ ಹಾಜರಾಗುವಂತೆ ಸೂಚಿಸಿ, ಅಧಿಕಾರಿಗಳು ಆತನಿಗೆ ಕಾನೂನು ಪ್ರಕಾರ ನೋಟಿಸ್ ಜಾರಿ ಮಾಡಿದ್ದಾರೆ.

ಅಬಕಾರಿ ಇಲಾಖೆಯು ವಾಹನದ ಮಾಲೀಕರ ವಿರುದ್ಧವೂ ಪ್ರಕರಣ ದಾಖಲಿಸಿದೆ. ಪ್ರಕರಣಕ್ಕೆ ಸಂಬಂಧಿಸಿದ ಪ್ರಾಥಮಿಕ ವರದಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಬೆಳಗಾವಿ ವಿಭಾಗದ ಅಬಕಾರಿ ಜಂಟಿ ಆಯುಕ್ತರು, ಬೆಳಗಾವಿ ದಕ್ಷಿಣ ಜಿಲ್ಲೆಯ ಅಬಕಾರಿ ಉಪ ಆಯುಕ್ತರು ಮತ್ತು ರಾಮದುರ್ಗ ಉಪವಿಭಾಗದ ಅಬಕಾರಿ ಉಪ ಅಧೀಕ್ಷಕರು ಸೇರಿದಂತೆ ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಬೈಲಹೊಂಗಲ ಅಬಕಾರಿ ವೃತ್ತದ ಸಿಬ್ಬಂದಿ ಈ ಕಾರ್ಯಾಚರಣೆಯನ್ನು ನಡೆಸಿದರು.ಮದ್ಯದ ಅಕ್ರಮ ಸಾಗಣೆಯನ್ನು ಪತ್ತೆಹಚ್ಚುವ ಮತ್ತು ತಡೆಯುವ ಜಾರಿ ಕ್ರಮಗಳ ಭಾಗವಾಗಿ ಈ ಜಪ್ತಿ ನಡೆದಿದೆ. ಸಾಗಣೆಗೆ ಸಂಬಂಧಿಸಿದ ಸನ್ನಿವೇಶಗಳ ಬಗ್ಗೆ ತನಿಖೆ ನಡೆಸುವಾಗ ಮತ್ತು ಸಾಗಣೆಯ ಹೊಣೆಗಾರಿಕೆಯನ್ನು ನಿರ್ಧರಿಸುವಾಗ ಮುಂದಿನ ಕಾನೂನು ಪ್ರಕ್ರಿಯೆಗಳು ನಡೆಯುವ ನಿರೀಕ್ಷೆಯಿದೆ.

## ಸುಳ್ಳಿನ ದಾಳಿಯಿಂದ ಕುಗ್ಗಿಸಲು ಸಾಧ್ಯವಿಲ್ಲ, ಸತ್ಯವೇ ರಕ್ಷಿಸುತ್ತದೆ: ಜಿಲ್ಲಾಧಿಕಾರಿ ಲತಾಕುಮಾರಿ

**ಹಾಸನ, ಅ.12:** ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಮತ್ತು ಹಾಸನ ಜಿಲ್ಲಾಧಿಕಾರಿ ಕೆ.ಎಸ್.ಲತಾ ಕುಮಾರಿ ನಡುವಿನ ವಾಕ್ಸಮರದ ಚರ್ಚೆಯ ಬೆನ್ನಲ್ಲೇ ಜಿಲ್ಲಾಧಿಕಾರಿ ತಮ್ಮ ವೈಯಕ್ತಿಕ ವಾಟ್ಸಾಪ್ ಸ್ಟೇಟಸ್‌ನಲ್ಲಿ ಹಂಚಿ ಕೊಂಡಿರುವ ಸಂದೇಶ ಗಮನ ಸೆಳೆದಿದೆ.

ಭಾನುವಾರ ಬೆಳಿಗ್ಗೆ 7.40ಗಂಟೆಗೆ ರಾಷ್ಟ್ರ ಲಾಂಛನ ಹಾಗೂ ಸತ್ಯಮೇವ ಜಯತೇ ಧ್ಯೇಯವಾಕ್ಯದೊಂದಿಗೆ ಇಂಗ್ಲಿಷ್‌ನ ಎರಡು ಸಾಲುಗಳ ಸಂದೇಶವನ್ನು ಅವರು ಸ್ಟೇಟಸ್‌ನಲ್ಲಿ ಹಾಕಿಕೊಂಡಿದ್ದಾರೆ. ಸುಳ್ಳಿನ ದಾಳಿಯಿಂದ ತಮ್ಮನ್ನು ಕುಗ್ಗಿಸಲು ಸಾಧ್ಯವಿಲ್ಲ, ಸತ್ಯವೇ ರಕ್ಷಿಸುತ್ತದೆ ಎಂಬ ಅರ್ಥವನ್ನು ವ್ಯಕ್ತಪಡಿಸಿದ್ದಾರೆ.

ಇತ್ತೀಚೆಗೆ ಕೆಪಿಎಸ್‌ಸಿ ಅಕ್ರಮಗಳ ವಿಚಾರವಾಗಿ ಕೇಂದ್ರ ಸಚಿವ ಕುಮಾರಸ್ವಾಮಿ ಅವರು ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ವಿರುದ್ಧ ವಾಗ್ದಾಳಿ ನಡೆಸಿದ್ದರು. ಈ ಬೆಳವಣಿಗೆಯ ನಡುವೆಯೇ ಜಿಲ್ಲಾಧಿಕಾರಿ ಹಂಚಿಕೊಂಡಿರುವ ಸಂದೇಶ ಸಾರ್ವಜನಿಕ ವಲಯದಲ್ಲಿ ಕುತೂಹಲ ಮೂಡಿಸಿದೆ.ಮಾಜಿ ಸಚಿವ ಎಚ್.ಡಿ. ರೇವಣ್ಣ ಅವರು ಈ ಹಿಂದೆ ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ವಿರುದ್ಧ ವಾಗ್ದಾಳಿ ನಡೆಸಿದ್ದ ಸಂದರ್ಭದಲ್ಲಿಯೂ ಜಿಲ್ಲಾಧಿಕಾರಿ ಇದೇ ರೀತಿಯಲ್ಲಿ ವಾಟ್ಸ್‌ಪ್ ಸ್ಟೇಟಸ್ ಹಾಕಿಕೊಂಡು ತಮ ಅಭಿಪ್ರಾಯವನ್ನು ವ್ಯಕ್ತಪಡಿಸಿದ್ದರು.

ಇದೀಗ ಮತ್ತೊಮ್ಮೆ ರಾಜಕೀಯ ನಾಯಕರ ಟೀಕೆಯ ಬೆನ್ನಲ್ಲೇ ಅವರು ಹಂಚಿಕೊಂಡಿರುವ ಸಂದೇಶ ಚರ್ಚೆಗೆ ಕಾರಣವಾಗಿದೆ.

ಹೀಗಾಗಿ, ಜಿಲ್ಲಾಧಿಕಾರಿಯ ಈ ಸ್ಟೇಟಸ್ ಕೇಂದ್ರ ಸಚಿವ ಕುಮಾರಸ್ವಾಮಿ ಅವರ ಟೀಕೆಗೆ ನೀಡಿದ ಪರೋಕ್ಷ ತಿರುಗೇಟೆ?



ಎಂಬ ಪ್ರಶ್ನೆ ಸಾರ್ವಜನಿಕ ವಲಯದಲ್ಲಿ ಮೂಡಿದೆ. ಆದರೆ, ಈ ಸಂದೇಶವನ್ನು ಅವರು ನಿರ್ದಿಷ್ಟವಾಗಿ ಯಾರನ್ನಾದರೂ ಉದ್ದೇಶಿಸಿ ಪ್ರಕಟಿಸಿದ್ದಾರೆಯೇ ಎಂಬುದರ ಬಗ್ಗೆ ಯಾವುದೇ ಅಧಿಕೃತ ಸ್ಪಷ್ಟನೆ ಲಭ್ಯವಾಗಿಲ್ಲ. ಒಟ್ಟಿನಲ್ಲಿ, ಕೆಪಿಎಸ್‌ಸಿ ಅಕ್ರಮಗಳ ಆರೋಪದ ವಿಚಾರವಾಗಿ ನಡೆಯುತ್ತಿರುವ ಬೆಳವಣಿಗೆಗಳ ನಡುವೆ ಜಿಲ್ಲಾಧಿಕಾರಿ ಲತಾಕುಮಾರಿ ಅವರ ವಾಟ್ಸ್‌ಆಪ್ ಸ್ಟೇಟಸ್ ರಾಜಕೀಯ ವಲಯದಲ್ಲಿ ತೀವ್ರ ಕುತೂಹಲ ಮೂಡಿಸಿದೆ.

## ದಸರಾ: ಕುಶಾಲತೋಪು ತಾಲೀಮು ಯಶಸ್ವಿ

**ಮೈಸೂರು, ಅ.12:** ವಿಶ್ವವಿಖ್ಯಾತ ಮೈಸೂರು ದಸರಾ ಮಹೋತ್ಸವದ ಅಂಗವಾಗಿ ವಸ್ತು ಪ್ರದರ್ಶನ ಆವರಣದಲ್ಲಿ ನಡೆದ 3ನೇ ಹಂತದ ಮತ್ತು ಅಂತಿಮ ಹಂತದ ಕುಶಾಲ ತೋಪು ತಾಲೀಮು ಯಶಸ್ವಿಯಾಗಿ ಪೂರ್ಣಗೊಂಡಿದ್ದು, ಗಜಪಡೆಯ ಎಲ್ಲಾ ಆನೆಗಳ ಆರೋಗ್ಯ ಉತ್ತಮವಾಗಿದೆ ಎಂದು ಹಿರಿಯ ಅರಣ್ಯ ಸಂರಕ್ಷಣಾಧಿಕಾರಿ ರವಿಶಂಕರ್ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 3ನೇ ಹಂತದ ತಾಲೀಮು ಯಶಸ್ವಿಯಾಗಿದ್ದು, ಎಲ್ಲಾ ಆನೆಗಳ ಆರೋಗ್ಯ ಉತ್ತಮವಾಗಿದೆ. ಶ್ರೀರಂಗಪಟ್ಟಣ ದಸರಾದಲ್ಲಿ ಧನಂಜಯ, ಲಕ್ಷ್ಮಿ, ರೂಪ ಆನೆಗಳು ಭಾಗವಹಿಸಲಿವೆ ಎಂದು ಅವರು ಹೇಳಿದರು.



ಅಂಬಾರಿ ಹೊರುವ ಆನೆಯನ್ನು ಜಂಬೂಸವಾರಿಗೆ ಮೂರು ದಿನ ಇರುವಾಗಲೇ ಅಂತಿಮವಾಗಿ ಆಯ್ಕೆ ಮಾಡಲಾಗುವುದು. ಅಂಬಾರಿ ರೇಸ್‌ನಲ್ಲಿ 4 ಆನೆಗಳು ಪ್ರಶಾಂತ, ಸುಗ್ರೀವ, ಧನಂಜಯ ಮತ್ತು ಏಕಲವ್ಯ ಇದೆ. ಈ ನಾಲ್ಕು ಆನೆಗಳ ಪೈಕಿ ಒಂದು ಆನೆ ಅಂಬಾರಿ ಹೊರಲು ಆಯ್ಕೆಯಾಗಬಹುದು. ಈ ನಾಲ್ಕರ ಪೈಕಿ ಏಕಲವ್ಯ ಅತ್ಯಂತ ಕಿರಿಯ ಆನೆಯಾಗಿದ್ದು, ಸಮರ್ಥನಿದ್ದಾನೆ ಎಂದು ಅವರು ತಿಳಿಸಿದರು.

ಆನೆಗಳ ನಡಿಗೆ, ತಾಲೀಮಿನ ಸಮಯದಲ್ಲಿ ಮಾವುತನ ಕಮಾಂಡ್ ಅನ್ನು ಆನೆ ಹೇಗೆ ಸ್ವೀಕರಿಸುತ್ತದೆ ಎಂಬುದನ್ನು ಗಮನಿಸಿ ಅಂಬಾರಿ ಆನೆಯನ್ನು ಆಯ್ಕೆ ಮಾಡಲಾಗುತ್ತದೆ. ಯಶಸ್ವಿ ಜಂಬೂಸವಾರಿಗೆ ನಮ್ಮ ಇಲಾಖೆ ಹಾಗೂ ಗಜಪಡೆ ಸಂಪೂರ್ಣ ಸನ್ನದ್ಧವಾಗಿದೆ ಎಂದು ತಿಳಿಸಿದರು.

## ಮುರ್ಕಿ ಸೋಲಾರ್ ಘಟಕ ಪರಿಶೀಲನೆ: ಸ್ಥಳೀಯರಿಗೆ ಉದ್ಯೋಗ, ರೈತರಿಗೆ ನ್ಯಾಯಯುತ ಪರಿಹಾರ: ಶಾಸಕ ಚವ್ಹಾಣ

**ಬೀದರ, ಅ. 12:** ಜಿಲ್ಲೆಯ ಕಮಲನಗರ ತಾಲ್ಲೂಕಿನ ಮುರ್ಕಿ ಗ್ರಾಮದ ವ್ಯಾಪ್ತಿಯಲ್ಲಿ ನಿರ್ಮಾಣವಾಗು ತ್ತಿರುವ ಸೋಲಾರ್ ವಿದ್ಯುತ್ ಘಟಕಕ್ಕೆ ಔರಾದ ಶಾಸಕರು ಹಾಗೂ ಮಾಜಿ ಸಚಿವರಾದ ಪ್ರಭು ಚವ್ಹಾಣ ಅವರು ಭೇಟಿ ನೀಡಿ, ಕಾಮಗಾರಿಯ ಪ್ರಗತಿ ಹಾಗೂ ಘಟಕದ ಕಾರ್ಯ ಚಟುವಟಿಕೆಗಳನ್ನು ಪರಿಶೀಲಿಸಿದರು.

ಈ ಸಂದರ್ಭದಲ್ಲಿ ಘಟಕದ ಆವರಣದಲ್ಲಿ ಸಂಚರಿಸಿದ ಅವರು, ಯಂತ್ರೋಪಕರಣಗಳು ಹಾಗೂ ನಡೆಯುತ್ತಿರುವ ಕಾಮಗಾರಿಗಳನ್ನು ವೀಕ್ಷಿಸಿದರು. ಬಳಿಕ ಸಂಬಂಧಿಸಿದ ಅಧಿಕಾರಿಗಳು ಹಾಗೂ ಘಟಕದ ಪ್ರತಿನಿಧಿಗಳೊಂದಿಗೆ ಸಭೆ ನಡೆಸಿ, ಪ್ಲಾಂಟ್‌ನ ಸಾಮರ್ಥ್ಯ, ಕಾಮಗಾರಿಯ ಪ್ರಗತಿ ಹಾಗೂ ಸ್ಥಳೀಯವಾಗಿ ಲಭ್ಯವಾಗುವ ಉದ್ಯೋಗಾವಕಾಶಗಳ ಕುರಿತು ಮಾಹಿತಿ ಪಡೆದರು.

ಶಾಸಕರು, ಔರಾದ(ಬಿ) ಹಾಗೂ ಕಮಲನಗರ ತಾಲ್ಲೂಕಿನ ಯುವಜನತೆಗೆ ಸ್ಥಳೀಯವಾಗಿಯೇ ಉದ್ಯೋಗಾವಕಾಶ ಕಲ್ಪಿಸಬೇಕು ಮತ್ತು ಇಲ್ಲಿನ ರೈತರು ಆರ್ಥಿಕವಾಗಿ ಸದೃಢರಾಗಬೇಕು ಎಂಬ ಉದ್ದೇಶದಿಂದ ನಿರಂತರವಾಗಿ ಶ್ರಮಿಸುತ್ತಿದ್ದೇನೆ. ಈ ಭಾಗದಲ್ಲಿ ಕೈಗಾರಿಕೆಗಳು ಹಾಗೂ ಸೋಲಾರ್ ಕಂಪನಿಗಳನ್ನು ತರಲು ಪೂರಕವಾಗಿ ಸಾಕಷ್ಟು ಪ್ರಯತ್ನಿಸಿ ಪವರ್ ಗ್ರಿಡ್ ಉಪಕೇಂದ್ರವನ್ನು ತಂದಿದ್ದೇನೆ. ಇದರ ಫಲವಾಗಿ ಕ್ಷೇತ್ರಕ್ಕೆ ಹಲವು ಸೋಲಾರ್ ಕಂಪನಿಗಳು ಬರುತ್ತಿದ್ದು, ಬಂಜರು ಭೂಮಿಗೂ ಬೇಡಿಕೆ ಹೆಚ್ಚಾಗಿ ರೈತರಿಗೆ ಉತ್ತಮ ಬೆಲೆ ದೊರೆಯುತ್ತಿರುವುದು ಆಶಾದಾಯಕ ಬೆಳವಣಿಗೆಯಾಗಿದೆ ಎಂದು ತಿಳಿಸಿದರು.



ಸೋಲಾರ್ ಯೋಜನೆಗಳಿಗೆ ಜಮೀನು ನೀಡಿರುವ ರೈತರಿಗೆ ನ್ಯಾಯಯುತ ಪರಿಹಾರ ದೊರೆಯಬೇಕು. ಪಕ್ಕದ ಮಹಾರಾಷ್ಟ್ರದ ಮಾದರಿಯಲ್ಲಿ ಪ್ರತಿ ಎಕರೆಗೆ ಕನಿಷ್ಠ 50 ಸಾವಿರ ನೀಡಲು ಕ್ರಮ ವಹಿಸಬೇಕು. ಅದೇ ರೀತಿ, ಜಮೀನು ನೀಡಿದ ರೈತರ ಕುಟುಂಬಗಳ ಯುವಜನತೆಗೆ ಸೋಲಾರ್ ಘಟಕಗಳಲ್ಲಿ ಉದ್ಯೋಗಾವಕಾಶ ಕಲ್ಪಿಸಬೇಕು. ತಾಂತ್ರಿಕ ಪರಿಣತಿ ಅಗತ್ಯವಿರುವ ಹುದ್ದೆಗಳನ್ನು ಹೊರತುಪಡಿಸಿ ಉಳಿದ ಹುದ್ದೆಗಳಿಗೆ ಸ್ಥಳೀಯ ಯುವಕರನ್ನೇ ನೇಮಿಸಿಕೊಳ್ಳಬೇಕು ಎಂದು ಘಟಕದ ಪ್ರತಿನಿಧಿಗಳಿಗೆ ಸ್ಪಷ್ಟ ಸೂಚನೆ ನೀಡಿದರು.ಸೋಲಾರ್ ಘಟಕಗಳ ಕಾರ್ಯಾಚರಣೆಗೆ ಅಗತ್ಯವಿರುವ ವಾಹನಗಳು, ಜೆಸಿಬಿ, ಟಿಪ್ಪರ್ ಸೇರಿದಂತೆ ಇತರೆ ವಾಹನ ಹಾಗೂ ಸೇವೆಗಳನ್ನು ಸ್ಥಳೀಯರಿಂದಲೇ ಪಡೆಯಬೇಕು. ಯಾವುದೇ ಕಾರಣಕ್ಕೂ ಸ್ಥಳೀಯರಿಗೆ ಸಿಗಬೇಕಾದ ಅವಕಾಶಗಳನ್ನು ಹೊರಗಿನವರಿಗೆ ನೀಡಬಾರದು. ಜಮೀನು ನೀಡಿದ ರೈತರಿಗೆ ಪರಿಹಾರ ಕೊಡಲು ವಿಳಂಬ ಮಾಡುತ್ತಿರುವ ಬಗ್ಗೆ ದೂರುಗಳು ಬರುತ್ತಿವೆ. ರೈತರಿಗೆ ಸಕಾಲದಲ್ಲಿ ಪರಿಹಾರ ಕಲ್ಪಿಸಬೇಕು. ಮತ್ತು ಪರಿಹಾರ ಮೊತ್ತದಲ್ಲಿ ತಾರತಮ್ಯ ಮಾಡಬಾರದು.

ವಿಶೇಷವಾಗಿ ಬ್ರೋಕರ್‌ಗಳಿಗೆ ಆಸ್ಪದ ಕೊಡದೇ ನೇರವಾಗಿ ರೈತರಿಗೆ ಅನುಕೂಲವಾಗುವಂತೆ ಕೆಲಸ ಮಾಡಬೇಕು. ನಾನು ಅಭಿವೃದ್ಧಿಯ ಪರವಿದ್ದೇನೆ. ನನ್ನ ಸಹಕಾರ ಸದಾ ಇರುತ್ತದೆ. ಆದರೆ ರೈತರಿಗೆ ತೊಂದರೆ ಕೊಟ್ಟರೆ ಯಾವುದೇ ಕಾರಣಕ್ಕೂ ಸುಮ್ಮನೆ ಬಿಡುವುದಿಲ್ಲ ಎಂದು ಎಚ್ಚರಿಸಿದರು.

## ಇಂದು ಉಸ್ಮಾನಿಯಾ ವಿಶ್ವವಿದ್ಯಾಲಯದಲ್ಲಿ ವಿಶೇಷ ಉಪನ್ಯಾಸ, ಬಹುಭಾಷಾ ಕವಿಗೋಷ್ಠಿ

### ಹಲಸಂಗಿ ಗೆಳೆಯರ ಸಾಹಿತ್ಯಿಕ ಕೊಡುಗೆ ಅನಾವರಣಕ್ಕೆ ವೇದಿಕೆ

**ವಿಜಯಪುರ, ಅ. 12** ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಹಲಸಂಗಿ ಗೆಳೆಯರ ಪ್ರತಿಷ್ಠಾನ ಹಾಗೂ ಹೈದರಾಬಾದ್‌ನ ಉಸ್ಮಾನಿಯಾ ವಿಶ್ವವಿದ್ಯಾಲಯದ ಕನ್ನಡ ವಿಭಾಗದ ಸಹಯೋಗದಲ್ಲಿ ಅ. 13ರಂದು ಬೆಳಿಗ್ಗೆ 10 ಗಂಟೆಗೆ ಹೈದರಾಬಾದ್‌ನ ಉಸ್ಮಾನಿಯಾ ವಿಶ್ವವಿದ್ಯಾಲಯದ ಆರ್ಟ್ಸ್ ಕಾಲೇಜಿನ ಫುಲೆ–ಅಂಬೇಡ್ಕರ್ ಇನ್‌ಕ್ಲೂಸಿವ್ ಆಂಡ್ ಎಂಪವರ್‌ಮೆಂಟ್ ಸ್ಟಡೀಸ್‌ನಲ್ಲಿ ವಿಶೇಷ ಉಪನ್ಯಾಸ ಹಾಗೂ ಬಹುಭಾಷಾ ಕವಿಗೋಷ್ಠಿ ಆಯೋಜಿಸಲಾಗಿದೆ.

ಉಸ್ಮಾನಿಯಾ ವಿಶ್ವವಿದ್ಯಾಲಯದ ಉಪಕುಲಪತಿ ಡಾ. ಕುಮಾರ ಮೊಲುಗಲಂ ಕಾರ್ಯಕ್ರಮ ಉದ್ಘಾಟಿಸಲಿದ್ದು, ವಿಶ್ವವಿದ್ಯಾಲಯದ ಕನ್ನಡ ವಿಭಾಗದ ಮುಖ್ಯಸ್ಥರು ಹಾಗೂ ಕಲಾ ನಿಕಾಯದ ಡೀನ್ ಪ್ರೊ. ಲಿಂಗಪ್ಪ ಗೋನಾಲ ಅಧ್ಯಕ್ಷತೆ ವಹಿಸಲಿದ್ದಾರೆ. ಆಂಧ್ರಪ್ರದೇಶ ಸರ್ಕಾರದ ಜಾನಪದ ಅಕಾಡೆಮಿಯ ಸಂಸ್ಥಾಪಕ ಅಧ್ಯಕ್ಷ ಪೊಟ್ಲೂರಿ ಹರಿಕೃಷ್ಣ ಹಾಗೂ ಉಸ್ಮಾನಿಯಾ ವಿಶ್ವವಿದ್ಯಾಲಯದ ಆರ್ಟ್ಸ್ ಕಾಲೇಜಿನ ಪ್ರಾಂಶುಪಾಲ ಪ್ರೊ. ಸಿ. ಕಾಸೀಂ ಗೌರವ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಹೈದರಾಬಾದ್‌ನ ಇಎಫ್‌ಎಲ್‌ಯು ಪ್ರಾಧ್ಯಾಪಕ ಪ್ರೊ. ವಿ.ಬಿ. ತಾರಕೇಶ್ವರ ಅವರು 'ಜನಪದ ಸಾಹಿತ್ಯಕ್ಕೆ ಹಲಸಂಗಿ ಗೆಳೆಯರ ಕೊಡುಗೆ' ವಿಷಯದ ಕುರಿತು ಹಾಗೂ ಕಲಬುರಗಿಯ ಸಂದರ್ಶಕ ಪ್ರಾಧ್ಯಾಪಕ ಡಾ. ಶ್ರೀಶೈಲ ನಾಗರಾಳ ಅವರು 'ಹಲಸಂಗಿ ಗೆಳೆಯರು ಮತ್ತು ಕನ್ನಡ ನವೋದಯ ಸಾಹಿತ್ಯ' ವಿಷಯದ ಕುರಿತು ವಿಶೇಷ ಉಪನ್ಯಾಸ ನೀಡಲಿದ್ದಾರೆ.

ಬಹುಭಾಷಾ ಕವಿಗೋಷ್ಠಿಯ ಅಧ್ಯಕ್ಷತೆಯನ್ನು ವಿಜಯನಗರದ ಜವಾಹರ ನವೋದಯ ವಿದ್ಯಾಲಯದ ಅಧ್ಯಾಪಕ ವಾಸುದೇವ ನಾಡಿಗ್ ವಹಿಸಲಿದ್ದು, ಸಾಹಿತಿ ಡಾ. ಪ್ರಕಾಶ್ ಗ. ಖಾಡೆ ಆಶಯ ನುಡಿಗಳನ್ನಾಡಲಿದ್ದಾರೆ. ಕವಿಗೋಷ್ಠಿಯಲ್ಲಿ ಕವಿಗಳು ಭಾಗವಹಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ಅಂತರಂಗ-ಬಹಿರಂಗ ಶುದ್ಧಿ ವೀರಶೈವ ಧರ್ಮದ ಗುರಿ - ಶ್ರೀ ರಂಭಾಪುರಿ ಜಗದ್ಗುರುಗಳು

**ಜಮಖಂಡಿ.ಅ.12–** ಭಾರತೀಯ ಸಂಸ್ಕೃತಿಯಲ್ಲಿ ಹಲವಾರು ಮತ ಧರ್ಮಗಳು ಬೆಳೆದುಕೊಂಡು ಬಂದಿವೆ. ಇವುಗಳಲ್ಲಿ ಒಂದಾಗಿರುವ ವೀರಶೈವ ಧರ್ಮವು ಒಂದು. ಇದರ ಇತಿಹಾಸ ಮತ್ತು ಬೆಳೆದುಕೊಂಡು ಬಂದ ಪರಂಪರೆ ಅತ್ಯಂತ ಪ್ರಾಚೀನವಾದುದು. ಅಂತರಂಗ ಮತ್ತು ಬಹಿರಂಗ ಶುದ್ಧಿಗೆ ಬಹಳಷ್ಟು ಪ್ರಾಮುಖ್ಯತೆ ಕೊಟ್ಟ ಧರ್ಮ ವೀರಶೈವ ಧರ್ಮ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರ ಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಯುಗ ಯುಗಗಳ ಪ್ರಾಚೀನ ಇತಿಹಾಸವನ್ನು ಹೊಂದಿದ ವೀರಶೈವ ಧರ್ಮವನ್ನು ಪರಶಿವನ ಪಂಚಮುಖಗಳಿಂದ ಆವಿರ್ಭವಿಸಿದ ಶ್ರೀ ಜಗದ್ಗುರು ರೇಣುಕಾದಿ ಪಂಚಾಚಾರ್ಯರು ಭೂಮಂಡಲದಲ್ಲಿ ಸ್ಥಾಪಿಸಿದರು. ವೀರಶೈವ ಧರ್ಮದ ಪ್ರಾಚೀನ ಇತಿಹಾಸವನ್ನು ಶಿವಾಗಮಗಳಲ್ಲಿ ಕಾಣಬಹುದು. ಜೀವ ಶಿವನಾಗುವ ಅಂಗ ಲಿಂಗವಾಗುವ ದೇಹ ದೇವಾಲಯವಾಗಿಸುವ ಭವಿ ಭಕ್ತನಾಗಿಸುವ ಜಾತಿ ಜ್ಯೋತಿಯಾಗಿಸುವ ಪದಾರ್ಥ ಪ್ರಸಾದವಾಗಿಸುವ ವಿಚಾರಗಳನ್ನು ಬೋಧಿಸುತ್ತದೆ. ಕರ್ಮ ಧರ್ಮವನ್ನಾಗಿಸುವ ಕಾಯಕ ಕೈಲಾಸವಾಗಿಸುವ ನೆಲ ಜಲಗಳನ್ನು ತೀರ್ಥ ಕ್ಷೇತ್ರಗಳನ್ನಾಗಿಸುವ ವಿಶೇಷವನ್ನು ಹೊಂದಿದೆ. ಅರ್ಚನೆಗಿಂತ ಅರ್ಪಣೆಗೆ ವ್ಯಕ್ತಿ ನಿಷ್ಠೆಗಿಂತ ತತ್ವನಿಷ್ಠೆಗೆ ಚರಿತ್ರೆಗಿಂತ ಚಾರಿತ್ರ್ಯಕ್ಕೆ ಸ್ಥಾವರಕ್ಕಿಂತ ಜಂಗಮಕ್ಕೆ ದಾನಕ್ಕಿಂತ ದಾಸೋಹಕ್ಕೆ ವಿಶೇಷತೆಯನ್ನು ಕಲ್ಪಿಸಿ ಕೊಟ್ಟ ಕೀರ್ತಿ ವೀರಶೈವ ಧರ್ಮಕ್ಕಿದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಆಸ್ತಿಗಿಂತ ಆಸಕ್ತಿ ಅವಿಶ್ವಾಸಕ್ಕಿಂತ ಆತ್ಮ ವಿಶ್ವಾಸಕ್ಕೆ ಆತ್ಮೋದ್ಧಾರಕ್ಕಿಂತ ಲೋಕೋದ್ಧಾರಕ್ಕೆ ಮಹತ್ವವನ್ನು ಕೊಟ್ಟಿದ್ದನ್ನು ಕಾಣಬಹುದು. ಜ್ಞಾನ ಕ್ರಿಯಾತ್ಮಕವಾದ ವೀರಶೈವ ಧರ್ಮ ಸಂಸ್ಕೃತಿಯನ್ನು ಮತ್ತು ಮಾನವ ಧರ್ಮದ ಆದರ್ಶ ಮೌಲ್ಯಗಳನ್ನು ಬೋಧಿಸುವುದೇ ದಸರಾ ಸಮಾರಂಭದ ಗುರಿ ಎಂದರು.




ಶ್ರೀ ರಂಭಾಪುರಿ ಶಿವಾನಂದ ಜಗದ್ಗುರುಗಳ ಜೀವನ ದರ್ಶನ ಕೃತಿಯನ್ನು ಬಿಡುಗಡೆ ಮಾಡಿದ ತೇರದಾಳ ಕ್ಷೇತ್ರದ ಶಾಸಕ ಸಿದ್ದು ಸವದಿ ಅವರು ಮಾತನಾಡಿ ವೀರಶೈವ ಪೀಠಾಚಾರ್ಯರು ಜನಮನದ ಉನ್ನತಿ ಸುಖ ಶಾಂತಿ ಬದುಕಿಗೆ ಅಮೂಲ್ಯ ಕೊಡುಗೆ ಕೊಟ್ಟಿದ್ದಾರೆ. ರಂಭಾಪುರಿ ಪೀಠದ ನವ ನಿರ್ಮಾಣ ಶಿಲ್ಪಿ ಎಂದು ಪ್ರಖ್ಯಾತರಾದ ಶ್ರೀ ಶಿವಾನಂದ ಜಗದ್ಗುರುಗಳ ಜೀವನದ ಸಿದ್ಧಿ ಸಾಧನೆಗಳು ಬದುಕಿ ಬಾಳುವ ಜನಾಂಗಕ್ಕೆ ಆಶಾಕಿರಣ ಎಂದರು. ಶ್ರೀ ಜಗದ್ಗುರು ಪಂಚ ಪೀಠಗಳಿಗೆ ತನ್ನದೇ ಆದ ಪರಂಪರೆ ಮತ್ತು ಇತಿಹಾಸವಿದೆ ಎಂದರು.

ಅಮ್ಮಿನಭಾವಿ ಪಂಚಗೃಹ ಹಿರೇಮಠದ ಅಭಿನವ ಶಾಂತಲಿಂಗ ಶಿವಾಚಾರ್ಯ ಸ್ವಾಮಿಗಳು ವೀರಶೈವ ಧರ್ಮದ ಪ್ರಾಚೀನತೆ ಮತ್ತು ಪಂಚ ಪೀಠಗಳ ಪರಂಪರೆ ಕುರಿತು ಸವಿಸ್ತಾರವಾಗಿ ಮಾತನಾಡಿದ ಅವರು ಶಿವ ಭಕ್ತಿ ಗುರು ಪರಂಪರೆ ಇಷ್ಟಲಿಂಗ ಆರಾಧನೆ ಆಧ್ಯಾತ್ಮಿಕ ಸಾಧನೆ ಮತ್ತು ಮಾನವೀಯ ಮೌಲ್ಯಗಳಿಗೆ ಮಹತ್ವ ಕೊಟ್ಟಿರುವುದನ್ನು ಉಲ್ಲೇಖಿಸಿದರು. ಸಂಸ್ಕೃತಿಯ ಸಂರಕ್ಷಣೆ ಮತ್ತು ಸಮಾಜ ಸೇವೆ ಮೂಲ ಗುರಿಯಾಗಿದ್ದನ್ನು ಮರೆಯಲಾಗದು. ಪ್ರತಿಯೊಬ್ಬರು ಗುರುಪರಂಪರೆ ಅರಿತು ಆಚರಿಸಿ ಬಾಳಿದಾಗ ಉಜ್ವಲವಾದ ಬದುಕು ನಿರ್ಮಾಣಗೊಳ್ಳುವುದರಲ್ಲಿ ಸಂದೇಹವಿಲ್ಲ ಎಂದರು.

ನೇತೃತ್ವ ವಹಿಸಿದ ಯಡಿಯೂರು ಕ್ಷೇತ್ರದ ರೇಣುಕ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ವೀರಶೈವ ಧರ್ಮದ ಪಂಚಪೀಠಗಳು ಆಧ್ಯಾತ್ಮಿಕ ಮಾರ್ಗದರ್ಶನದ ಕೇಂದ್ರಗಳಾಗಿವೆ. ಧರ್ಮವು ಕೇವಲ ಆಚರಣೆಯಲ್ಲಿ ಉಳಿಯದೆ ನಮ್ಮ ನಡೆ ನುಡಿ ಮತ್ತು ಸಮಾಜ ಸೇವೆಯಲ್ಲಿ ಬೆಳೆದುಕೊಂಡು ಬರುವ ಅವಶ್ಯಕತೆ ಇದೆ. ಧರ್ಮ ಪ್ರಚಾರ ಧಾರ್ಮಿಕ ಶಿಕ್ಷಣ ಸಮಾಜ ಸೇವೆ ಸಂಸ್ಕೃತಿ ಸಂವರ್ಧನೆ ಮತ್ತು ನೈತಿಕ ಮೌಲ್ಯಗಳನ್ನು ಅನುಸರಿಸಿಕೊಂಡು ಬಾಳಬೇಕೆಂದು ಬಯಸಿದರು. ರುದ್ರಮುನಿ ಶಿವಾಚಾರ್ಯ ಸ್ವಾಮಿಗಳು ಕಲ್ಯಾಣ ಹಿರೇಮಠ ಗಿರಿಸಾಗರ ಸಮ್ಮುಖ ವಹಿಸಿದ್ದರು. ಸಿದ್ಧಲಿಂಗ ಶಿವಾಚಾರ್ಯ ಸ್ವಾಮಿಗಳು ಬಿಲ್ವಾಶ್ರಮ ಹಿರೇಮಠ ಬಿಲ್‌ಕೆರೂರು ಇವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಶಾಸಕರಾದ ನಾಡೋಜ ಜಗದೀಶ ಶಿವಯ್ಯ ಗುಡಗುಂಟಿ ಇವರು ಉಪಸ್ಥಿತರಿದ್ದರು. ಅತಿಥಿಗಳಾಗಿ ಮಲ್ಲು ಹೋಳಗಿ, ರಂಗನಾಥ ಸೋನ್ವಾಲ್ಕರ, ರವೀಂದ್ರ ಗವಳಿ, ಚಂದ್ರಕಾಂತ ಗವಳಿ (ಮರಾಠಾ), ಉಮೇಶ ಜಾಧವ (ಶರದ) ಪಾಲ್ಗೊಂಡಿದ್ದರು.

## 'ಗುಲಾಬಿ' ಚಲನಚಿತ್ರ ಪೋಸ್ಟರ್ ಬಿಡುಗಡೆ: ಶೀಘ್ರ ತೆರೆಗೆ

**ತುಮಕೂರು, ಅ.12–** ಶ್ರೀಸಿದ್ದಿವಿನಾಯಕ ಸೇವಾ ಮಂಡಳಿ ತುಮಕೂರು ಇವರ ವತಿಯಿಂದ ಆಯೋಜಿಸಿದ್ದ ನಮ್ಮ ಜೇನುಗೂಡು ಬಳಗ ನಡೆಸಿ ಕೊಟ್ಟ ಕಾರ್ಯಕ್ರಮದಲ್ಲಿ ಸಾವಿತ್ರಿ ರಾಮಚಂದ್ರ ಬ್ಯಾನರ್ ಅವರ 'ಗುಲಾಬಿ' ಕನ್ನಡ ಚಲನಚಿತ್ರದ ಪೋಸ್ಟರ್ ಬಿಡುಗಡೆ ಮಾಡಲಾಯಿತು.




ಅಡ್ವೋಕೇಟ್ ಡಾ.ಆರ್. ವಿಜಯಕುಮಾರ್ ನಿರ್ದೇಶಿಸಿ ನಾಯಕರಾಗಿ ಅಭಿನಯಿಸಿರುವ ಪ್ಯಾನ್ ಇಂಡಿಯಾ ಸಿನೇಮಾ 'ಗುಲಾಬಿ' ಪೋಸ್ಟರ್ ಅನ್ನು ಜೇನುಗೂಡು ಬಳಗದ ಅಧ್ಯಕ್ಷ ಸೆಲ್ವಮ್ ಮತ್ತು ತಂಡದವರು ಬಿಡುಗಡೆ ಮಾಡಿದರು. ಚಿತ್ರದ ನಾಯಕರಾದ ಹ್ಯಾಟ್ರಿಕ್ ನಿರ್ದೇಶಕ, ನಿರ್ಮಾಪಕ, ನಟ, ಡಾ. ಆರ್ ವಿಜಯಕುಮಾರ್, ನಾಯಕಿ ಅನಿತಾಶ್ರೀ, ಸಹ ನಿರ್ದೇಶಕ ವಾಸುದೇವ್ ಶೆಟ್ಟಿ ಮತ್ತು ಚಿತ್ರ ತಂಡದವರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಈ ಸಂದರ್ಭದಲ್ಲಿ ಡಾ.ಅರ್.ವಿಜಯಕುಮಾರ್ ಅವರನ್ನು ಗೌರವ ಪೂರ್ವಕ ಸನ್ಮಾನಿಸಲಾಯಿತು. ನಂತರ ಮಾತನಾಡಿದ ವಿಜಯಕುಮಾರ್ ಅವರು 'ಗುಲಾಬಿ' ಚಿತ್ರದ ಚಿತ್ರೀಕರಣವನ್ನು ಬೆಂಗಳೂರು

### ಪಿಎಂಕೆಎಸ್‌ವೈ 2.0 ಯೋಜನೆ ಅನುಷ್ಠಾನದಲ್ಲಿ ಲೋಪ

# ಅನುದಾನ ದುರ್ಬಳಕೆಯ ತನಿಖೆಗೆ ಮಾಜಿ ಶಾಸಕ ಗುತ್ತೇದಾರ ಆಗ್ರಹ



**ಕಲಬುರಗಿ, ಅ. 12:** ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆ ಅಡಿಯಲ್ಲಿ ಕಲಬುರಗಿ ಜಿಲ್ಲೆಯಲ್ಲಿ ಅನುಷ್ಠಾನಗೊಳ್ಳುತ್ತಿರುವ ಕಾಮಗಾರಿಗಳು, ಅನುದಾನದ ದುರ್ಬಳಕೆ ಹಾಗೂ ರೈತರಿಗೆ ಸೌಲಭ್ಯ ಕಲ್ಪಿಸುವ ವಿಚಾರದಲ್ಲಿ ಹಲವು ಲೋಪದೋಷಗಳು ಕಂಡುಬಂದಿವೆ ಎಂದು ಆರೋಪಿಸಿ ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಸರ್ಕಾರದ ಗಮನಕ್ಕೆ ಮನವಿ ಸಲ್ಲಿಸಲಾಗಿದೆ ಎಂದು ಮಾಜಿ ಶಾಸಕ ಸುಭಾಷ್ ಗುತ್ತೇದಾರ್ ತಿಳಿಸಿದರು.

ಸುದ್ದಿಗೋಷ್ಠಿಯಲಿ, ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಜಲಾನಯನ ಪ್ರದೇಶಗಳ ಅಭಿವೃದ್ಧಿ, ಮಳೆನೀರು ಸಂಗ್ರಹ, ಮಣ್ಣಿನ ಸಂರಕ್ಷಣೆ, ಕೃಷಿ ಭೂಮಿಯ ಫಲವತ್ತತೆ ಹೆಚ್ಚಳ ಮತ್ತು ರೈತರ ಆದಾಯ ವೃದ್ಧಿಸುವ ಉದ್ದೇಶ ಹೊಂದಲಾಗಿದೆ. ಆದರೆ ಯೋಜನೆಯ ಅನುಷ್ಠಾನದಲ್ಲಿ ಸಮರ್ಪಕ ಮೇಲ್ವಿಚಾರಣೆ ಹಾಗೂ ಅನುದಾನದ ಸಮರ್ಪಕ ಬಳಕೆಯ ಕುರಿತು ಪರಿಶೀಲನೆ ನಡೆಸಬೇಕೆಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

0–ವಿವಿಧ ಇಲಾಖೆಗಳ ಮೂಲಕ ಯೋಜನೆ ಅನುಷ್ಠಾನ ಮನವಿಯಲ್ಲಿ ಉಲ್ಲೇಖಿಸಿರುವಂತೆ, ಕೃಷಿ, ತೋಟಗಾರಿಕೆ, ಅರಣ್ಯ, ಗ್ರಾಮೀಣಾ ಭಿವೃದ್ಧಿ ಹಾಗೂ ಸಂಬಂಧಿತ ಇಲಾಖೆಗಳ ಸಹಯೋಗದೊಂದಿಗೆ ಯೋಜನೆಯನ್ನು ಅನುಷ್ಠಾನಗೊಳಿಸಲಾ ಗುತ್ತಿದೆ. 2024–25, 2025–26 ಮತ್ತು 2026–27ನೇ ಸಾಲುಗಳಲ್ಲಿ ಕೈಗೊಂಡಿರುವ ಕಾಮಗಾಯಿರಿಗಳು ಹಾಗೂ ಬಿಡುಗಡೆಯಾದ ಅನುದಾನದ ವಿವರಗಳನ್ನು ಪರಿಶೀಲಿಸಬೇಕು ಎಂದು ಆಗ್ರಹಿಸಲಾಗಿದೆ. ಯೋಜನೆಯಡಿ ರೈತರಿಗೆ ಕೃಷಿ ಚಟುವಟಿಕೆಗಳಿಗೆ ಅಗತ್ಯವಾದ ಸೌಲಭ್ಯಗಳು ತಲುಪುತ್ತಿವೆಯೇ, ಕಾಮಗಾರಿಗಳು ನಿಗದಿತ ಮಾನದಂಡಗಳ ಪ್ರಕಾರ ನಡೆಯುತ್ತಿವೆಯೇ ಮತ್ತು ಸಾರ್ವಜನಿಕ ಹಣ ಸಮರ್ಪಕ ವಾಗಿ ಬಳಕೆ ಯಾಗುತ್ತಿದೆಯೇ ಎಂಬುದನ್ನು ಅಧಿಕಾರಿಗಳು ಪರಿಶೀಲಿಸ ಬೇಕು ಎಂದು ಮನವಿಯಲ್ಲಿ ತಿಳಿಸಲಾಗಿದೆ.

ಜಲಾನಯನ ಅಭಿವೃದ್ಧಿ ಕಾಮಗಾರಿಗಳ ಪರಿಶೀಲನೆಗೆ ಆಗ್ರಹ: ಮಾಡೆಲ್ ವಾಟರ್‌ಶೆಡ್ ಯೋಜನೆಯಡಿ ಜಲಾನಯನ ಪ್ರದೇಶಗಳ ಅಭಿವೃದ್ಧಿ, ಮಣ್ಣು ಮತ್ತು ನೀರಿನ ಸಂರಕ್ಷಣೆ, ಚೆಕ್‌ಡ್ಯಾಂ ನಿರ್ಮಾಣ ಹಾಗೂ ಕೃಷಿಗೆ ಪೂರಕವಾದ ಕಾಮಗಾರಿಗಳನ್ನು ಕೈಗೊಳ್ಳುವ ಉದ್ದೇಶವಿದೆ. ಆದರೆ ಕಾಮಗಾರಿಗಳ ಅನುಷ್ಠಾನ, ಅನುದಾನದ ಹಂಚಿಕೆ ಮತ್ತು ರೈತರಿಗೆ ದೊರೆಯಬೇಕಾದ ಸೌಲಭ್ಯಗಳ ಕುರಿತು ಸಮಗ್ರ ಪರಿಶೀಲನೆ ನಡೆಸಬೇಕೆಂದು ಮನವಿದಾರರು ಒತ್ತಾಯಿಸಿದರು.

ಕೆಲವು ಕಾಮಗಾರಿಗಳಲ್ಲಿ ರೈತರಿಗೆ ಸಮರ್ಪಕ ಪ್ರಯೋಜನ ದೊರೆಯದಿ ರುವುದು ಹಾಗೂ ಯೋಜನೆಯ ಉದ್ದೇಶಕ್ಕೆ ಅನುಗುಣವಾಗಿ ಕಾರ್ಯ ನಿರ್ವಹಿಸಲಾಗು ತ್ತಿದೆಯೇ ಎಂಬ ಪ್ರಶ್ನೆಗಳು ಉದ್ಭವಿಸಿವೆ ಎಂದು ಮನವಿಯಲ್ಲಿ ಆರೋಪಿಸಲಾಗಿದೆ. ಈ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಅಧಿಕಾಯಿರಿಗಳು ಸ್ಥಳ ಪರಿಶೀಲನೆ ನಡೆಸಿ, ಕಾಮಗಾರಿಗಳ ಗುಣಮಟ್ಟ ಮತ್ತು ಫಲಾನುಭವಿಗಳ ವಿವರಗಳನ್ನು ಪರಿಶೀಲಿಸಬೇಕು ಎಂದು ಆಗ್ರಹಿಸಲಾಗಿದೆ. ಎಸ್‌ಸಿಪಿ/ಟಿಎಸ್‌ಪಿ ಅನುದಾನ ಬಳಕೆಯೂ ಪರಿಶೀಲನೆಗೆ ಒತ್ತಾಯ: ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೈತರಿಗಾಗಿ ಮೀಸಲಿಟ್ಟಿರುವ ಎಸ್‌ಸಿಪಿ/ಟಿಎಸ್‌ಪಿ ಅನುದಾನವನ್ನು ಉದ್ದೇಶಿತ ಫಲಾನುಭವಿಗಳಿಗೆ ತಲುಪಿಸುವಲ್ಲಿ ಯಾವುದೇ ಲೋಪವಾಗ ದಂತೆ ಕ್ರಮ ಕೈಗೊಳ್ಳಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಅನುದಾನದ ಹಂಚಿಕೆ, ಫಲಾನುಭವಿಗಳ ಆಯ್ಕೆ ಹಾಗೂ ಕಾಮಗಾರಿಗಳ ಅನುಷ್ಠಾನದಲ್ಲಿ ಪಾರದರ್ಶಕತೆ ಕಾಪಾಡಬೇಕು. ಅರ್ಹ ರೈತರಿಗೆ ಸೌಲಭ್ಯಗಳು ದೊರೆಯುವಂತೆ ಖಚಿತಪಡಿಸಬೇಕು. ನಿಯಮ ಉಲ್ಲಂಘನೆ ಅಥವಾ ಅನುದಾನದ ದುರ್ಬಳಕೆ ಕಂಡುಬಂದಲ್ಲಿ ಸಂಬಂಧಪಟ್ಟವರ ವಿರುದ್ಧ ಕಾನೂನು ಬದ್ಧ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಲಾಗಿದೆ.

ರೈತರಿಗೆ ಸೌಲಭ್ಯ ತಲುಪಿಸಲು ಕ್ರಮ ಕೈಗೊಳ್ಳಲಿ: ಸರ್ಕಾರದ ಕೃಷಿ ಅಭಿವೃದ್ಧಿ ಯೋಜನೆಗಳ ಮುಖ್ಯ ಉದ್ದೇಶ ರೈತರ ಉತ್ಪಾದಕತೆ ಹೆಚ್ಚಿಸುವುದು, ನೀರಿನ ಸಮರ್ಪಕ ಬಳಕೆಗೆ ಉತ್ತೇಜನ ನೀಡುವುದು ಹಾಗೂ ಕೃಷಿಯನ್ನು ಸುಸ್ಥಿರಗೊಳಿಸುವುದಾಗಿದೆ. ಹೀಗಾಗಿ ಯೋಜನೆಗೆ ಬಿಡುಗಡೆಯಾಗುವ ಅನುದಾನವು ನೇರವಾಗಿ ರೈತರಿಗೆ ಪ್ರಯೋಜನವಾಗುವ ರೀತಿಯಲ್ಲಿ ಬಳಕೆಯಾಗಬೇಕು ಎಂಬುದು ಮನವಿದಾರರ ಒತ್ತಾಯವಾಗಿದೆ. ಸಂಬಂಧಪಟ್ಟ ಅಧಿಕಾರಿಗಳು ಯೋಜನೆಯಡಿ ಬಿಡುಗಡೆಯಾದ ಅನುದಾನ, ಕೈಗೊಂಡ ಕಾಮಗಾರಿಗಳು, ಫಲಾನುಭವಿಗಳ ಪಟ್ಟಿ ಹಾಗೂ ವೆಚ್ಚದ ವಿವರಗಳನ್ನು ಪರಿಶೀಲಿಸಿ, ಅಗತ್ಯವಿದ್ದಲ್ಲಿ ತನಿಖೆ ನಡೆಸಬೇಕು. ಯೋಜನೆಯ ಅನುಷ್ಠಾನದಲ್ಲಿ ಕಂಡುಬರುವ ಲೋಪದೋಷಗಳನ್ನು ಸರಿಪಡಿಸಿ, ಅರ್ಹ ರೈತರಿಗೆ ಸೌಲಭ್ಯ ಒದಗಿಸಬೇಕು ಎಂದು ಮನವಿಯಲ್ಲಿ ಆಗ್ರಹಿಸಿದರು.



ಭವ್ಯವಾದ ಮೈಸೂರು ದಸರಾ ಉತ್ಸವದ ಅವಧಿಯಲ್ಲಿ ಸಾಂಸ್ಕೃತಿಕ ನಗರಿಯಲ್ಲಿ ಮೈಸೂರು ಅರಮನೆಯ (ಅಂಬಾ ವಿಲಾಸ ಅರಮನೆ) ದೀಪಾಲಂಕಾರವು ಪ್ರತಿದಿನ ನಡೆಯುವ ಒಂದು ಅದ್ಭುತ ಹಾಗೂ ವಿಶ್ವವಿಖ್ಯಾತ ಕಾರ್ಯಕ್ರಮವಾಗಿದೆ.

# ಬಿಜೆಪಿ ಅಲ್ಪಸಂಖ್ಯಾತರ ಮೋರ್ಚಾ ಜಿಲ್ಲಾ ಉಪಾಧ್ಯಕ್ಷರಾಗಿ ಡಿ ಸರ್ಮಾಸ್ ವಲಿ ನೇಮಕ



**ಬಳ್ಳಾರಿ. ಅ. 12:** ಭಾರತೀಯ ಜನತಾ ಪಾರ್ಟಿಯ ಬಳ್ಳಾರಿ ಜಿಲ್ಲೆ ಅಲ್ಪ ಸಂಖ್ಯಾತರ ಮೋರ್ಚಾ ಜಿಲ್ಲಾ ಉಪಾಧ್ಯಕ್ಷರನ್ನಾಗಿ ಬಳ್ಳಾರಿ ತಾಲೂಕಿನ ಕೆ ವಿರಾಪುರ ಗ್ರಾಮದ ಚರ್ಮಸ್ವಲಿ ಡಿ ತಂದೆ ಖಾಸಿಂ ಸಾಬ್ ಇವರನ್ನು ನೇಮಕ ಮಾಡಿ ಪಕ್ಷದ ಜಿಲ್ಲಾ ಕಚೇರಿಯಲ್ಲಿ ನೇಮಕಾತಿ ಆದೇಶ ಪತ್ರವನ್ನು ನೀಡಲಾಗಿದೆ ಎಂದು ಬಿ. ಜೆ. ಪಿ ಅಲ್ಪಸಂಖ್ಯಾತ ಘಟಕದ ಜಿಲ್ಲಾಧ್ಯಕ್ಷ ಅಲ್ಲಾಭಕ್ಷ್ ತಿಳಿಸಿದ್ದಾರೆ.

ತಮಗೆ ನೀಡಿದ ಈ ಹೊಣೆಗಾರಿಕೆಯನ್ನು ಅತ್ಯಂತ ಜವಾಬ್ದಾರಿಯುತವಾಗಿ ನಿರ್ವಹಿಸುತ್ತಾ, ಪಕ್ಷದ ಸಂಘಟನೆಯನ್ನು ತಳಮಟ್ಟದಲ್ಲಿ ಸದೃಢಗೊಳಿಸುತ್ತಾ, ಪಕ್ಷ ನೀಡುವ ಎಲ್ಲಾ ಆದೇಶಗಳನ್ನು ಪಾಲಿಸಿ ಮುಂಬರುವ ಎಲ್ಲಾ ರೀತಿಯ ಚುನಾವಣೆಗಳನ್ನು ಎದುರಿಸಲು ಕಾರ್ಯಕರ್ತರಿಗೆ ಶಕ್ತಿ ತುಂಬುವ ಕೆಲಸವನ್ನು ಮಾಡಬೇಕೆಂದು ಈ ಸಂದರ್ಭದಲ್ಲಿ ಸೂಚಿಸಿದರು.

ಆದೇಶವನ್ನು ಸ್ವೀಕರಿಸಿದ ಸರ್ಮಸ್ ವಾಲಿ ಮಾತನಾಡಿ ಪಕ್ಷವು ನನ್ನ ಮೇಲೆ ವಿಶ್ವಾಸವಿಟ್ಟು ಜಿಲ್ಲಾ ಮಟ್ಟದ ಹುದ್ದೆಯನ್ನು ನೀಡಿದೆ ಪಕ್ಷದ ಎಲ್ಲಾ ಪದಾಧಿಕಾರಿಗಳಿಗೆ ಧನ್ಯವಾದಗಳು ತಿಳಿಸಲು ಇಚ್ಛಿಸುತ್ತೇನೆ ಮುಂದಿನ ದಿನಗಳಲ್ಲಿ ಅವರು ನೀಡುವ ಸೂಚನೆಯನ್ನು ಪಾಲಿಸುತ್ತಾ ಪಕ್ಷವನ್ನು ಬೇರು ಮಟ್ಟದಲ್ಲಿ ಸಂಘಟಿಸಿ ಪಕ್ಷ ನನ್ನ ಮೇಲಿಟ್ಟ ವಿಶ್ವಾಸವನ್ನು ಉಳಿಸಿಕೊಳ್ಳುತ್ತೇನೆ ಎಂದರು.

ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಅನಿಲ್ ಕುಮಾರ್ ನಾಯ್ಡು ಮಾಜಿ ಸಂಸದ ಸಣ್ಣ ಪಕೀರಪ್ಪ ಸೇರಿದಂತೆ ಪಕ್ಷದ ವಿವಿಧ ಮಂಡಲಗಳ ಪದಾಧಿಕಾರಿಗಳು ಸದಸ್ಯರು ಇದ್ದರು.

# ಬೀದರ್ ಜಿಲ್ಲೆ ಕರಡು ಮತದಾರರ ಪಟ್ಟಿ ಪ್ರಕಟ: ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ ಪೂರ್ಣ




**ಬೀದರ್, ಅ. 12:** ಜಿಲ್ಲೆಯ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ ಅರ್ಹತಾ 2026ರ ಅಕ್ಟೋಬರ್ 1ಕ್ಕೆ ಸಂಬಂಧಿಸಿದಂತೆ ಕೇಂದ್ರ ಚುನಾವಣಾ ಆಯೋಗದಿಂದ ಹೊರಡಿಸಲಾಗುವ ವೇಳಾ ಪಟ್ಟಿಯಂತೆ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು, 2026ರ ಆಗಸ್ಟ್ 24 ರಂದು ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಿದೆ ಎಂದು ಬೀದರ ಜಿಲ್ಲಾಧಿಕಾರಿಗಳ ಕಛೇರಿ ಚುನಾವಣೆ ತಹಸೀಲ್ದಾರರು ತಿಳಿಸಿದ್ದಾರೆ.

ಈ ಕರಡು ಮತದಾರರ ಪಟ್ಟಿಯಲ್ಲಿ ಅನಮೋಲಿ ಎಂದು ಗುರುತಿಸಲಾದ ಅಂದರೆ 2002ರ ಮತದಾರರ ಪಟ್ಟಿಯಲ್ಲಿ ಲಭ್ಯ ಇರುವ ಹೆಸರು ಮತ್ತು ಪ್ರಸ್ತುತ ಮತದಾರರ ಪಟ್ಟಿಯಲ್ಲಿನ ಹೆಸರುಗಳಲ್ಲಿ ವ್ಯತ್ಯಾಸಗಳು ಇರುವಂತಹ ಮತ್ತು 2002ರ ಮತದಾರರ ಪಟ್ಟಿಯಲ್ಲಿ ಹೆಸರು ಇಲ್ಲದ ಮತ್ತು ಮತದಾರರಿಗೆ ಮುಖ್ಯ ಚುನಾವಣಾಧಿಕಾರಿಗಳ ನಿರ್ದೇಶನದಂತೆ ನೋಟಿಸುಗಳನ್ನು ಸರಬರಾಜು ಮಾಡಿ ಮತದಾರರ ನೋಂದಣಾಧಿಕಾರಿಗಳ ಮತ್ತು ಸಹಾಯಕ ಮತದಾರರ ನೋಂದಣಾಧಿಕಾರಿಗಳ ಹಂತದಲ್ಲಿಯೇ ವಿಚಾರಣೆಗೆ ಕರೆದು, ವಿಚಾರಣೆಯಲ್ಲಿ ಈ ಕೆಳಕಂಡ ದಾಖಲಾತಿಗಳಂತೆ ಹಾಗೂ ಈ ಕಚೇರಿಯಿಂದ ಸಾರ್ವಜನಿಕರಿಗೆ ಈಗಾಗಲೇ ಸರಬರಾಜು ಮಾಡಲಾಗಿರುವ ಜಾತಿ ಪ್ರಮಾಣ ಪತ್ರ ಹಾಗೂ ಶಾಶ್ವತ ವಾಸಸ್ಥಳ ಪ್ರಮಾಣ ಪತ್ರವನ್ನು ಮೂಲ ದಾಖಲಾತಿಯಾಗಿ ಪರಿಗಣಿಸಿ ವಿಲೆಗೊಳಿಸಲಾಗಿರುತ್ತದೆ.

ಸೂಚನೆ ಮತ್ತು ವಿಚಾರಣೆ ವರದಿ, 47–ಬಸವಕಲ್ಯಾಣ ವಿಧಾನ ಸಭಾ ಕ್ಷೇತ್ರದ, 3093 ನೋಟಿಸ್ ರಚಿಸಲಾಗಿದೆ. 3097 ಸೂಚನೆ ವಿತರಿಸಲಾಗಿದೆ. 2218ರ ವಿಚಾರಣೆ ನಡೆಯಿತು. 48–ಹುಮನಾಬಾದ್ ವಿಧಾನಸಭಾ ಕ್ಷೇತ್ರದ 5049 ನೋಟಿಸ್ ರಚಿಸಲಾಗಿದೆ, 5049 ಸೂಚನೆ ವಿತರಿಸಲಾಗಿದೆ, 4549 ವಿಚಾರಣೆ ನಡೆಯಿತು. 49–ಬೀದರ ದಕ್ಷಿಣ ವಿಧಾನಸಭಾ ಕ್ಷೇತ್ರದ 2459ನೋಟಿಸ್ ರಚಿಸಲಾಗಿದೆ, 2459 ಸೂಚನೆ ವಿತರಿಸಲಾಗಿದೆ, 2003 ವಿಚಾರಣೆ ನಡೆಯಿತು.

50–ಬೀದರ ವಿಧಾನಸಭಾ ಕ್ಷೇತ್ರದ 11262 ನೋಟಿಸ್ ರಚಿಸಲಾಗಿದೆ, 11204 ಸೂಚನೆ ವಿತರಿಸಲಾಗಿದೆ, 9291 ವಿಚಾರಣೆ ನಡೆಯಿತು. 51–ಭಾಲ್ಕಿ ವಿಧಾನಸಭಾ ಕ್ಷೇತ್ರದ 5835 ನೋಟಿಸ್ ರಚಿಸಲಾಗಿದೆ, 5739 ಸೂಚನೆ ವಿತರಿಸಲಾಗಿದೆ, 5542 ವಿಚಾರಣೆ ನಡೆಯಿತು. 52–ಔರಾದ್ ವಿಧಾನಸಭಾ ಕ್ಷೇತ್ರದ 4968 ನೋಟಿಸ್ ರಚಿಸಲಾಗಿದೆ, 4968 ಸೂಚನೆ ವಿತರಿಸಲಾಗಿದೆ, 3648 ವಿಚಾರಣೆ ನಡೆಯಿತು. ಒಟ್ಟು 32666 ನೋಟಿಸ್ ರಚಿಸಲಾಗಿದೆ, 32516 ಸೂಚನೆ ವಿತರಿಸಲಾಗಿದೆ, 27251 ವಿಚಾರಣೆ ನಡೆಯಿತು ತಹಸಿಲ್ದಾರ್ ತಿಳಿಸಿದರು.

ಮತದಾರರಲ್ಲಿ ವಿಕಲಚೇತನ ಮತದಾರರು ಹಾಗೂ ವಯಸ್ಕ ಮತದಾರರ ಸ್ಥಳಕ್ಕೆ ಖುದ್ದಾಗಿ ಮತದಾರರ ನೋಂದಣಾಧಿಕಾರಿ ಹಾಗೂ ಸಹಾಯಕ ಮತದಾರರ ನೋಂದಣಾಧಿಕಾರಿಗಳು ಭೇಟಿ ನೀಡಿ ವಿಚಾರಣೆಯನ್ನು ಜರುಗಿಸಿ ದಾಖಲಾತಿಗಳನ್ನು ಪರಿಶೀಲಿಸುವುದರ ಮೂಲಕ ಮತ್ತು ಮತದಾರರಿಗೆ ನೀಡಿರುವ ನೋಟಿಸುಗಳ ವಿಲೇವಾರಿ ಯನ್ನು ಮಾಡಲಾಗುತ್ತಿದೆ. ಉಳಿದ ಮತದಾರರು ಸಂಬಂಧಪಟ್ಟ ಮತದಾರರು ನೋಟಿಸ್ ಸ್ವೀಕರಿಸಿದ ಬಳಿಕ, ನೋಟಿಸಿನಲ್ಲಿ ನೀಡಿರುವ ದಿನಾಂಕ ಮತ್ತು ಸಮಯಕ್ಕೆ ಸರಿಯಾಗಿ ನಿಗದಿತ ಸ್ಥಳಗಳಲ್ಲಿ ಹಾಜರಾಗಿದ್ದು ವರ್ಗಗಳಿಗೆ ಅನುಗುಣವಾಗಿ ದಾಖಲೆ ಗಳನ್ನು ತೆಗೆದುಕೊಂಡು ಸಲ್ಲಿಸಬೇಕು, ಭಾರತದಲ್ಲಿ 01.07.1987 ಕ್ಕಿಂತ ಮೊದಲು ಜನಿಸಿದ್ದರೆ, ಸ್ವಂತ ಜನ್ಮ ದಿನಾಂಕ ಮತ್ತು/ಅಥವಾ ಜನ್ಮಸ್ಥಳವನ್ನು ಸಾಬೀತುಪಡಿಸುವ ಯಾವುದೇ ಒಂದು ದಾಖಲೆ ಸಲ್ಲಿಸಬೇಕು.

ಭಾರತದಲ್ಲಿ 01.07.1987 ರಿಂದ 02.12.2004ರ ನಡುವೆ

### ಅ.23ರಂದು ಕಿತ್ತೂರು ರಾಣಿ ಚೆನ್ನಮ್ಮ, ನ. 11ರಂದು ಒನಕೆ ಓಬವ್ವ, ನ.27ರಂದು ಕನಕದಾಸ ಜಯಂತಿ ಆಚರಣೆ

**ವಿಜಯಪುರ, ಅ. 12**–ಕಿತ್ತೂರು ರಾಣಿ ಚೆನ್ನಮ್ಮ, ವೀರವನಿತೆ ಒನಕೆ ಓಬವ್ವ ಹಾಗೂ ಕನಕದಾಸರ ಜಯಂತಿಗಳನ್ನು ಅರ್ಥಪೂರ್ಣವಾಗಿ ಆಚರಿಸಲು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಿ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಡಾ. ಔದ್ರಾಮ ಸೂಚಿಸಿದರು.



ಅಕ್ಟೋಬರ್ 23ರಂದು ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ, ನವೆಂಬರ್ 11ರಂದು ಒನಕೆ ಓಬವ್ವ ಜಯಂತಿ ಹಾಗೂ ನವೆಂಬರ್ 27ರಂದು ಕನಕದಾಸ ಜಯಂತಿಯನ್ನು ನಗರದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ಗಳೊಂದಿಗೆ ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ತಿಳಿಸಿದರು.

ಅ. 23ರಂದು ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ: ಅಂದು ಬೆಳಿಗ್ಗೆ 9.30ಕ್ಕೆ ಶ್ರೀ ಸಿದ್ದೇಶ್ವರ ದೇವಸ್ಥಾನದಿಂದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದವರೆಗೆ ವಿವಿಧ ಕಲಾತಂಡಗಳೊಂದಿಗೆ ಮೆರವಣಿಗೆ ನಡೆಯಲಿದೆ. ನಂತರ ವೇದಿಕೆ ಕಾರ್ಯಕ್ರಮದ ಜತೆಗೆ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ.

ನ.11ರಂದು ಒನಕೆ ಓಬವ್ವ ಜಯಂತಿ: ರಂಗಮಂದಿರದಲ್ಲಿ ಒನಕೆ ಓಬವ್ವ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ, ವಿಶೇಷ ಉಪನ್ಯಾಸ ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು. ಅವರ ಅಪ್ರತಿಮ ಸಾಹಸ ಹಾಗೂ ಶೌರ್ಯ ಅವರ ಜೀವನಾದರ್ಶಗಳನ್ನು ತಿಳಿಸಿ ಕೊಡಲಾಗುವುದು.

ನ.27ರಂದು ಕನಕದಾಸ ಜಯಂತಿ: ಅಂದು ಬೆಳಿಗ್ಗೆ 9 ಗಂಟೆಗೆ ಶ್ರೀ ಸಿದ್ದೇಶ್ವರ ದೇವಸ್ಥಾನದಿಂದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದವರೆಗೆ ಗೊಂಬೆ ಕುಣಿತ, ಡೊಳ್ಳು ಕುಣಿತ ಸೇರಿದಂತೆ ವಿವಿಧ ಕಲಾತಂಡಗಳೊಂದಿಗೆ ಕನಕದಾಸರ ಭಾವಚಿತ್ರದ ಮೆರವಣಿಗೆ ನಡೆಯಲಿದೆ. ರಂಗಮಂದಿರದಲ್ಲಿ ನಡೆಯುವ ವೇದಿಕೆ ಕಾರ್ಯಕ್ರಮ, ವಿಶೇಷ ಉಪನ್ಯಾಸ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು.

ಮಹನೀಯರ ಶೌರ್ಯ, ಭಕ್ತಿ, ಸಾಹಿತ್ಯ ಹಾಗೂ ಸಾಮಾಜಿಕ ಸಮಾನತೆಯ ಸಂದೇಶಗಳನ್ನು ಜನರಿಗೆ ತಲುಪಿಸುವುದು ಜಯಂತಿಗಳ ಆಚರಣೆಯ ಉದ್ದೇಶವಾಗಿದೆ. ಈ ಹಿನ್ನೆಲೆಯಲ್ಲಿ ಅಧಿಕಾರಿಗಳು ವಹಿಸಿದ ಜವಾಬ್ದಾರಿಗಳನ್ನು ಸಮರ್ಪಕವಾಗಿ ನಿರ್ವಹಿಸಬೇಕು.

ಸಾರ್ವಜನಿಕರು, ವಿವಿಧ ಸಂಘ–ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಕನ್ನಡಪರ ಸಂಘಟನೆಗಳ ಪ್ರತಿನಿಧಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮಗಳನ್ನು ಯಶಸ್ವಿಗೊಳಿಸಬೇಕು ಎಂದು ಅವರು ಮನವಿ ಮಾಡಿದರು.

### ವಿಧಾನ ಪರಿಷತ್ ಈಶಾನ್ಯ ಶಿಕ್ಷಕರ ಕ್ಷೇತ್ರ ಚುನಾವಣೆ

# ಬಿಜೆಪಿ ಅಭ್ಯರ್ಥಿ ಶಶೀಲ್ ನಮೋಶಿ ಪರ ಮತಯಾಚನೆ



**ರಾಯಚೂರು, ಅ. 12:** ಈಶಾನ್ಯ ಶಿಕ್ಷಕರ ಮತಕ್ಷೇತ್ರದ ಎನ್‌ಡಿಎ ಮೈತ್ರಿಕೂಟದ ಅಭ್ಯರ್ಥಿ ಶಶೀಲ್ ನಮೋಶಿ ಪರ ವಿಧಾನ ಪರಿಷತ್ ಸದಸ್ಯ ಡಿ.ಎಸ್. ಅರುಣ ಹಾಗೂ ನಗರ ಶಾಸಕ ಡಾ. ಎಸ್. ಶಿವರಾಜ ಪಾಟೀಲ ಅವರು ನಗರದ ವಿವಿಧ ಶಿಕ್ಷಣ ಸಂಸ್ಥೆಗಳಿಗೆ ಭೇಟಿ ನೀಡಿ ಮತಯಾಚಿಸಿದರು.

ರೇಸ್ ಚಾಣಕ್ಯ ಶಾಲೆ, ವೇದಾಂತ ಕಾಲೇಜು, ರೇಸ್ ಕಾನ್ಸೆಪ್ಟ್ ಶಾಲೆ, ಕೊಂಡ ಸರಸ್ವತಮ್ಮ ಹನುಮಂತಯ್ಯ ಶಾಲೆ ಹಾಗೂ ವಿಜ್ಞಾನ ಶಾಲೆಗೆ ಭೇಟಿ ನೀಡಿದ ಅವರು ಶಿಕ್ಷಕರೊಂದಿಗೆ ಸಮಾಲೋಚನೆ ನಡೆಸಿದರು.

ಡಿ.ಎಸ್. ಅರುಣ ಮಾತನಾಡಿ, ಶಶಿಲ್ ನಮೋಶಿ ಅವರು ವಿಧಾನ ಪರಿಷತ್ತಿನಲ್ಲಿ ನಾಲ್ಕು ಅವಧಿಯಲ್ಲಿ ಶಿಕ್ಷಕರ ಬೇಡಿಕೆ ಪರ ಧ್ವನಿ ಎತ್ತಿದ್ದಾರೆ' ಎಂದರು.

ಡಾ. ಎಸ್. ಶಿವರಾಜ ಪಾಟೀಲ ಮಾತನಾಡಿ, ರಾಜ್ಯ ಸರ್ಕಾರದ ಆರ್ಥಿಕ ನೀತಿಗಳ ಪರಿಣಾಮ ತೆರಿಗೆ ಹೊರೆ ಹೆಚ್ಚಾಗಿದೆ. ಶಿಕ್ಷಕರ ನೇಮಕಾತಿ ಸೇರಿದಂತೆ ಹಲವು ಸಮಸ್ಯೆಗಳ ಬಗ್ಗೆ ಸರ್ಕಾರ ಕಾಳಜಿ ವಹಿಸುತ್ತಿಲ್ಲ ಎಂದರು.

ರೇಸ್ ಚಾಣಕ್ಯ ಶಾಲೆಯ ಅಧ್ಯಕ್ಷೆ ಸಾವಿತ್ರಿ ಪುರುಷೋತ್ತಮ, ವೇದಾಂತ ಕಾಲೇಜು ಅಧ್ಯಕ್ಷ ರಾಕೇಶ ರಾಜಲಬಂಡಿ, ರೇಸ್ ಕಾನ್ಸೆಪ್ಟ್ ಶಾಲೆಯ ಸಹ ಕಾರ್ಯದರ್ಶಿ ವಿಜ್ಞಾನ ವೆಂಕಟೇಶ, ಕೊಂಡ ಸರಸ್ವತಮ್ಮ ಹನುಮಂತಯ್ಯ ಶಾಲೆಯ ಕಾರ್ಯದರ್ಶಿ ಕೆ.ವಿ. ಮನೋಹರ, ಉಪಾಧ್ಯಕ್ಷ ಬಿ. ಜಗದೀಶ ಗುಪ್ತಾ, ವಿಜ್ಞಾನ ಶಾಲೆಯ ಅಧ್ಯಕ್ಷ ವಿಜ್ಞಾನ ವೆಂಕಟೇಶ ಮತಯಾಚನೆ ಕಾರ್ಯಕ್ರಮ ಆಯೋಜಿಸಿದ್ದರು.

ಬಿಜೆಪಿ ರಾಜ್ಯ ಸಮಿತಿ ಸದಸ್ಯ ರಾಜಕುಮಾರ, ತ್ರಿವಿಕ್ರಮ ಜೋಶಿ, ಜಿಲ್ಲಾ ಘಟಕದ ಉಪಾಧ್ಯಕ್ಷ ಬಿ. ಗೋವಿಂದ, ಟಿ. ಶ್ರೀನಿವಾಸ ರೆಡ್ಡಿ, ಮಂಡಲ ಅಧ್ಯಕ್ಷ ಊಟ್ಕೂರು ರಾಘವೇಂದ್ರ, ಜೆಡಿಎಸ್ ರಾಜ್ಯ ಪ್ರಧಾನ ಕಾರ್ಯದರ್ಶಿ ಗಾಣಧಾಳ ಲಕ್ಷ್ಮೀಪತಿ, ಬಿಜೆಪಿ ಮುಖಂಡರಾದ ಕಡಗೋಲು ಆಂಜನೇಯ, ಡಾ. ನಾಗರಾಜ ಭಾಲ್ಕಿ, ನರಸಪ್ಪ ಯಕ್ಲಾಸ ಪೂರು, ಪಲುಗುಲ ನಾಗರಾಜ, ತಾಳಪಲ್ಲಿ ಶ್ರೀನಿವಾಸ, ಕೆ.ಇ. ವೀರಪ್ರಕಾಶ ಇದ್ದರು.

### ಗಾಣಗಾಪುರದ ದತ್ತನ ದೇಗುಲದಲ್ಲಿ ಹುಂಡಿ ಎಣಿಕೆ

# ಭೀಕರ ಬರಗಾಲದಲ್ಲೂ ಭಕ್ತಿಗಿಲ್ಲ ಬರ ದತ್ತನ ಹುಂಡಿಗೆ 1.14 ಕೋಟಿ ದೇಣಿಗೆ

**ಕಲಬುರಗಿ, ಅ. 12:** ರಾಜ್ಯದಲ್ಲಿ ಮುಂಗಾರು ಮಳೆ ಬಾರದೇ ಭೀಕರ ಬರಗಾಲ ತಾಂಡವವಾಡುತ್ತಿದೆ. ಆದರು ಜಿಲ್ಲೆಯ ಪ್ರಸಿದ್ಧ ಗಾಣಗಾಪುರ ದತ್ತಾತ್ರೇಯ ದೇವಸ್ಥಾನದ ಭಕ್ತರ ಭಕ್ತಿಗೆ ಮಾತ್ರ ಬರ ಬಂದಿಲ್ಲ. ದತ್ತನ ಹುಂಡಿಯಲ್ಲಿ ಮೂರು ತಿಂಗಳ ಅವಧಿಯಲ್ಲಿ 1.14 ಕೋಟಿ ನಗದು, ಇದರೊಂದಿಗೆ 110 ಗ್ರಾಂ ಚಿನ್ನ ಮತ್ತು 340 ಗ್ರಾಂ ಬೆಳ್ಳಿಯೂ ಕಾಣಿಕೆಯಾಗಿ ಬಂದಿದೆ.

ಮುಜರಾಯಿ ಇಲಾಖೆ ವ್ಯಾಪ್ತಿಗೆ ಒಳಪಟ್ಟಿರುವ ಈ ದೇವಸ್ಥಾನಕ್ಕೆ ಭಕ್ತರು ನೀಡುವ ಕಾಣಿಕೆ ಹೆಚ್ಚುತ್ತಲೇ ಇದೆ. ಹಾಗಾಗಿಯೇ ಪ್ರತಿ ಮೂರು ತಿಂಗಳಿಗೊಮ್ಮೆ ಈ ದೇವಸ್ಥಾನದಲ್ಲಿ ಹುಂಡಿ ಎಣಿಕೆ ಕಾರ್ಯ ನಡೆಯುತ್ತದೆ. ಸಿಸಿ ಕ್ಯಾಮರಾ ಕಣ್ಗಾವಲಿನಲ್ಲಿ ಆಡಳಿತಾಧಿಕಾರಿ ಅವರ ಸಮ್ಮುಖದಲ್ಲಿ ದೇವಸ್ಥಾನದ ಹತ್ತಾರು ಸಿಬ್ಬಂದಿ ಹುಂಡಿಯಲ್ಲಿನ ಹಣ ಎಣಿಕೆಯಲ್ಲಿ ತೊಡಗುತ್ತಾರೆ. ನಿನ್ನೆ ನಡೆದ ಈ ಬಾರಿಯ ಹುಂಡಿ ಎಣಿಕೆ ಪೂರ್ಣಗಡಾಗ ಒಟ್ಟು 1 ಕೋಟಿ 14 ಲಕ್ಷ ರೂಪಾಯಿ ನಗದು, 110 ಗ್ರಾಮ್ ಅಂದರೆ 11 ತೊಲ ಚಿನ್ನ ಹಾಗೂ 340 ಗ್ರಾಮ್ ಬೆಳ್ಳಿ ಸಂಗ್ರಹವಾಗಿರುವುದು ದೃಢಪಟ್ಟಿದೆ.

ಕಳೆದ ತ್ರೈಮಾಸಿಕ ಅವಧಿ ಎಣಿಕೆಯಲ್ಲಿ 99 ಲಕ್ಷ ರೂಪಾಯಿ ಸಂಗ್ರಹವಾಗಿತ್ತು. ಈ ಬಾರಿ 15 ಲಕ್ಷ ಹೆಚ್ಚುವರಿ ಹಣ ಜಮೆ ಆಗುವ ಮೂಲಕ ರಾಜ್ಯವನ್ನೇ ಕಾಡುತ್ತಿರುವ ಬರಗಾಲದ ಪರಿಸ್ಥಿತಿ ಇಲ್ಲಿ ಪರಿಣಾಮ



ಬೀರಿಲ್ಲ. ದತ್ತನ ಮೇಲಿನ ಭಕ್ತಿಗೆ ಬರದ ಕರಿನೆರಳು ಕಿಂಚಿತ್ತೂ ಬೀರಿಲ್ಲ ಎನ್ನುವುದಕ್ಕೆ ಈ ಬಾರಿ ಹುಂಡಿಯಲ್ಲಿ ಪತ್ತೆಯಾದ 1.14 ಕೋಟಿ ಹಣವೇ ಸಾಕ್ಷಿಯಾಗಿದೆ.

ಗಾಣಗಾಪೂರ ದತ್ತಾತ್ರೆಯ ದೇವಸ್ಥಾನ ರಾಜ್ಯದ ಅತ್ಯಂತ ಪ್ರಮುಖ ದೇವಸ್ಥಾನಗಳಲ್ಲಿ ಒಂದು. ಜಿಲ್ಲೆಯ ಅಫಜಲಪುರ ತಾಲೂಕಿನ ಭೀಮಾನದಿ ತೀರದಲ್ಲಿರುವ ಗಾಣಗಾಪೂರದಲ್ಲಿ ಶ್ರೀ ದತ್ತನ ಪಾದುಕೆಗಳಿದ್ದರೆ, ಭೀಮಾ–ಅಮರ್ಜಾ ನದಿಗಳ ಸಂಗಮದ ಬಳಿ ದತ್ತಾವತಾರಿ ಶ್ರೀ ನರಸಿಂಹ ಸರಸ್ವತಿ ಸ್ವಾಮಿಗಳ ತಪಸ್ಸು ಮಾಡಿರುವ ಔದುಂಬರ ವೃಕ್ಷ ಮತ್ತುಜ ಸಂಗಮೇಶ್ವರ ದೇವಸ್ಥಾನಗಳಿವೆ. ಈ ದೇವಸ್ಥಾನ ದಕ್ಷಿಣ ಭಾರತದ ಅತ್ಯಂತ ಶ್ರೇಷ್ಠವಾದ ಪುಣ್ಯಕ್ಷೇತ್ರಗಳಲ್ಲಿ ಒಂದು ಎನಿಸಿಕೊಂಡಿದೆ.

ದತ್ತಾತ್ರೇಯರ ಎರಡನೇ ಅವತಾರ ಎಂದು ಭಕ್ತರು ನಂಬುವ ಶ್ರೀ ನರಸಿಂಗ ಸರಸ್ವತಿ ಸ್ವಾಮಿ ಅವರದ್ದು ಎನ್ನಲಾದ ನಿರ್ಗುಣ ಪಾದುಕೆಗಳನ್ನು ಪೂಜಿಸುವುದೇ ಈ ದೇವಸ್ಥಾನದ ವಿಶೇಷತೆ.

# ರೈತರಿಗೆ ಎಕರೆಗೆ 25 ಸಾವಿರ ಬೆಳೆ ಪರಿಹಾರ ನೀಡಿ: ರೈತಸಂಘದ ಹೋರಾಟ

**ರಾಯಚೂರು, ಅ. 12:** ಜಿಲ್ಲೆಯನ್ನು ಬರಪೀಡಿತ ಪ್ರದೇಶವೆಂದು ಘೋಷಿಸಿ ರುವ ಹಿನ್ನೆಲೆಯಲ್ಲಿ ರೈತರಿಗೆ ಪ್ರತಿ ಎಕರೆಗೆ 25 ಸಾವಿರ ಬೆಳೆ ಪರಿಹಾರ ನೀಡಬೇಕು, ಕೃಷಿ ಸಾಲ ಸಂಪೂರ್ಣ ಮನ್ನಾ ಮಾಡಬೇಕು ಹಾಗೂ ಪಂಪ್‌ಸೆಟ್‌ಗಳಿಗೆ ನಿರಂತರ 12 ಗಂಟೆ ವಿದ್ಯುತ್ ಪೂರೈಸಬೇಕು ಎಂದು ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಜಿಲ್ಲಾ ಘಟಕದ ಪದಾಧಿಕಾರಿಗಳು ಬುಧವಾರ ನಗರದ ಟಿಪ್ಪು ಸುಲ್ತಾನ್ ಉದ್ಯಾನದಲ್ಲಿ ಪ್ರತಿಭಟನೆ ನಡೆಸಿದರು.

ಜಿಲ್ಲೆಯಲ್ಲಿ ಮೇ ತಿಂಗಳಿನಿಂದ ಸಮರ್ಪಕ ಮಳೆಯಾಗದೆ ಬೆಳೆಗಳು ಒಣಗುತ್ತಿವೆ. ಮಳೆ ಕೊರತೆಯಿಂದ ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದು, ಸಾಲದ ಸುಳಿಯಲ್ಲಿ ಸಿಲುಕಿದ್ದಾರೆ. ಕೂಡಲೇ ಸರ್ಕಾರ ರೈತರ ನೆರವಿಗೆ ಧಾವಿಸಬೇಕು ಎಂದು ಪ್ರತಿಭಟನಕಾರರು ಒತ್ತಾಯಿಸಿದರು.

ರಾಷ್ಟ್ರೀಕೃತ ಹಾಗೂ ರಾಜ್ಯದ ವಿವಿಧ ಬ್ಯಾಂಕ್‌ಗಳಲ್ಲಿ ರೈತರು ಪಡೆದಿರುವ ಕೃಷಿ ಸಾಲವನ್ನು ಸಂಪೂರ್ಣ ಮನ್ನಾ ಮಾಡಬೇಕು.



ಜಾನುವಾರುಗಳಿಗೆ ಕುಡಿಯುವ ನೀರು ಹಾಗೂ ಅಗತ್ಯ ಪ್ರಮಾಣದ ಮೇವು ಒದಗಿಸಬೇಕು ಎಂದು ಆಗ್ರಹಿಸಿದರು.

ನಾರಾಯಣಪುರ ಬಲದಂಡೆ ಕಾಲುವೆಯ 95ರಿಂದ 168 ಕಿ.ಮೀ. ವರೆಗೆ ನೀರು ಹರಿಸಬೇಕು. ಜಿಲ್ಲೆಯ ಎಲ್ಲ ಕೆರೆಗಳನ್ನು ತುಂಬಿಸಬೇಕು. ರಾಯಚೂರು ಗ್ರಾಮೀಣ ಕ್ಷೇತ್ರದ ಮಟಮಾರಿ ಏತ ನೀರಾವರಿ ಯೋಜನೆಯ ಕಾಮಗಾರಿ ತಕ್ಷಣ ಆರಂಭಿಸಬೇಕು. ತುಂಗಭದ್ರಾ ನದಿಗೆ ಅಡ್ಡಲಾಗಿ ನಿರ್ಮಿಸಿರುವ ರಾಜಲ ಬಂಡಾ ಅಣೆಕಟ್ಟಿನಿಂದ ಆರ್‌ಡಿಸಿ ಕಾಲುವೆಗೆ ನೀರು ಹರಿಸಬೇಕು ಎಂದು ಒತ್ತಾಯಿಸಿದರು.

ರೈತರು ಪಾವತಿಸಿರುವ ಬೆಳೆ ವಿಮೆಗೆ ಸೂಕ್ತ ಪರಿಹಾರವನ್ನು ತಕ್ಷಣ ಬಿಡುಗಡೆ ಮಾಡಬೇಕು. ಹಿಂಗಾರು ಬೆಳೆ ಬೆಳೆಯಲು ವಿಶೇಷ ಪ್ಯಾಕೇಜ್ ಘೋಷಿಸಬೇಕು. ರಸ ಗೊಬ್ಬರ ಪಡೆಯಲು ಕಡ್ಡಾಯಗೊಳಿ ಸಿರುವ ಎಫ್‌ಎಡಿ ನಿಯಮವನ್ನು ರದ್ದುಪಡಿಸಬೇಕು ಎಂದು ಆಗ್ರಹಿಸಿದರು.

ಪಂಪ್‌ಸೆಟ್‌ಗಳಿಗೆ ನಿರಂತರ ವಿದ್ಯುತ್ ಪೂರೈಸಲು ಸಂಬಂಧಿಸಿದ ಇಲಾಖೆಗೆ ಕಟ್ಟುನಿಟ್ಟಿನ ಸೂಚನೆ ನೀಡಬೇಕು. ಹೊಲಗಳಲ್ಲಿರುವ ಬೋರ್‌ವೆಲ್‌ಗಳಿಗೆ ಆರ್‌ಆರ್ ನಂಬರ್ ನೀಡಲು ನಿಗದಿಪಡಿಸಿರುವ ?45 ಸಾವಿರ ಶುಲ್ಕ ರದ್ದುಪಡಿಸಿ ಉಚಿತವಾಗಿ ಆರ್‌ಆರ್ ನಂಬರ್ ನೀಡಬೇಕು. ರೈತರಿಗೆ ಟ್ರಾನ್ಸ್‌ಫಾರ್ಮರ್ ಗಳನ್ನು ಉಚಿತವಾಗಿ ಒದಗಿಸಬೇಕು ಎಂದು ಒತ್ತಾಯಿಸಿದರು.

ಹತ್ತಿಗೆ ಕೇಂದ್ರ ಸರ್ಕಾರ ಪ್ರತಿ ಕ್ವಿಂಟಲ್‌ಗೆ ರೂ.12 ಸಾವಿರ ಬೆಂಬಲ ಬೆಲೆ ನಿಗದಿಪಡಿಸಬೇಕು. ಖರೀದಿ ಕೇಂದ್ರಗಳಲ್ಲಿ ಮಾರಾಟ ಮಾಡಿರುವ ಜೋಳದ ಹಣ ಪಾವತಿಯಾಗದ ರೈತರಿಗೆ ಕೂಡಲೇ ಹಣ ಬಿಡುಗಡೆ ಮಾಡಬೇಕು.

ಹತ್ತಿ ಮಾರಾಟದ ವೇಳೆ ಲೋಡಿಂಗ್, ಅನ್‌ಲೋಡಿಂಗ್ ವೆಚ್ಚವನ್ನು ರೈತರಿಂದ ವಸೂಲಿ ಮಾಡುವುದನ್ನು ಹಾಗೂ ಪ್ರತಿ ಕ್ವಿಂಟಲ್‌ಗೆ 2 ಕೆ.ಜಿ. ಸ್ಕೂಟ್ ತೆಗೆಯುವುದನ್ನು ತಕ್ಷಣ ನಿಲ್ಲಿಸಬೇಕು ಎಂದು ಆಗ್ರಹಿಸಿದರು.

# ಭದ್ರಾ ಮೇಲ್ದಂಡೆ ಯೋಜನೆ ರಾಷ್ಟ್ರೀಕರಣಗೊಳಿಸಿ: ಮುರಳೀಧರ ಹಾಲಪ್ಪ ಒತ್ತಾಯ

**ನವದೆಹಲಿ, ಅ.12:** ಭದ್ರಾ ಮೇಲ್ದಂಡೆ ಯೋಜನೆಯನ್ನು ರಾಷ್ಟ್ರೀಯ ಯೋಜನೆಯನ್ನಾಗಿ ಘೋಷಿಸಲು ಕೇಂದ್ರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದ್ದು, 2023–24ನೇ ಸಾಲಿನ ಕೇಂದ್ರ ಆಯವ್ಯಯದಲ್ಲಿ ಸದರಿ ಯೋಜನೆಗೆ ರೂ.5300 ಕೋಟಿಗಳ ಅನುದಾನವನ್ನು ಘೋಷಣೆ ಮಾಡಲಾಗಿದೆ. ಶೀಘ್ರವೇ ಈ ಯೋಜನೆಯನ್ನು ರಾಷ್ಟ್ರೀಯ ಯೋಜನೆಯನ್ನಾಗಿಸುವಂತೆ ಕೌಶಲ್ಯ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಮುರಳೀಧರ ಹಾಲಪ್ಪ ಒತ್ತಾಯಿಸಿದರು.

ಸದರಿ ಯೋಜನೆಯನ್ನು ರಾಷ್ಟ್ರೀಯ ಯೋಜನೆಯನ್ನಾಗಿ ಘೋಷಿಸುವ ಪ್ರಕ್ರಿಯೆ ವಿಳಂಬವಾಗಿರುವ ಹಿನ್ನೆಲೆಯಲ್ಲಿ ಯೋಜನೆಯನ್ನು ಅತೀ ಶೀಘ್ರವಾಗಿ ಪೂರ್ಣಗೊಳಿಸುವ ಉದ್ದೇಶದಿಂದ ಈ ರೂ.5,300 ಕೋಟಿಗಳ ಧನಸಹಾಯವನ್ನು Pradhana Mantri Krishi Sinchayee Yojana - Accelerated Irrigation Benefit Programme (PMKSY-AIBP)/National Project ಸ್ಕೀಂ ಅಡಿ ಬಿಡುಗಡೆಗೊಳಿಸಲು ದಿ:16.08.2023, ದಿ:19.06.2024, ದಿ:03.08.2024 ಮತ್ತು ದಿ:28.10.2024ರ ಪತ್ರಗಳಲ್ಲಿ ಕಾರ್ಯದರ್ಶಿಗಳು, ಕೇಂದ್ರ ಜಲಶಕ್ತಿ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಈ ಕುರಿತು ನೀರಾವರಿ ಹೋರಾಟ ಸಮಿತಿ ವತಿಯಿಂದ ಕೇಂದ್ರ ಸಚಿವರು, ಜಲಶಕ್ತಿ ಸಚಿವಾಲಯ, ಭಾರತ ಸರ್ಕಾರ ಇವರೊಂದಿಗೆ ದಿ:25.02.2025 ಮತ್ತು 30.05.26ರಂದು ಭೇಟಿ ಮಾಡಿ ಆಗ್ರಹಿಸಲಾಗಿದೆ ಎಂದು ತಿಳಿಸಿದರು.

ಕೇಂದ್ರ ಸರ್ಕಾರ ತನ್ನ ಬಜೆಟ್‌ನಲ್ಲಿ ಭದ್ರ ಮೇಲ್ದಂಡೆ ಯೋಜನೆ ಅನುಷ್ಠಾನಕ್ಕಾಗಿ ಘೋಷಣೆ ಮಾಡಿದ್ದ 5300 ಕೋಟಿ ರೂ.ಗಳನ್ನು ತಕ್ಷಣ ಬಿಡುಗಡೆಗೊಳಿಸಬೇಕು. ಸಂಸದರು ಕೇಂದ್ರ ಸರ್ಕಾರವನ್ನು ಸಂಸತ್‌ನಲ್ಲಿ ಈ ಬಗ್ಗೆ ಏರು ಧ್ವನಿಯಲ್ಲಿ ಪ್ರಶ್ನಿಸುವ ಮೂಲಕ ಒತ್ತಡ ಹೇರುವ ಕೆಲಸ ಮಾಡಬೇಕು ಎಂದು ಕೌಶಲ್ಯ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಮುರಳೀಧರ ಹಾಲಪ್ಪ ಒತ್ತಾಯಿಸಿದರು.



ತುಮಕೂರು ಜಿಲ್ಲೆಯ ಗಡಿ ಭಾಗಗಳಾದ ಚಿಕ್ಕನಾಯಕನಹಳ್ಳಿ, ಶಿರಾ, ಮಧುಗಿರಿ, ಪಾವಗಡ ಸೇರಿದಂತೆ ತುಮಕೂರು ಜಿಲ್ಲೆಯ ರೈತರ ಬಾಳು ಹಸನಾಗಲು ಇದರಿಂದ ನೆರವಾಗುತ್ತದೆ ಎಂದು ತಿಳಿಸಿದರು.

ತುಮಕೂರು ಜಿಲ್ಲೆಗೆ ಶಾಶ್ವತ ನದಿ ನೀರು ಇಲ್ಲದೆ ಇರುವ ಕಾರಣ ಅತಿ ಹೆಚ್ಚಿನ ಪ್ರದೇಶ ಮಳೆಯನ್ನೇ ನೆಚ್ಚಿಕೊಂಡಿದೆ, ಈ ಬಾರಿ ಎಲ್ ನೀನೊ ಪ್ರಭಾವದಿಂದಾಗಿ ಮುಂಗಾರು ಕೈ ಕೊಟ್ಟಿದ್ದು ಎಲ್ಲಾ ರೈತರ ಕೊಳವೆಬಾವಿಗಳು ಬತ್ತಿಹೋಗಿವೆ. ಲಕ್ಷಾಂತರ ರೂಪಾಯಿ ಖರ್ಚುಮಾಡಿ ಕೊರೆಸಿದ ಕೊಳವೆ ಬಾವಿಗಳು ಕೈಕೊಟ್ಟ ಪರಿಣಾಮ ರೈತ ಕಂಗಾಲಾಗಿದ್ದಾರೆ. ಇದಕ್ಕೆ ಶಾಶ್ವತ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಭದ್ರಾ ಮೇಲ್ದಂಡೆ ಯೋಜನೆ ಜಾರಿಗೆ ತರಲು ಕೆಲಸ ಮಾಡಬೇಕಿದೆ. ಹೇಮಾವತಿ ನೀರು ಹಂಚಿಕೆಯಾಗದ ಭಾಗಗಳಲ್ಲಿ ಗ್ರಾಮಗಳಿಗೆ ಕೆರೆಗಳಿಗೆ ಭದ್ರಾ ಮೇಲ್ದಂಡೆ ನೀರು ಹಂಚಿಕೆಯಾಗಬೇಕು ನಮ್ಮೂರಿಗೆ ನೀರು ಬರುತ್ತದೆ ಎಂಬ ಕಾರಣ ಕೊಟ್ಟು ರೈತರು ತಮ್ಮ ಜಮೀನುಗಳನ್ನು ಈ ಯೋಜನೆಗೆ ಬಿಟ್ಟು ಕೊಟ್ಟಿದ್ದು ಪರಿಹಾರ ಪಡೆಯದೆ ಕಾಮಗಾರಿಗೆ ಸಹಕರಿಸಿದ್ದಾರೆ ರೈತರಿಗೆ ಕೊಡಬೇಕಾದ ಪರಿಹಾರಗಳನ್ನು ಈಗ ಒದಗಿಸುವ ಕೆಲಸ ಅಧಿಕಾರಿಗಳು ಮಾಡಬೇಕಿದೆ ಮಾನ್ಯ ಮುಖ್ಯಮಂತ್ರಿಗಳು ಆದಂತಹ ಡಿ.ಕೆ ಶಿವಕುಮಾರ್ ರವರ ಸರ್ಕಾರ ಸುಭದ್ರವಾಗಿದ್ದು ಮುಖ್ಯಮಂತ್ರಿಗಳು ರೈತರ ಪರವಾದ ಧೋರಣೆ ಹೊಂದಿದ್ದಾರೆ ಸರ್ಕಾರದ ಮಟ್ಟದಲ್ಲಿ ಚರ್ಚಿಸಿ ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಚಿಕ್ಕನಾಯಕನಹಳ್ಳಿ ಕ್ಷೇತ್ರದ ಮಾಜಿ ಶಾಸಕ ಕೆ.ಎಸ್. ಕಿರಣ್ ಕುಮಾರ್ ಮಾತನಾಡಿ, ಮಳೆ ಆಶ್ರಿತ ಪ್ರದೇಶಗಳಲ್ಲಿ ಭದ್ರಾ ಮೇಲ್ದಂಡೆ ಹರಿಸುವ ಮೂಲಕ ಕುಡಿಯುವ ನೀರಿಗೆ ಹಾಗೂ ರೈತರ ಪಾಲಿಗೆ ಈ ಯೋಜನೆ ಆಶಾಕಿರಣವಾಗಲಿದೆ ಕಾಮಗಾರಿಯ ವಿಳಂಬ ಧೋರಣೆ ಯಿಂದಾಗಿ ರೈತರು ಪರಿತಪಿಸುವಂತೆ ಅಧಿಕಾರಿಗಳು ಆದಷ್ಟು ಶೀಘ್ರವಾಗಿ ಕಾಮಗಾರಿ ಪೂರ್ಣಗೊಳಿಸಬೇಕು ಹಾಗೂ ಯಾವ ಯಾವ ಕೆರೆಗಳಿಗೆ ಹೇಮಾವತಿ ಯೋಜನೆಯಲ್ಲಿ ನೀರು ಹರಿಸಲಾಗುತ್ತಿದೆ ಎಂದು ಪರಿಶೀಲಿಸಿ ಉಳಿದ ಕೆರೆಗಳಿಗೆ ಭದ್ರಾ ಮೇಲ್ದಂಡೆ ಮೂಲಕ ನೀರು ಹರಿಸುವ ಕೆಲಸವಾಗಬೇಕು ಎಂದು ತಿಳಿಸಿದರು.

ಎಚ್ ಲಿಂಗಪ್ಪ, ಚಂದ್ರಶೇಖರ್, ನೇರಳಗುಡ್ಡ ಶಿವಕುಮಾರ್, ಎಂಆರ್ ಶಶಿಧರಗೌಡ, ಸೂಡಾ ಮಾಜಿ ಅಧ್ಯಕ್ಷ ಗುಳಿಗೆನಹಳ್ಳಿ ನಾಗರಾಜು, ಮುಕುಂದಪ್ಪ, ಷಣ್ಮುಖಪ್ಪ, ಮುದ್ದುರಂಗೇಗೌಡ ಕಾಲೇಜಿನ ರಂಗನಾಥ್, ಎಸ್.ಎಲ್.ಗೋವಿಂದರಾಜು, ಎಚ್ ಗುರುಮೂರ್ತಿ ಗೌಡ, ಜಯರಾಮಯ್ಯ, ಪುಟ್ಟಕಾಮಣ್ಣ, ಶೇಷ ನಾಯ್ಕ, ಹೊಸಪಾಳ್ಯ ಸತ್ಯನಾರಾಯಣ, ಜೈಪ್ರಕಾಶ, ಬುಕ್ಕಾಪಟ್ಟಣ ಶಿವಕುಮಾರ, ಸೇರಿದಂತೆ ಸಾವಿರಾರು ಜನ ರೈತರು ಮುಖಂಡರು ಹಾಜರಿದ್ದರು.

# ರಿಯಾದ್ ಏರ್ಪೋರ್ಟ್ ಮೇಲೆ ಹೌತಿ ಬಂಡುಕೋರರಿಂದ ಮತ್ತೆ ದಾಳಿ

**ರಿಯಾದ್, ಅ.12:** ರಿಯಾದ್‌ನಲ್ಲಿರುವ ಕಿಂಗ್ ಖಾಲಿದ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಮೇಲೆ ಯೆಮೆನ್‌ನ ಹೌತಿ ಬಂಡುಕೋರರು ಕ್ಷಿಪಣಿ ದಾಳಿ ನಡೆಸಿದ ಮಾರನೇ ದಿನವೇ ಮತ್ತೊಂದು ಹೊಸ ದಾಳಿ ನಡೆಸಿದೆ. ಖಾಲೀದ್ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ಪ್ಯಾಸೆಂಜರ್ ಟರ್ಮಿನಲ್ ಮೇಲೆ ಮತ್ತೊಮ್ಮೆ ಭೀಕರ ದಾಳಿ ನಡೆಸಿದ್ದಾರೆ.

ಸೌದಿ ನಾಗರಿಕ ವಿಮಾನಯಾನ ಪ್ರಾಧಿಕಾರದ ಮಾಹಿತಿಯ ಪ್ರಕಾರ, ವಿಮಾನ ನಿಲ್ದಾಣದ ಟರ್ಮಿನಲ್ 4ಕ್ಕೆ ಕ್ಷಿಪಣಿ ಅಪ್ಪಳಿಸಿದ್ದು, ತೀವ್ರ ಬೆಂಕಿ ಕಾಣಿಸಿಕೊಂಡಿದೆ ಎನ್ನಲಾಗಿದೆ. ಈ ಘಟನೆಯಲ್ಲಿ ಒಬ್ಬರು ಸಾವನ್ನಪ್ಪಿದ್ದು, 11 ಜನರು ತೀವ್ರ ಗಾಯಗೊಂಡಿದ್ದಾರೆ ಎಂದು ವಿದೇಶಿ ಮಾಧ್ಯಮಗಳು ವರದಿ ಮಾಡಿವೆ.

ವಿಮಾನ ನಿಲ್ದಾಣದ ಸಮೀಪದಲ್ಲೇ ಸೌದಿ ವಾಯು ರಕ್ಷಣಾ ಪಡೆಗಳು ಕ್ರೂಸ್ ಕ್ಷಿಪಣಿಯೊಂದನ್ನು ಯಶಸ್ವಿಯಾಗಿ ತಡೆದು ನಾಶಪಡಿಸಿದೆ. ಒಂದರ ನಂತರ ಒಂದರಂತೆ ವಿಮಾನ ನಿಲ್ದಾಣದ ಮೇಲಾಗುತ್ತಿರುವ ದಾಳಿಯಾಗುತ್ತಿರುವ ನಿಟ್ಟಿನಲ್ಲಿ ರಿಯಾದ್ ಅಧಿಕಾರಿಗಳು ಕಿಂಗ್ ಖಾಲೀದ್ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಎಲ್ಲಾ ವಿಮಾನಗಳ ಹಾರಾಟ ಹಾಗೂ ಕಾರ್ಯಾಚರಣೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಿದ್ದಾರೆ.



ಇರಾನ್ ಯುದ್ಧ ಆರಂಭವಾದಾಗಿನಿಂದ ಹಾಗೂ ಕಳೆದ ಒಂದು ದಶಕದಲ್ಲೇ ಸೌದಿ ನೆಲದಲ್ಲಿ ನಡೆದ ಅತ್ಯಂತ ಮಾರಣಾಂತಿಕ ದಾಳಿ ಇದಾಗಿದೆ. ಶನಿವಾರ ನಡೆದ ಈ ಭೀಕರ ದಾಳಿಯಲ್ಲಿ 300ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದು, ಕೆಲವರ ಸ್ಥಿತಿ ಅತ್ಯಂತ ಗಂಭೀರವಾಗಿದೆ.

ಸಿಸಿಟಿವಿ ಕ್ಯಾಮರಾದಲ್ಲಿ ಸೆರೆಯಾಗಿದ್ದ ಭೀಕರ ದಾಳಿ ದೃಶ್ಯಗಳು ಸೋಶಿಯಲ್ ಮೀಡಿಯಾದಲ್ಲಿ ಹರಿದಾಡುತ್ತಿದೆ. ಚೆಕ್ಕಿಂಗ್‌ನಲ್ಲಿ ಪ್ರಯಾಣಿಕರು ಸಾಲಾಗಿ ಸಾಗುತ್ತಿದ್ದರು. ಈ ವೇಳೆ ಇದ್ದಕ್ಕಿದ್ದಂತೆ ದಾಳಿ ನಡೆದಿದೆ. ಈ ವೇಳೆ ಪ್ರಾಣ ಉಳಿಸಿಕೊಳ್ಳಲು ಚೆಲ್ಲಾಪಿಲ್ಲಿಯಾಗಿ ಓಡಿರುವ ದೃಶ್ಯಗಳು, ಸ್ಫೋಟದ ತೀವ್ರತೆಗೆ ಮೇಲ್ಛಾವಣಿಯ ಭಾಗಗಳು ಕುಸಿದುಬಿದ್ದಿರುವುದು ವಿಡಿಯೋದಲ್ಲಿ ಇದೆ.

ಕಳೆದ 24 ಗಂಟೆಗಳಲ್ಲಿ ಪೂರ್ವ ಭಾಗದಲ್ಲಿರುವ ದಮ್ಮಾಮ್ ವಿಮಾನ ನಿಲ್ದಾಣದ ಮೇಲಿನ ದಾಳಿ ಸೇರಿದಂತೆ ಅನೇಕ ದಾಳಿಗಳ ಜವಾಬ್ದಾರಿಯನ್ನು ಇರಾನ್ ಬೆಂಬಲಿತ ಗುಂಪು ಹೊತ್ತುಕೊಂಡಿದೆ. ಸೌದಿ ವಿಮಾನ ನಿಲ್ದಾಣವನ್ನು ಗುರಿಯಾಗಿಸಿಕೊಂಡಿರುವುದಾಗಿ ಬೆದರಿಕೆ ಹಾಕಿದೆ.

ಕ್ಷಿಪಣಿಗಳು ವಿಮಾನ ನಿಲ್ದಾಣದ ಟರ್ಮಿನಲ್ 3 ಮತ್ತು 4ಕ್ಕೆ ಅಪ್ಪಳಿಸಿವೆ. ದಾಳಿಯಲ್ಲಿ ಸೌದಿ ಅರೇಬಿಯಾದ ನಾಲ್ವರು, ಇಬ್ಬರು ಬಾಂಗ್ಲಾದೇಶಿಯರು, ಭಾರತ, ಅಮೆರಿಕ, ಈಜಿಪ್ಟ್, ಜೋರ್ಡಾನ್, ಸಿರಿಯಾ, ಸುಡಾನ್ ಮತ್ತು ಪ್ಯಾಲೆಸ್ತೀನ್‌ನ ತಲಾ ಒಬ್ಬ ಪ್ರಜೆ ಮೃತಪಟ್ಟಿದ್ದಾರೆ. ಈ ದಾಳಿಗೆ ತಕ್ಕ ಪ್ರತ್ಯುತ್ತರ ನೀಡಲಾಗುವುದು ಎಂದು ಸೌದಿ ನೇತೃತ್ವದ ಮಿಲಿಟರಿ ಒಕ್ಕೂಟ ತಿಳಿಸಿದೆ.

# ಹಾರ್ಮುಜ್ ಜಲಸಂಧಿ ಮೇಲೆ ಈಗಲೂ ನಮ್ಮದೇ ನಿಯಂತ್ರಣ: ಅಮೆರಿಕ ಹೇಳಿಕೆ ತಳ್ಳಿಹಾಕಿದ ಇರಾನ್

**ಇರಾನ್, ಅ.12:** ಹೊರ್ಮುಜ್ ಜಲಸಂಧಿಯಂತಹ ಆಯಕಟ್ಟಿನ ಪ್ರದೇಶದಲ್ಲಿ ಸಂಚಾರದ ಮೇಲಿನ ನಿಯಂತ್ರಣ ಮತ್ತು ಸಾಮಾನ್ಯ ಸರಕು ಸಾಗಣೆ ವ್ಯವಸ್ಥೆಯನ್ನು ಮರುಸ್ಥಾಪಿಸಲಾಗಿದೆ ಎಂಬ ವಾಷಿಂಗ್ಟನ್‌ನ ಹೇಳಿಕೆಗಳನ್ನು ಇರಾನ್ ತಳ್ಳಿಹಾಕಿದೆ.

ಸೋಮವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಸೋಮವಾರ ಮಾತನಾಡಿದ ಇರಾನ್ ವಿದೇಶಾಂಗ ಸಚಿವಾಲಯದ ವಕ್ತಾರ ಇಸ್ಮಾಯಿಲ್ ಬಘಾಯಿ, ಈ ಪ್ರಮುಖ ಇಂಧನ ಸಾಗಣೆ ಮಾರ್ಗದ ಮೇಲೆ ಟೆಹ್ರಾನ್ ಸಂಪೂರ್ಣ ನಿಯಂತ್ರಣವನ್ನು ಹೊಂದಿದೆ ಎಂದು ಪ್ರತಿಪಾದಿಸಿದರು. ಜೊತೆಗೆ, ವಿದೇಶಿ ಮಿಲಿಟರಿ ಆಕ್ರಮಣಶೀಲತೆ ಮತ್ತು ಆರ್ಥಿಕ ದಿಗ್ಬಂಧನಗಳು ಮುಂದುವರಿಯುವವರೆಗೂ ಈ ಪ್ರದೇಶದಲ್ಲಿ ಭದ್ರತೆ ಮರಳಲು ಸಾಧ್ಯವಿಲ್ಲ ಎಂದು ಅವರು ಎಚ್ಚರಿಸಿದರು.ಪರಿಸ್ಥಿತಿಯ ಕುರಿತಾದ ಅಮೆರಿಕದ ನಿಲುವನ್ನು ತಳ್ಳಿಹಾಕಿದ




ಬಘಾಯಿ, ಮಾರುಕಟ್ಟೆಯ ವಾಸ್ತವಿಕತೆಯು ವಾಷಿಂಗ್ಟನ್‌ನ ಅಧಿಕೃತ ಹೇಳಿಕೆಗಳಿಗೆ ವಿರುದ್ಧವಾಗಿದೆ ಎಂದು ಒತ್ತಿ ಹೇಳಿದರು. "ಅಮೆರಿಕನ್ನರ ಹೇಳಿಕೆಗಳು ನೆಲಮಟ್ಟದಲ್ಲಿ ನಮಗೆ ಕಾಣುತ್ತಿರುವ ವಾಸ್ತವಿಕತೆಗೆ ಹೊಂದಿಕೆಯಾಗುವುದಿಲ್ಲ," ಎಂದು ಬಘಾಯಿ ಹೇಳಿದರು. "ಹೊರ್ಮುಜ್ ಜಲಸಂಧಿ ಇನ್ನು ಮುಂದೆ ಪರಿಣಾಮಕಾರಿಯಾಗಿಲ್ಲ ಮತ್ತು ಇರಾನ್ ತನ್ನ ಪ್ರಭಾವವನ್ನು ಕಳೆದುಕೊಂಡಿದೆ ಎಂದು ಹೇಳುತ್ತಿರಬಹುದು; ಆದರೆ ನಾವು ನಮ್ಮದೇ ಆದ ಕ್ರಮಗಳನ್ನು ಮುಂದುವರಿಸುತ್ತಿದ್ದೇವೆ." ಎಂದು ಹೇಳಿದ್ದಾರೆ.

ಪಾಶ್ಚಿಮಾತ್ಯ ಮಾಧ್ಯಮಗಳ ವರದಿ ಕುರಿತು ಪ್ರತಿಕ್ರಿಯಿಸಿದ ಅವರು, ಜಾಗತಿಕ ಸರಕುಗಳ ಬೆಲೆ ಏರಿಕೆ ಮತ್ತು ನೌಕಾಯಾನದ ಅಸ್ಥಿರತೆಯ ಮೂಲ ಕಾರಣವನ್ನು ತಪ್ಪಾಗಿ ಬಿಂಬಿಸಲು ವಿದೇಶಿ ಮಾಧ್ಯಮಗಳು ಸಂಘಟಿತ ಅಭಿಯಾನ ನಡೆಸುತ್ತಿವೆ ಎಂದು ವಕ್ತಾರರು ಆರೋಪಿಸಿದರು. "ಹೌದು, ಕಾರಣ ಮತ್ತು ಪರಿಣಾಮಗಳ ಸ್ಥಾನವನ್ನು ಬದಲಾಯಿಸಲು ಪ್ರಯತ್ನಿಸುವ ಮಾಧ್ಯಮ ಅಭಿಯಾನವೊಂದು ನಡೆಯುತ್ತಿದೆ ಎಂಬುದು ನಮಗೆ ತಿಳಿದಿದೆ," ಎಂದು ಅವರು ಗಮನಸೆಳೆದರು. ಅಲ್ಲದೆ, "ಮಾರ್ಚ್ 21 ರ ಮೊದಲು ಹೊರ್ಮುಜ್ ಜಲಸಂಧಿಯು ಮುಕ್ತವಾಗಿತ್ತು" ಮತ್ತು ಪ್ರಸ್ತುತ ಉಂಟಾಗಿರುವ ಅಡಚಣೆಗಳು ವಿದೇಶಿ ಹಸ್ತಕ್ಷೇಪದ ನೇರ ಪರಿಣಾಮವಾಗಿದೆ ಎಂದು ಅವರು ಪುನರುಚ್ಚರಿಸಿದರು.

# ಇಂಧನ ಸ್ಥಾವರಗಳ ಮೇಲಿನ ದಾಳಿ ನಿಲ್ಲಿಸಲು ರಷ್ಯಾ-ಉಕ್ರೇನ್ ಒಪ್ಪಿಗೆ: ಟ್ರಂಪ್

**ವಾಷಿಂಗ್ಟನ್, ಅ.12:** ರಷ್ಯಾ ಮತ್ತು ಉಕ್ರೇನ್ ಪರಸ್ಪರರ ಇಂಧನ ಮೂಲಸೌಕರ್ಯಗಳ ಮೇಲಿನ ದಾಳಿ ನಡೆಸುವುದನ್ನು ನಿಲ್ಲಿಸುವುದಾಗಿ ಒಪ್ಪಿಕೊಂಡಿವೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ಈ ಬಗ್ಗೆ ಟ್ರೂತ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, 'ರಷ್ಯಾ ಮತ್ತು ಉಕ್ರೇನ್ ನಡುವಿನ ಯುದ್ಧದಲ್ಲಿ ಈಗ ಇಂಧನ ಕದನ ವಿರಾಮ ಜಾರಿಗೆ ಬಂದಿದೆ. ಎರಡೂ ಕಡೆಯವರು ಇದಕ್ಕೆ ಒಪ್ಪಿಕೊಂಡಿದ್ದಾರೆ. ಅದನ್ನು ಮುರಿಯಬೇಡಿ ಎಂದು ಹೇಳಿದ್ದಾರೆ.

ರಷ್ಯಾದಲ್ಲಿನ ಡೀಸೆಲ್ ಸಂಸ್ಕರಣಾಗಾರದ ಮೇಲೆ ದಾಳಿ ಮಾಡಿ ಜಾಗತಿಕ ಇಂಧನ ಅಭಾವಕ್ಕೆ ಕಾರಣರಾದ ಉಕ್ರೇನಿಯನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿಯನ್ನು ದೂಷಿಸಿರುವ ಟ್ರಂಪ್ ಅವರಿಂದ ಈ ಘೋಷಣೆ ಬಂದಿದೆ.

ದಾಳಿಗಳನ್ನು ನಿಲ್ಲಿಸುವ ಒಪ್ಪಂದವು ತಕ್ಷಣವೇ ಜಾರಿಗೆ ಬರಲಿದೆ ಮತ್ತು ಎರಡೂ ಕಡೆಯವರು ಇದಕ್ಕೆ ಒಪ್ಪಿದ್ದಾರೆ ಎಂದು ಟ್ರಂಪ್ ಹೇಳಿದ್ದಾರೆ. ಮತ್ತೊಂದೆಡೆ ಶ್ವೇತಭವನವು ಅಧ್ಯಕ್ಷ ಟ್ರಂಪ್ ಪೋಸ್ಟ್‌ಗೆ ಯಾವುದೇ ಸ್ಪಷ್ಟೀಕರಣ ನೀಡಿಲ್ಲ ಅಥವಾ ಯಾವುದೇ ಹೆಚ್ಚುವರಿ ಮಾಹಿತಿಯನ್ನು ಹಂಚಿಕೊಂಡಿಲ್ಲ. ಇದಕ್ಕೂ ಮೊದಲು, ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಉಕ್ರೇನ್ ಹೊಸ ಅಧ್ಯಕ್ಷರನ್ನು ಆಯ್ಕೆ ಮಾಡುವ ಸಮಯ ಬಂದಿದೆ ಎಂದು ಹೇಳಿದ್ದರು. ಏಕೆಂದರೆ ಪ್ರಸ್ತುತ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಅವರು ರಷ್ಯಾದೊಂದಿಗಿನ ತಮ್ಮ ದೇಶದ ಯುದ್ಧವನ್ನು ಕೊನೆಗೊಳಿಸಲು ಏನನ್ನು ಮಾಡಿಲ್ಲ. ಅಮೆರಿಕದಲ್ಲಿ ಡೀಸೆಲ್ ಬೆಲೆ ಏರಿಕೆಗೆ ಟ್ರಂಪ್ ಜೆಲೆನ್ಸ್ಕಿ ಅವರನ್ನು ದೂಷಿಸಿದ್ದರು.

# ಅಟ್ಲಾಂಟಿಕ್ ಅಥವಾ ಪೆಸಿಫಿಕ್ ಸಾಗರಕ್ಕೆ ಟ್ರಂಪ್ ಓಷನ್ ಎಂದು ಹೆಸರಿಡಿ

## ಮರುನಾಮಕರಣದ ಹವ್ಯಾಸ ಮುಂದುವರಿಸಿದ ಡೊನಾಲ್ಡ್ ಟ್ರಂಪ್

**ವಾಷಿಂಗ್ಟನ್, ಅ.12:** ಡೊನಾಲ್ಡ್ ಟ್ರಂಪ್ ಅವರು ಮರುನಾಮಕರಣದ ತಮ್ಮ ಹವ್ಯಾಸವನ್ನು ಮುಂದುವರಿಸಿದ್ದು, ಅಟ್ಲಾಂಟಿಕ್ ಅಥವಾ ಪೆಸಿಫಿಕ್ ಮಹಾಸಾಗರಕ್ಕೆ ತಮ್ಮ ಹೆಸರು ಅಥವಾ ಅಮೆರಿಕದ ಹೆಸರಿಡುವಂತೆ ಪ್ರಸ್ತಾಪಿಸಿದ್ದಾರೆ. ಇತ್ತೀಚೆಗಷ್ಟೇ ಕೃತಕ ಬುದ್ಧಿಮತ್ತೆ (ಎಐ) ತಂತ್ರಜ್ಞಾನದ ಹೆಸರನ್ನು ಸರ್ಕಾರಿ ಕಡತಗಳಲ್ಲಿ ಸೂಪರ್ ಇಂಟೆಲಿಜೆನ್ಸ್ (ಎಸ್‌ಐ) ಎಂದು ಬದಲಾಯಿಸಲು ಸೂಚಿಸಿದ್ದ ಟ್ರಂಪ್, ಇದೀಗ ಬೃಹತ್ ಸಾಗರಗಳ ಹೆಸರನ್ನೇ ಬದಲಿಸುವ ಇಚ್ಛೆ ವ್ಯಕ್ತಪಡಿಸಿದ್ದಾರೆ. ಆ ಕುರಿತ ವರದಿ ಇಲ್ಲಿದೆ:

ಟೆನೆಸ್ಸಿಯ ಕ್ಲಾರ್ಕ್ಸ್‌ವಿಲ್ಲೆಯಲ್ಲಿ ನಡೆದ ಚುನಾವಣಾ ರ್‍ಯಾಲಿಯಲ್ಲಿ ಮಾತನಾಡಿದ ಟ್ರಂಪ್, ಈಗಾಗಲೇ ಗಲ್ಫ್ ಆಫ್ ಮೆಕ್ಸಿಕೋ ಮತ್ತು ಲೇಕ್ ಒಂಟಾರಿಯೊ ಹೆಸರುಗಳನ್ನು ಬದಲಾಯಿಸಿರುವುದನ್ನು ನೆನಪಿಸುತ್ತಾ, "ನಮಗೆ ಈಗ ಒಂದು ನದಿ ಮತ್ತು ಒಂದು ಸಾಗರದ ಅಗತ್ಯವಿದೆ. ನನ್ನ ಅಧಿಕಾರಾವಧಿ ಮುಗಿಯುವ ಮುನ್ನ ನಮಗೊಂದು ನದಿ ಮತ್ತು ಒಂದು ಸಾಗರ ಇರಬೇಕು ಎಂದುಕೊಂಡಿದ್ದೇನೆ". ಹಾಗಾಗಿ, ಅಟ್ಲಾಂಟಿಕ್ ಅಥವಾ ಪೆಸಿಫಿಕ್ ಮಹಾಸಾಗರದ ಹೆಸರನ್ನು ಬದಲಾಯಿಸಿ ಟ್ರಂಪ್ ಓಷನ್ ಅಥವಾ ಓಷನ್ ಆಫ್ ದಿ ಅಮೆರಿಕಾಸ್ ಎಂದು ಇಡುವ ಆಲೋಚನೆ ಮಾಡುತ್ತಿದ್ದೇನೆ" ಎಂದು ಹೇಳಿದ್ದಾರೆ.

ಇದೇ ವೇಳೆ ನ್ಯೂಯಾರ್ಕ್‌ನ ಹಡ್ಸನ್ ನದಿ ಮತ್ತು ಮಿಸಿಸಿಪ್ಪಿ ನದಿಯ ಹೆಸರನ್ನು ತಾವು ಬದಲಾಯಿಸುವುದಿಲ್ಲ ಎಂದು ಅವರು ಸ್ಪಷ್ಟಪಡಿಸಿದ್ದಾರೆ. ಹಡ್ಸನ್ ನದಿಯನ್ನು ಶೋಧಿಸಿದ ಹೆನ್ರಿ ಹಡ್ಸನ್ ಅವರ ಗೌರವಾರ್ಥವಾಗಿ ಆ ಹೆಸರನ್ನು ಹಾಗೇ ಉಳಿಸುವುದಾಗಿ ಅವರು ತಿಳಿಸಿದ್ದಾರೆ.

ಏತನ್ಮಧ್ಯೆ, ಟ್ರಂಪ್ ಈ ಹಿಂದೆಯೂ ಇಂತಹ ನಿರ್ಧಾರಗಳನ್ನು ತೆಗೆದುಕೊಂಡಿದ್ದಾರೆ. ಜನವರಿ 2025 ರಲ್ಲಿ ಕಾರ್ಯನಿರ್ವಾಹಕ ಆದೇಶದ ಮೂಲಕ 'ಗಲ್ಫ್ ಆಫ್ ಮೆಕ್ಸಿಕೋ' ಹೆಸರನ್ನು 'ಗಲ್ಫ್ ಆಫ್ ಅಮೆರಿಕ' ಎಂದು ಬದಲಾಯಿಸಿದ್ದರು. ಅದೇ ರೀತಿ ಕಳೆದ ಆಗಸ್ಟ್‌ನಲ್ಲಿ ಕೆನಡಾ ಮತ್ತು ಅಮೆರಿಕ ನಡುವಿರುವ 'ಲೇಕ್ ಒಂಟಾರಿಯೊ' ಅನ್ನು 'ಲೇಕ್ ಅಮೆರಿಕ' ಎಂದು ಮರುನಾಮಕರಣ ಮಾಡಿದ್ದರು.

# ಕೊಹ್ಲಿ ನಿವೃತ್ತಿ ವಿವಾದದ ಬಗ್ಗೆ ಮೌನ ಮುರಿದ ವಾಸಿಮ್ ಜಾಫರ್

**ನವದೆಹಲಿ, ಅ.12:** ವಿರಾಟ್ ಕೊಹ್ಲಿ ಟೆಸ್ಟ್ ಕ್ರಿಕೆಟ್‌ಗೆ ದಿಢೀರ್ ನಿವೃತ್ತಿ ಘೋಷಿಸಿದ್ದು ಅಂದು ಕೋಟ್ಯಂತರ ಅಭಿಮಾನಿಗಳಿಗೆ ಆಘಾತ ತಂದಿತ್ತು. ಈ ಕುರಿತು ಮನಬಿಚ್ಚಿ ಮಾತನಾಡಿರುವ ಭಾರತದ ಮಾಜಿ ಆರಂಭಿಕ ಆಟಗಾರ ವಾಸಿಮ್ ಜಾಫರ್, ತಮ್ಮ ವಿದಾಯದ ವಿಚಾರದಲ್ಲಿ ಕೆಲವರು ನಡೆದುಕೊಂಡ ರೀತಿಯಿಂದ ಕೊಹ್ಲಿ ತುಂಬಾ ಬೇಸರಗೊಂಡಿದ್ದರು ಎಂಬ ಸ್ಫೋಟಕ ಸತ್ಯವನ್ನು ಬಹಿರಂಗಪಡಿಸಿದ್ದಾರೆ.



ಇಂಗ್ಲೆಂಡ್ ಪ್ರವಾಸಕ್ಕಾಗಿ ಕೊಹ್ಲಿ ಭರ್ಜರಿಯಾಗಿಯೇ ಸಿದ್ಧತೆ ನಡೆಸುತ್ತಿದ್ದರು. ಜೊತೆಗೆ ಇನ್ನೂ ಕೆಲ ವರ್ಷಗಳ ಕಾಲ ಸುದೀರ್ಘ ಮಾದರಿಯ ಕ್ರಿಕೆಟ್‌ನಲ್ಲಿ ಮುಂದುವರಿಯುವ ಮನಸ್ಥಿತಿಯಲ್ಲೂ ಅವರಿದ್ದರು. ಹೀಗಿರುವಾಗ, ಅಷ್ಟೊಂದು ದೊಡ್ಡ ಮಟ್ಟದ ಆಟಗಾರನ ವಿಷಯವನ್ನು ಕ್ರಿಕೆಟ್ ಮಂಡಳಿ ಇಷ್ಟೊಂದು ಹಗುರವಾಗಿ ನಿರ್ವಹಿಸುವ ಬದಲು ಇನ್ನಷ್ಟು ಗೌರವಯುತವಾಗಿ ನಡೆಸಿಕೊಳ್ಳಬೇಕಿತ್ತು ಎಂದು ಜಾಫರ್ ಅಭಿಪ್ರಾಯಪಟ್ಟಿದ್ದಾರೆ.

ತಮ್ಮ ಯೂಟ್ಯೂಬ್ ಚಾನೆಲ್‌ನಲ್ಲಿ ಮಾತನಾಡಿದ ವಾಸಿಮ್ ಜಾಫರ್, ವಿರಾಟ್ ಕೊಹ್ಲಿಯಂತಹ ಆಟಗಾರ ಸ್ಟೇಡಿಯಂಗೆ ಜನರನ್ನು ಆಕರ್ಷಿಸುತ್ತಾರೆ ಮತ್ತು ಅವರಿಗೆ ಅಪಾರ ಅಭಿಮಾನಿ ಬಳಗವಿದೆ. ಅವರು ಇನ್ನೂ ಹೆಚ್ಚು ಟೆಸ್ಟ್ ಕ್ರಿಕೆಟ್ ಆಡಬಹುದಿತ್ತು. ತೆರೆಮರೆಯಲ್ಲಿ ನಿಜವಾಗಿಯೂ ಏನು ನಡೆಯಿತು ಎಂಬುದು ಸ್ವತಃ ವಿರಾಟ್ ಬಾಯಿಂದ ಬರುವವರೆಗೆ ನಮಗೆ ಸ್ಪಷ್ಟತೆ ಸಿಗುವುದಿಲ್ಲ ಎಂದಿದ್ದಾರೆ.

ಟೆಸ್ಟ್ ಕ್ರಿಕೆಟ್‌ನಲ್ಲಿ ವಿರಾಟ್ ಕೊಹ್ಲಿ ಅವರ ಭವಿಷ್ಯದ ಬಗ್ಗೆ ಹಲವು ತಿಂಗಳುಗಳಿಂದ ಇದ್ದ ಗೊಂದಲ ಹಾಗೂ ಅನಿಶ್ಚಿತತೆಯ ಬಳಿಕ ಈ ನಿವೃತ್ತಿ ನಿರ್ಧಾರ ಹೊರಬಿದ್ದಿತ್ತು. ಅವರು ಇಂಗ್ಲೆಂಡ್ ಪ್ರವಾಸಕ್ಕೆ ತೆರಳಲು ಮತ್ತು ಟೆಸ್ಟ್ ಕ್ರಿಕೆಟ್ ಆಡುವುದನ್ನು ಮುಂದುವರಿಸಲು ಅತ್ಯಂತ ಉತ್ಸುಕರಾಗಿದ್ದರು. ರೆಡ್‌ಬಾಲ್ ಕ್ರಿಕೆಟ್ ಮೇಲೆ ತಮಗಿರುವ ಬದ್ಧತೆಯನ್ನು ಸಾಬೀತುಪಡಿಸಲು ಅವರು 2025ರ ಜನವರಿಯಲ್ಲಿ ದೆಹಲಿ ಪರ ರಣಜಿ ಟ್ರೋಫಿ ಪಂದ್ಯದಲ್ಲೂ ಕಣಕ್ಕಿಳಿದಿದ್ದರು.

ಆದರೆ, ವರದಿಗಳ ಪ್ರಕಾರ ಏಪ್ರಿಲ್ ತಿಂಗಳಲ್ಲಿ ಸಂಪೂರ್ಣ ಸನ್ನಿವೇಶವೇ ಬದಲಾಯಿತು. ಇಂಗ್ಲೆಂಡ್ ಪ್ರವಾಸಕ್ಕೆ ತಂಡವನ್ನು ಮುನ್ನಡೆಸಲು ಒಬ್ಬ ಯುವ ನಾಯಕನಿಗೆ ಮ್ಯಾನೇಜ್‌ಮೆಂಟ್ ಬೆಂಬಲ ನೀಡಲು ಬಯಸಿದೆ ಎಂದು ಆಯ್ಕೆದಾರರು ಕೊಹ್ಲಿಗೆ ತಿಳಿಸಿದರು. ಅಷ್ಟೇ ಅಲ್ಲದೆ, ಉಳಿದ ಎಲ್ಲ ಬ್ಯಾಟರ್‌ಗಳಂತೆ ಕೊಹ್ಲಿ ಅವರ ಸ್ಥಾನವನ್ನೂ ಒಂದೇ ರೀತಿಯ ಮಾನದಂಡಗಳಡಿ ನೋಡಲಾಗುತ್ತದೆ ಮತ್ತು ಅವರ ಫಾರ್ಮ್ ಆಧರಿಸಿಯೇ ತಂಡಕ್ಕೆ ಆಯ್ಕೆ ಮಾಡಲಾಗುತ್ತದೆ ಎಂದೂ ಅವರಿಗೆ ಸ್ಪಷ್ಟಪಡಿಸಲಾಗಿತ್ತು.

ಈ ಎಲ್ಲಾ ಬೆಳವಣಿಗೆಗಳಿಂದ ನಿರಾಶೆಗೊಂಡಿದ್ದ ಕೊಹ್ಲಿ, ತಮಗೆ ಇಂಗ್ಲೆಂಡ್ ಪ್ರವಾಸದ ಭಾಗವಾಗಲು ಇಷ್ಟವಿಲ್ಲ ಎಂದು ನಂತರ ಆಯ್ಕೆದಾರರಿಗೆ ತಿಳಿಸಿದರು. ಆಪ್ತರು ಮತ್ತು ಬಿಸಿಸಿಐನ ಕೆಲವು ಅಧಿಕಾರಿಗಳು ನಿರ್ಧಾರವನ್ನು ಮರುಪರಿಶೀಲಿಸುವಂತೆ ಮನವೊಲಿಸಲು ನಡೆಸಿದ ಪ್ರಯತ್ನಗಳು ನೀರಲ್ಲಿ ಹೋಮ ಮಾಡಿದಂತಾಯಿತು ಎಂದು ವರದಿಯಾಗಿದೆ.

ಇಂಗ್ಲೆಂಡ್ ಪ್ರವಾಸಕ್ಕಾಗಿ ಕೊಹ್ಲಿ ಭರ್ಜರಿಯಾಗಿ ಸಿದ್ಧತೆ ನಡೆಸುತ್ತಿದ್ದರು. ಹೀಗಿರುವಾಗ ಈ ಇಡೀ ಪರಿಸ್ಥಿತಿಯನ್ನು ನಿಭಾಯಿಸಿದ ರೀತಿ ಹಲವು ಪ್ರಶ್ನೆಗಳಿಗೆ ಕಾರಣವಾಯಿತು ಎಂದು ವಾಸಿಮ್ ಜಾಫರ್ ಅಭಿಪ್ರಾಯಪಟ್ಟಿದ್ದಾರೆ. ಅವರು ಪ್ರವಾಸಕ್ಕಾಗಿ ಸಜ್ಜಾಗುತ್ತಿದ್ದರು. ಈ ವಿಚಾರವನ್ನು ಇನ್ನಷ್ಟು ಉತ್ತಮವಾಗಿ ಹಾಗೂ ವ್ಯವಸ್ಥಿತವಾಗಿ ನಿರ್ವಹಿಸಬಹುದಿತ್ತು ಎಂದು ಜಾಫರ್ ತಿಳಿಸಿದ್ದಾರೆ. ಅಂತಿಮವಾಗಿ, ವಿರಾಟ್ ಕೊಹ್ಲಿ ಕಳೆದ ವರ್ಷ ಮೇ 12 ರಂದು ಟೆಸ್ಟ್ ಕ್ರಿಕೆಟ್‌ಗೆ ಅಧಿಕೃತವಾಗಿ ನಿವೃತ್ತಿ ಘೋಷಿಸಿದರು. ಇದರೊಂದಿಗೆ ಅವರ 14 ವರ್ಷಗಳ ಸುದೀರ್ಘ ಟೆಸ್ಟ್ ವೃತ್ತಿಜೀವನಕ್ಕೆ ತೆರೆಬಿದ್ದಿತು. ಅವರು ತಮ್ಮ 123 ಟೆಸ್ಟ್ ಪಂದ್ಯಗಳಲ್ಲಿ 30 ಶತಕಗಳೊಂದಿಗೆ ಒಟ್ಟು 9,230 ರನ್ ಗಳಿಸಿದ್ದಾರೆ.

# ಬೆಂಗಳೂರಿನಲ್ಲಿ ಫಿಬಾ ಡಬ್ಲ್ಯುಬಿಎಲ್ ಏಷ್ಯಾ ಕ್ರೀಡಾ ಸಂಭ್ರಮ: ಡಿಸಿಎಂ ಡಾ.ಜಿ.ಪರಮೇಶ್ವರ್

**ಬೆಂಗಳೂರು, ಅ.12:** ಕರ್ನಾಟಕದ ರಾಜಧಾನಿ ಸಿಲಿಕಾನ್ ಸಿಟಿ ಬೆಂಗಳೂರು ಮತ್ತೊಮ್ಮೆ ಜಾಗತಿಕ ಕ್ರೀಡಾ ನಕ್ಷೆಯಲ್ಲಿ ಮಿಂಚಲು ಸಜ್ಜಾಗಿದ್ದು, ಕ್ರೀಡಾಭಿಮಾನಿಗಳಿಗೆ ರಸದೌತಣ ನೀಡಲಿದೆ ಎಂದು ಉಪ ಮುಖ್ಯಮಂತ್ರಿಗಳು ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಚಿವ ಡಾ. ಜಿ. ಪರಮೇಶ್ವರ ಅವರು ತಿಳಿಸಿದರು.

ಇಂದು ಶ್ರೀ ಕಂಠೀರವ ಕ್ರೀಡಾಂಗಣದಲ್ಲಿನ ಕರ್ನಾಟಕ ಒಲಂಪಿಕ್ಸ್ ಭವನದಲ್ಲಿ ಮಾಧ್ಯಮದವರನ್ನುದ್ದೇಶಿಸಿ ಮಾತನಾಡಿದ ಅವರು, ಕರ್ನಾಟಕ ಸರ್ಕಾರ, ಭಾರತೀಯ ಬಾಸ್ಕೆಟ್‌ಬಾಲ್ ಫೆಡರೇಷನ್ ಮತ್ತು ಕರ್ನಾಟಕ ರಾಜ್ಯ ಬಾಸ್ಕೆಟ್‌ಬಾಲ್ ಸಂಸ್ಥೆಯ ಜಂಟಿ ಆಶ್ರಯದಲ್ಲಿ, ಅಂತಾರಾಷ್ಟ್ರೀಯ ಬಾಸ್ಕೆಟ್‌ಬಾಲ್ ಫೆಡರೇಷನ್ – ಫಿಬಾ ಹಾಗೂ ಫಿಬಾ ಏಷ್ಯಾದ ಸಂಯುಕ್ತಾಶ್ರಯದಲ್ಲಿ ಪ್ರತಿಷ್ಠಿತ 'ಫಿಬಾ ಮಹಿಳಾ ಬಾಸ್ಕೆಟ್‌ಬಾಲ್ ಲೀಗ್ ಏಷ್ಯಾ–2026' ಟೂರ್ನಿಯನ್ನು ಆಯೋಜಿಸಲಾಗಿದೆ.

ಈ ಪ್ರತಿಷ್ಠಿತ ಅಂತಾರಾಷ್ಟ್ರೀಯ ಚಾಂಪಿಯನ್‌ಷಿಪ್‌ಗೆ ನಗರದ ಕಂಠೀರವ ಒಳಾಂಗಣ ಸ್ಟೇಡಿಯಂ ಆತಿಥ್ಯ ವಹಿಸಲಿದ್ದು, ಅಕ್ಟೋಬರ್ 20 ರಿಂದ 25 ರವರೆಗೆ ರೋಮಾಂಚನಕಾರಿ ಪಂದ್ಯಗಳು ನಡೆಯಲಿವೆ ಎಂದು ತಿಳಿಸಿದರು.

**ಪ್ರಶಸ್ತಿಗಾಗಿ ಏಷ್ಯಾದ 6 ಚಾಂಪಿಯನ್ ಕ್ಲಬ್‌ಗಳ ಸೆಣಸಾಟ:** ಈ ಟೂರ್ನಿಯಲ್ಲಿ ಏಷ್ಯಾದ ವಿವಿಧ ದೇಶಗಳ ಅತ್ಯುನ್ನತ ವೃತ್ತಿಪರ ಮಹಿಳಾ ಬಾಸ್ಕೆಟ್‌ಬಾಲ್ ಕ್ಲಬ್ ತಂಡಗಳಾದ ಚೀನದ ಸಿಚುವಾನ್ ಯುಯಾಂದ ಮೀಲೆ ತಂಡ, ಜಪಾನಿನ ಡೆನ್ಸೊ ಐರಿಸ್ ತಂಡ, ದಕ್ಷಿಣ ಕೊರಿಯಾದ ಕೆ.ಬಿ. ಸ್ಟಾರ್ಸ್ ತಂಡ, ಸತತ 3 ನೇ ಆವೃತ್ತಿಯಲ್ಲಿ ಆಡುತ್ತಿರುವ ಏಕೈಕ ಚೈನೀಸ್ ತೈಪೆಯ ಕ್ಯಾಥೆ ಲೈಫ್ ಟೈಗರ್ಸ್ ತಂಡ, ಫಿಲಿಫೈನ್ಸ್

ಅಕಾರಿ ಸ್ಪಾರ್ಕ್ಸ್ ತಂಡ ಮತ್ತು ಭಾರತದ ಚಾಂಪಿಯನ್ ಕ್ಲಬ್‌ನ ಭಾರತೀಯ ರೈಲ್ವೇಸ್ ತಂಡಗಳು ಪ್ರಶಸ್ತಿಗಾಗಿ ಸೆಣಸಾಡಲಿವೆ.

ಎಲ್ಲಾ ಪಂದ್ಯಗಳು ಕಂಠೀರವ ಒಳಾಂಗಣ ಕ್ರೀಡಾಂಗಣದಲ್ಲಿ, ಪ್ರತಿದಿನ ಎರಡು ಪಂದ್ಯಗಳು ನಡೆಯಲಿದ್ದು, ಮೊದಲ ಪಂದ್ಯ ಸಂಜೆ 4 ಗಂಟೆಗೆ ಹಾಗೂ ಎರಡನೇ ಪಂದ್ಯ ರಾತ್ರಿ 7 ಗಂಟೆಗೆ ಪ್ರಾರಂಭವಾಗಲಿವೆ ಎಂದು ತಿಳಿಸಿದರು.

**ಮತ್ತೊಮ್ಮೆ ಬಾಸ್ಕೆಟ್‌ಬಾಲ್ 'ಹಬ್' ಆಗಿ ಮಿಂಚಲಿದೆ ನಮ್ಮ ಬೆಂಗಳೂರು:** ಉದ್ಯಾನನಗರಿ, ವಿಜ್ಞಾನನಗರಿ ಎನಿಸಿಕೊಂಡಿರುವ ಬೆಂಗಳೂರು ಈಗ ಬಾಸ್ಕೆಟ್‌ಬಾಲ್ ಕ್ರೀಡೆಯ ಪ್ರಮುಖ ಕೇಂದ್ರವಾಗಿ ಹೊರಹೊಮ್ಮಿದೆ. 2004 ರಿಂದಲೂ ಕರ್ನಾಟಕ ಸರ್ಕಾರದ ಸಹಯೋಗದೊಂದಿಗೆ ಕರ್ನಾಟಕ ರಾಜ್ಯ ಬಾಸ್ಕೆಟ್‌ಬಾಲ್ ಸಂಸ್ಥೆಯು ಅನೇಕ ಫಿಬಾ ಏಷ್ಯಾ ಟೂರ್ನಿಗಳನ್ನು ಯಶಸ್ವಿಯಾಗಿ ಸಂಘಟಿಸಿಕೊಂಡು ಬಂದಿದೆ. ಒಂದೇ ತಾಣದಲ್ಲಿ ಅತಿ ಹೆಚ್ಚು ಅಂತಾರಾಷ್ಟ್ರೀಯ ಮಟ್ಟದ




ಬಾಸ್ಕೆಟ್‌ಬಾಲ್ ಪಂದ್ಯಾವಳಿಗಳನ್ನು ಆಯೋಜಿಸಿದ ಹೆಗ್ಗಳಿಕೆ ಕಂಠೀರವ ಒಳಾಂಗಣ ಸ್ಟೇಡಿಯಂಗೆ ಸಲ್ಲುತ್ತದೆ ಎಂದರು.

**ಏಷ್ಯನ್ ಗೇಮ್ಸ್‌ನಲ್ಲಿ ಪದಕ ಪಡೆದ ಕ್ರೀಡಾಪಟುಗಳ ಸಾಧನೆ ಶ್ಲಾಘನೀಯ :** ಇತ್ತೀಚೆಗೆ ಏಷ್ಯನ್ ಗೇಮ್ಸ್ ನಲ್ಲಿ 85 ಜನ ಕ್ರೀಡಾಪಟುಗಳು ಪದಕಗಳನ್ನು ಪಡೆದು ರಾಷ್ಟ್ರಕ್ಕೆ ಕೀರ್ತಿ ತಂದಿದ್ದಾರೆ. ಅದರಲ್ಲಿ ಕರ್ನಾಟಕದ 8 ಜನ ವಿವಿಧ ಕ್ರೀಡೆಗಳಲ್ಲಿ ಪದಕಗಳನ್ನು ಪಡೆದಿದ್ದಾರೆ. ಎಲ್ಲಾ ಕ್ರೀಡಾ ಪಟುಗಳ ಸಾಧನೆ ಶ್ಲಾಘನೀಯವಾಗಿದೆ ಎಂದು ತಿಳಿಸಿದ ಉಪ ಮುಖ್ಯಮಂತ್ರಿಳು, ನಮ್ಮ ರಾಜ್ಯ ಕ್ರೀಡೆಗೆ ಎಲ್ಲಾ ರೀತಿಯ ಪ್ರೋತ್ಸಾಹ ನೀಡುತ್ತಿದೆ. ಉತ್ತಮ ದರ್ಜೆಯ ಕ್ರೀಡಾಂಗಣ ನಿರ್ಮಾಣ, ರಾಷ್ಟ್ರೀಯ ಅಂತರರಾಷ್ಟ್ರೀಯ ಮಟ್ಟದಲ್ಲಿ ಭಾಗವಹಿಸುವ ಕ್ರೀಡಾಪಟುಗಳಿಗೆ ಉತ್ತಮ ದರ್ಜೆಯ ಕ್ರೀಡಾ ಸಲಕರಣೆಗಳನ್ನು ಒದಗಿಸಲು ಕ್ರಮವಹಿಸಲಾಗಿದೆ ಎಂದು ತಿಳಿಸಿದರು.

ಪತ್ರಿಕಾ ಗೋಷ್ಠಿಯಲ್ಲಿ ಕರ್ನಾಟಕ ರಾಜ್ಯ ಬ್ಯಾಸ್ಕೆಟ್ ಬಾಲ್ ಅಸೋಸಿಯೇಷನ್ ಅಧ್ಯಕ್ಷ ಬಿ. ದಯಾನಂದ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಕಾರ್ಯದರ್ಶಿ ನವೀನ್ ರಾಜ್ ಸಿಂಗ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಆಯುಕ್ತ ಎಂ.ಎನ್. ಅನುಚೇತ್ ಹಾಜರಿದ್ದರು

> ಬೆಂಗಳೂರಿಗೆ ಮತ್ತೊಂದು ಫಿಬಾ ಟೂರ್ನಿ ಆಯೋಜಿಸುವ ಅವಕಾಶ ಲಭಿಸಿರುವುದು ಕರ್ನಾಟಕದ ಪಾಲಿಗೆ ಹೆಮ್ಮೆಯ ವಿಷಯ. ಇದು ಕ್ರೀಡೆಗೆ ನಾವು ನೀಡುತ್ತಿರುವ ಉತ್ತೇಜನ ಹಾಗೂ ಜಾಗತಿಕ ಕ್ರೀಡಾ ಭೂಪಟದಲ್ಲಿ ಬೆಂಗಳೂರಿನ ಸ್ಥಾನವನ್ನು ಇನ್ನಷ್ಟು ಬಲಪಡಿಸಲಿದೆ. ಯುವ ಕ್ರೀಡಾಪಟುಗಳು ವಿಶ್ವದರ್ಜೆಯ ಆಟಗಾರರಿಂದ ಸ್ಫೂರ್ತಿ ಪಡೆಯಲು ಇದೊಂದು ಉತ್ತಮ ವೇದಿಕೆ.
>
> **-ಡಾ.ಜಿ.ಪರಮೇಶ್ವರ,** । ಉಪಮುಖ್ಯಮಂತ್ರಿ

> ಏಷ್ಯಾದ ಅತ್ಯುತ್ತಮ ಮಹಿಳಾ ಕ್ಲಬ್ ತಂಡಗಳನ್ನು ಒಂದೇ ವೇದಿಕೆಗೆ ತರಲು 'ಫಿಬಾ ಮಹಿಳಾ ಬಾಸ್ಕೆಟ್‌ಬಾಲ್ ಲೀಗ್ ಏಷ್ಯಾ' ಪ್ರಮುಖ ವೇದಿಕೆಯಾಗಿದೆ. ಕರ್ನಾಟಕ ಸರ್ಕಾರದ ಸಹಕಾರದೊಂದಿಗೆ ನಡೆಯುತ್ತಿರುವ ಈ ಟೂರ್ನಿಯು ಏಷ್ಯನ್ ಬಾಸ್ಕೆಟ್‌ಬಾಲ್ ಕ್ಯಾಲೆಂಡರ್‌ನಲ್ಲಿ ಭಾರತದ ಸ್ಥಾನವನ್ನು ಮತ್ತಷ್ಟು ಬಲಪಡಿಸಲಿದೆ.
>
> **-ಡಾ.ಕೆ.ಗೋವಿಂದರಾಜ್** । ಫಿಬಾ ಏಷ್ಯಾ ಅಧ್ಯಕ್ಷ, ಕಾರ್ಯದರ್ಶಿ, ಕರ್ನಾಟಕ ರಾಜ್ಯ ಬಾಸ್ಕೆಟ್‌ಬಾಲ್ ಸಂಸ್ಥೆ